# ಕರಾವಳಿ ತರಂಗಿಣಿ

ಕಡಲ ಕಿನಾರೆಯಿಂದ ಕೆಂಪು ಕೋಟೆಯವರೆಗೆ..

ಕನ್ನಡ ವಾರಪತ್ರಿಕೆ


**ಸುಭಾಷಿತ:**

ಆಸ್ತಿ ಅಂತಸ್ತಿನ ದರ್ಪದಲಿ ತೇಲಬೇಡ..
ರೂಪವಂತನೆಂದು ಜಂಭ ಪಡಬೇಡ..
ಉನ್ನತಧಿಕಾರಿಯೆಂದು ಮೆರೆಯ ಬೇಡ..
ಮೇಲು ಕೀಳೆಂದು ಬೇಧ ಮಾಡಬೇಡ..
ಸಂಸ್ಕಾರ ಸಂಸ್ಕೃತಿಯನ್ನು ತುಳಿಯಬೇಡ..
ರಾಕ್ಷಸನಂತೆ ಎಂದಿಗೂ ನೀ ವರ್ತಿಸಬೇಡ..
ತಾಯಿ ಗರ್ಭದಿ ನೀನು ಬಂದಿರುವೆ..
ಭೂಗರ್ಭಕೆ ಕೊನೆಗೆ ಸೇರುವೆ..
ಯಾವುದು ನಿನ್ನದಲ್ಲದ ಈ ಜಗದಲಿ..
ನಾಲ್ಕು ಹಿಡಿ ಮಣ್ಣು ಮಾತ್ರ ಶಾಸ್ವತ..
**ಭಗವಾನ್ ಶ್ರೀಕೃಷ್ಣ**




PRGI No: KNKAN/25/A2498 www.karavalitharangini.com KARAVALI THARANGINI KANNADA Weekly Dakshina Kannada ದಿನಾಂಕ: 28-11-2025 to 04-12-2025 ಬೆಲೆ:10-00 ಸಂಪುಟ–1 ಸಂಚಿಕೆ–9 ಪುಟಗಳು–6







**ಅಯೋಧ್ಯೆಯಲ್ಲಿ ಭವ್ಯ ರಾಮ ಮಂದಿರದ ನಿರ್ಮಾಣ ಕಾರ್ಯ ಪೂರ್ಣಗೊಂಡಿರುವ ಹಿನ್ನೆಲೆ, ರಾಮ ಮತ್ತು ಸೀತೆಯ ವಿವಾಹವಾದ ದಿನದ ಶುಭ ಮುಹೂರ್ತದಲ್ಲಿ ಅಯೋಧ್ಯೆಯಲ್ಲಿನ ಭವ್ಯ ಶ್ರೀ ರಾಮ ಮಂದಿರದ 191 ಅಡಿ ಎತ್ತರದ ಶಿಖರದ ಮೇಲೆ ಭಗವಾಧ್ವಜವನ್ನು ಪ್ರಧಾನಿ ನರೇಂದ್ರ ಮೋದಿ ಮತ್ತು ರಾಷ್ಟ್ರೀಯ ಸ್ವಯಂಸೇವಕ ಸಂಘದ ಮುಖ್ಯಸ್ಥ ಮೋಹನ್ ಭಾಗವತ್ ಅವರು ಹಾರಿಸಿ ಐತಿಹಾಸಿಕ ಕ್ಷಣಕ್ಕೆ ಸಾಕ್ಷಿಯಾದರು. ಈ ಭಗವಾಧ್ವಜವು 10 ಅಡಿ ಎತ್ತರ ಮತ್ತು 20 ಅಡಿ ಉದ್ದವಿದ್ದು, ತ್ರಿಕೋನಾಕಾರದಲ್ಲಿದೆ. ಹಾಗೆಯೇ ಧ್ವಜದಲ್ಲಿ ಓಂ, ಸೂರ್ಯ ಮತ್ತು ಕೋವಿದಾರ ಮರದ ಪವಿತ್ರ ಚಿಹ್ನೆಗಳನ್ನು ಚಿತ್ರಿಸಲಾಗಿದೆ.**

## ಮೋದಿ ಯಾಕೆ ಗೊಹತ್ಯೆ ನಿಷೇಧ ಮಾಡುತ್ತಿಲ್ಲ: ದಯಾನಂದ ಸ್ವಾಮಿಜಿ



ಉಡುಪಿ : ಗುಜರಾತ್ ಮುಖ್ಯಮಂತ್ರಿಯಾಗಿದ್ದಾಗ ಕೇಂದ್ರ ಸರಕಾರದ ಗೋಮಾಂಸ ರಫ್ತು ಹಾಗೂ ಗೋಹತ್ಯೆ ನಿಷೇಧ ಮಾಡದ ಬಗ್ಗೆ ಟೀಕಿಸಿದ್ದ ನರೇಂದ್ರ ಮೋದಿ, ಮೂರು ಬಾರಿ ಪ್ರಧಾನಿಯಾದರೂ ಇನ್ನೂ ಯಾಕೆ ಗೋಹತ್ಯೆಯನ್ನು ದೇಶದಲ್ಲಿ ನಿಷೇಧ ಮಾಡುತ್ತಿಲ್ಲ ಎಂದು ವಿಶ್ವಪ್ರಾಣಿ ಕಲ್ಯಾಣ ಮಂಡಳಿ ಅಧ್ಯಕ್ಷ, ಬೆಂಗಳೂರು ವಿಶ್ವ ಗೋರಕ್ಷಾ ಮಹಾಪೀಠದ ದಯಾನಂದ ಸ್ವಾಮೀಜಿ ಪ್ರಶ್ನಿಸಿದ್ದಾರೆ. ಉಡುಪಿಯಲ್ಲಿ ನಡೆದ ಪತ್ರಿಕಾ ಗೋಷ್ಠಿಯಲ್ಲಿ ಮಾತನಾಡಿದ ಅವರು, ದುರಂತ ಅಂದರೆ ಮೋದಿ ಅವಧಿಯಲ್ಲಿ ಮೊದಲಿಗಿಂತ ಹೆಚ್ಚಿನ ಪ್ರಮಾಣದಲ್ಲಿ ಗೋಮಾಂಸ ರಫ್ತು ಆಗುತ್ತಿದೆ. ಭಾರತ ಗೋಮಾಂಸ ರಫ್ತಿನಲ್ಲಿ ಇಡೀ ಜಗತ್ತಿನಲ್ಲಿಯೇ ಇಂದು ಎರಡನೇ ಸ್ಥಾನದಲ್ಲಿದೆ ಭಾರತದಿಂದ ಪ್ರತಿನಿತ್ಯ ಲಕ್ಷಾಂತರ ಹಸು, ಕರು, ಎತ್ತು, ಎಮ್ಮೆ, ಕೋಣ ಮುಂತಾದ ಗೋವಂಶ ಪ್ರಾಣಿಗಳನ್ನು **3ನೇ ಪುಟಕ್ಕೆ....**

## ಶತಮಾನಗಳಷ್ಟು ಹಳೆಯ ಗಾಯ ಗುಣವಾಗುತ್ತಿದೆ – ಮೋದಿಜಿ



ಅಯೋಧ್ಯೆ: ಭವ್ಯ ಶ್ರೀರಾಮ ಮಂದಿರದ ಮೇಲೆ ಧರ್ಮಧ್ವಜ ಹಾರಾಡುವ ಮೂಲಕ 500 ವರ್ಷಗಳಷ್ಟು ಹಳೆಯದಾದ ಸಂಕಲ್ಪ ಅಂತಿಮವಾಗಿ ಈಡೇರಿತು. ಇದರೊಂದಿಗೆ ಶತಮಾನಗಳಷ್ಟು ಹಳೆಯ ಗಾಯ ವಾಸಿಯಾಗುತ್ತಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಬಣ್ಣಿಸಿದ್ದಾರೆ. ಭವ್ಯ ರಾಮ ಮಂದಿರದ ಮೇಲೆ ಕೇಸರಿ ಧ್ವಜ ಹಾರಿಸಿದ ಬಳಿಕ ಸಭೆಯನ್ನುದ್ದೇಶಿಸಿ ಮಾತನಾಡಿದ ಅವರು, "ಈ ಕ್ಷಣ ಯುಗದಂತೆ ಭಾಸವಾಗುತ್ತಿದೆ. ಅಯೋಧ್ಯೆ ಮತ್ತೊಂದು ಐತಿಹಾಸಿಕ ಮೈಲಿಗಲ್ಲಿಗೆ ಸಾಕ್ಷಿಯಾಗುತ್ತಿದೆ. **3ನೇ ಪುಟಕ್ಕೆ..**

## ದೆಹಲಿಗೆ ಕರೆಸಿ ತೀರ್ಮಾನ – ಖರ್ಗೆ

ಬೆಂಗಳೂರು : ದೆಹಲಿಗೆ ಸಿಎಂ ಸಿದ್ದರಾಮಯ್ಯ ಹಾಗೂ ಡಿಸಿಎಂ ಡಿ.ಕೆ.ಶಿವಕುಮಾರ್ ಅವರನ್ನು ಕರೆಸಿ, ಹೇಗೆ ಮುಂದುವರೆಯಬೇಕು ಎಂದು ತೀರ್ಮಾನ ಮಾಡುತ್ತೇವೆ ಎಂದು ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಸ್ಪಷ್ಟಪಡಿಸಿದ್ದಾರೆ. ಸದಾಶಿವನಗರ ನಿವಾಸದಲ್ಲಿ ಮಾಧ್ಯಮ ಪ್ರತಿನಿಧಿಗಳೊಂದಿಗೆ ಮಾತನಾಡಿದ ಅವರು, ನಾನು ದೆಹಲಿಗೆ ಹೋದ ಮೇಲೆ ಮಾತುಕತೆ ನಡೆಯಲಿದೆ. ಪ್ರಮುಖ ಮೂರ್ನಾಲ್ಕು ಜನರನ್ನು ಕರೆಸಿ ಮಾತನಾಡುತ್ತೇನೆ. ಹೇಗೆ ಮುಂದುವರೆಯಬೇಕೆಂದು ತೀರ್ಮಾನ ಮಾಡ್ತೇನೆ. ಸಿಎಂ, ಡಿಸಿಎಂ ಅವರೆಲ್ಲರನ್ನು ಕರೆಸಿಯೇ ಮಾತನಾಡ್ತೇನೆ. ಎಲ್ಲವನ್ನೂ ಸೆಟಲ್ ಮಾಡುತ್ತೇವೆ ಎಂದರು. ಎಐಸಿಸಿ ಅಧ್ಯಕ್ಷ ದೆಹಲಿಗೆ ತೆರಳುವ ಹಿನ್ನೆಲೆಯಲ್ಲಿ, ಖರ್ಗೆ ನಿವಾಸಕ್ಕೆ ಹಲವು ನಾಯಕರ **3ನೇ ಪುಟಕ್ಕೆ....**




ಕ್ಷಣ ಕ್ಷಣದ ಸುದ್ದಿಗಳಿಗಾಗಿ
ಕರಾವಳಿ ತರಂಗಿಣಿ
ಪತ್ರಿಕಾ ಬಳಗದಿಂದ
ಅಂತರ್ಜಾಲ ಮಾಧ್ಯಮ
www.karavalitharangini.com
ಕರಾವಳಿ ತರಂಗಿಣಿ
ಮಂಗಳೂರು








# ಸಂಪಾದಕೀಯ

ಕರಾವಳಿ ತರಂಗಿಣಿ

## ಗ್ಯಾರಂಟಿ ಗಮತ್ತು...

– ಲಲಿತಶ್ರೀ ಪ್ರೀತಮ್ ರೈ



ಒಂದು ವರ್ಗದವರಿಂದ ತೆರಿಗೆ ರೂಪದಲ್ಲಿ ಹಣ ಕಿತ್ತು ಇನ್ನೊಂದು ವರ್ಗಕ್ಕೆ ಗ್ಯಾರಂಟಿ ರೂಪದಲ್ಲಿ ಕೊಡುತ್ತಿದ್ದಾರೆ ಎನ್ನುವ ಆರೋಪ ಸಿದ್ದರಾಮಯ್ಯ ಸರಕಾರದ ಮೇಲೆ ವಿರೋದ ಪಕ್ಷಗಳ ಜೊತೆಗೆ ಜನಸಾಮಾನ್ಯರ ಕಡೆಯಿಂದಾನೂ ಕೇಳಿ ಬರುತ್ತಾ ಇದೆ. ಇತ್ತೀಚೆಗೆ ಗೃಹಲಕ್ಷ್ಮಿ ಯೋಜನೆಯಡಿ ಬಂದ ಹಣದಲ್ಲಿ ಗ್ರಾಮಸ್ಥರಿಗೆ ಹೋಳಿಗೆ ಊಟ ಹಾಕಿದ ಬೆಳಗಾವಿ ಜಿಲ್ಲೆಯ ರಾಯಬಾಗ ತಾಲ್ಲೂಕಿನ ಸುಟ್ಟಟ್ಟಿಯ ವೃದ್ಧೆ ಅಕ್ಕಾತಾಯಿ ಲಂಗೂಟಿ ಎನ್ನುವ ಸುದ್ದಿ ಇದಕ್ಕೆ ಪುಷ್ಟಿ ನೀಡುತ್ತಿದೆ. ಈ ಗ್ಯಾರಂಟಿ ನಿಜವಾಗಿಯೂ ಇಂತಹ ಜನರಿಗೆ ಅಗತ್ಯವೇ ಎನ್ನುವ ಪ್ರಶ್ನೆಯನ್ನು ಸಿದ್ದರಾಮಯ್ಯನ್ನನ್ನೂ ಸೇರಿಸಿ ಪಕ್ಷದ ನಾಯಕರು ತಮಗೆ ತಾವೇ ಕೇಳಿಕೊಳ್ಳಬೇಕಾಗಿದೆ. ಹಳ್ಳಿಗಳಲ್ಲಿ ತಮಗೆ ಬರುವ ಅನ್ನಭಾಗ್ಯದ ಅಕ್ಕಿಯನ್ನು ಮಾರುತ್ತಿದ್ದಾರೆ ಜನ. ಅಂದರೆ ಅವರಿಗೆ ಆ ಅಕ್ಕಿಯ ಅಗತ್ಯ ಇಲ್ಲ. ಇನ್ನು ಒಂದು ಹೆಂಗಸು ಬರುವ ಹಣವನ್ನು ಉಳಿತಾಯ ಮಾಡಿ ಹೋಳಿಗೆ ಊಟ ಹಾಕಿಸುವಷ್ಟು ಸಿರಿವಂತಳಾದರೆ ಅಂತವರಿಗೆ ಯಾಕೆ ಬೇಕು ಗ್ಯಾರಂಟಿಯ ಹಣ. ಎಷ್ಟೋ ಕಡೆ ಹಲವಾರು ಎಕರೆ ಭೂಮಿ ಹೊಂದಿರುವ, ಕೋಟಿಗಟ್ಟಲೆ ಆಸ್ತಿ ಹೊಂದಿರುವ ಹೆಂಗಸರ ಅಕೌಂಟಿಗೆ ಬಂದು ಬೀಳುತ್ತಿದೆ ಈ ಗೃಹಲಕ್ಷ್ಮಿಯ ಹಣ. ಅವರು ಆ ಹಣದಿಂದ ತನ್ನ ಸಂಸಾರವನ್ನು ಸಾಕಿ ಸಲಹಬೇಕಾಗಿಲ್ಲ. ನಮ್ಮ ಮುಖ್ಯಮಂತ್ರಿ ಸಿದ್ದರಾಮಯ್ಯನವರು ಹೇಳುತ್ತಾರೆ "ಗೃಹಲಕ್ಷ್ಮಿಯರಿಗೆ ಬೆಲೆಯೇರಿಕೆಯ ಬಿಸಿ ತಟ್ಟದಿರಲಿ ಎಂಬ ಸದುದ್ದೇಶದಿಂದ ನಾವು ಜಾರಿಗೊಳಿಸಿರುವ ಗೃಹಲಕ್ಷ್ಮಿ ಯೋಜನೆ ಇಂದು ಬಹಳಷ್ಟು ಕುಟುಂಬಗಳ ಪಾಲಿಗೆ ಅಕ್ಷರಶಃ ವರದಾನವಾಗಿದೆ. ಗೃಹಲಕ್ಷ್ಮಿಯ ಹಣ ಮಕ್ಕಳ ವಿದ್ಯಾಭ್ಯಾಸ, ಮನೆಗೆ ದಿನಸಿ, ಹಬ್ಬಕ್ಕೆ ಬಟ್ಟೆ, ಆಸ್ಪತ್ರೆ ಖರ್ಚು ವೆಚ್ಚ ಭರಿಸಲು ಬಳಕೆಯಾಗುತ್ತಿದೆ" ಆದರೆ ನಮ್ಮ ಸಿ ಎಮ್ ಹೇಳಿರುವ ಹಾಗೇ ಈ ಗೃಹಲಕ್ಷ್ಮಿ ಹಣ ಬೆಲೆ ಏರಿಕೆಯ ಬಿಸಿ ತಟ್ಟಿರುವ, ಅವಶ್ಯಕತೆಗಳನ್ನು ಪೂರೈಸಿಕೊಳ್ಳಲಾಗದ ಮನೆಯವರಿಗೆ ಮಾತ್ರ ಸಿಗುತ್ತಿರುವುದಲ್ಲ. ಉದಾಹರಣೆಗೆ ಕೆಲವು ಹೆಂಗಸರ ದುಡ್ಡು ಸೀದಾ ಬ್ಯೂಟಿ ಪಾರ್ಲರ್‌ಗಳಿಗೂ ಹೋಗುತ್ತಿದೆ. ಈ ಬ್ಯೂಟಿ ಪಾರ್ಲರ್ ಹೆಂಗಸರ ಅವಶ್ಯಕತೆಯನ್ನು ಯಾವ ರೀತಿ ಪೂರೈಸುತ್ತಿದೆ ಎನ್ನುವುದು ಯೋಚಿಸಬೇಕಾಗಿರುವುದು. ಮದ್ಯಮ ವರ್ಗದ ಜನ ಹೊಟ್ಟೆ ಬಟ್ಟೆ ಕಟ್ಟಿ ತೆರಿಗೆ ಪಾವತಿಸುತ್ತಾರೆ. ಎಷ್ಟೋ ಸಲ ಸಾಲ ಮಾಡಿ ತೆರಿಗೆ ಪಾವತಿ ಮಾಡುವ ಸಂದರ್ಭಗಳೂ ಕೂಡ ಇದೆ. ಅಂತಹ ಕಷ್ಟದ ಹಣವನ್ನು ಸರಕಾರ ಅಭಿವೃದ್ಧಿಯ ಬದಲು ಜನರ ಶೋಕಿಗೆ ಖರ್ಚು ಮಾಡುತ್ತಿರುವುದು ಬೇಜಾರಿನ ಸಂಗತಿ. ಅಂದ ಮಾತ್ರಕ್ಕೆ ನೂರರಲ್ಲಿ ನೂರು ಜನ ಶೋಕಿಗೆ ಬಳಸುತ್ತಿದ್ದಾರೆ ಎಂದಲ್ಲ ಐವತ್ತರಷ್ಟು ಜನ ತಮ್ಮ ಅವಶ್ಯಕತೆಗಳಿಗೋಸ್ಕರ ಗ್ಯಾರಂಟಿ ಉಪಯೋಗಿಸಕೊಳ್ಳುವವರು ಇದ್ದಾರೆ. ಅಂತವರಿಗೆ ಇದರ ಅಗತ್ಯ ಇದೆ. ಆದರೆ ಅಗತ್ಯವೇ ಇಲ್ಲದವರಿಗೆ ಯಾಕೆ ಬೇಕು. ಒಂದು ಕಡೆ ವಿದ್ಯುತ್ ಪುಕ್ಕಟೆಯಾಗಿ ದೊರಕುತ್ತಿದೆ, ಇನ್ನೊಂದೆ ಅನ್ನ ಭಾಗ್ಯದ ಅಕ್ಕಿ, ಇನ್ನೊಂದೆಡೆ ಗ್ರಹಲಕ್ಷ್ಮಿಯ ಎರಡು ಸಾವಿರ, ಊರೂರು ಸುತ್ತುವುದಕ್ಕೆ ಸಾರಿಗೆ ವ್ಯವಸ್ಥೆ. ಇದರಿಂದ ಅನುಕೂಲಕ್ಕಿಂತ ಅನಾನುಕೂಲಗಳೇ ಎನ್ನುವುದು ಜನ ಸಾನಾನ್ಯರ ಅಂಬೋಣ. ಹಳ್ಳಿಗಳಲ್ಲಿ ಹೊಲ ಗದ್ದೆಯ ಕೆಲಸಕ್ಕೆ ಕೂಲಿಯಾಳುಗಳು ಸಿಗದೆ ರೈತರು ಪರದಾಡುವಂತಾಗುತ್ತಿದೆ. ತಿಂಗಳಲ್ಲಿ ಇಪ್ಪತ್ತರಿಂದ ಇಪ್ಪತ್ತೈದು ದಿನ ದುಡಿಯುತ್ತಿದ್ದ ಕೂಲಿಯಾಳು ಇಂದು ತಿಂಗಳಲ್ಲಿ ಹತ್ತು ದಿನ ಕೆಲಸಕ್ಕೆ ಬರಬೇಕಾದರೆ ಅವರ ಕೈಕಾಲು ಹಿಡಿಯಬೇಕಾಗಿದೆ. ಎಲ್ಲಾ ಸವಾಲತ್ತುಗಳು ಕಾಲ ಬಳಿ ಬರಬೇಕಾದರೆ ಹೊಲ ಗದ್ದೆಯಲ್ಲಿ ಕೆಲಸ ಮಾಡಿ ಕೈ ಕೆಸರು ಯಾಕೆ ಮಾಡಿಕೊಳ್ಳಬೇಕು, ಬಾಯಿ ಮೊಸರು ಮಾಡಲು ಸಿದ್ದರಾಮಯ್ಯ ಇದ್ದಾರಲ್ವಾ ಎನ್ನುವ ಮಟ್ಟಿಗೆ ಜನ ಸೋಮಾರಿಗಳಾಗುತ್ತಿರುವುದಂತೂ ಸತ್ಯ. ಇನ್ನು ಅಕ್ಕ ತಾಯಿಯಮ್ಮ ಹೋಳಿಗೆ ಊಟ ಬಡಿಸುವುದಕ್ಕೆ ಕಷ್ಟ ಬೀಳಬೇಕೆ?. ಅಕ್ಕತಾಯಿಯಮ್ಮ ಹೋಳಿಗೆ ಓಟ ಹಾಕಿಸಿ ಪ್ರಸಿದ್ದರಾಗಿ ಬಿಟ್ಟಿದ್ದಾರೆ. ಆದರೆ ಒಂದೊತ್ತು ಊಟಕ್ಕೆ ಕಷ್ಟ ಬೀಳುವ ಕುಟುಂಬಗಳು ಇಂದಿಗೂ ಇದೆ. ಮಕ್ಕಳು ಉತ್ತಮ ವಿದ್ಯಾಭ್ಯಾಸದಿಂದ ವಂಚಿತರಾಗುತ್ತಿದ್ದಾರೆ. ಎಷ್ಟೋ ಗಂಡು ಮಕ್ಕಳಿಗೆ ಬಸ್ಸಿನಲ್ಲಿ ಶಾಲಾ ಕಾಲೇಜಿಗೆ ಹೋಗುವುದಕ್ಕೆ ಕಾಸಿಲ್ಲ. ಅಂತಹ ಪರಿಸ್ಥಿತಿಯಲ್ಲಿರುವವರಿಗೆ ಈ ಗ್ಯಾರಂಟಿಗಳ ಅಗತ್ಯ ಇದೆಯೇ ಹೊರತು ಬೇಕಾದಷ್ಟು ಆಸ್ತಿ ಇದ್ದು, ಹೊಟ್ಟೆ ತುಂಬಾ ಉಂಡು ನೆಮ್ಮದಿಯಾಗಿ ಬದುಕುವವರಿಗೆ ಅಲ್ಲ. ಶಾಸಕರಿಗೆ ಅನುದಾನಗಳು ದೊರಕುತ್ತಿಲ್ಲ. ರಾಜ್ಯದಲ್ಲಿ ಅಭಿವೃದ್ಧಿ ಕಾರ್ಯಗಳು ಕುಂಠಿತವಾಗುತ್ತಿದೆ ಎನ್ನುವ ಆರೋಪಗಳು ಇದೆ. ಇದರ ಕಡೆ ಸರಕಾರ ಗಮನಹರಿಸುವುದು ಬಿಟ್ಟು, ಗ್ಯಾರಂಟಿಯಿಂದ ಗಮ್ಮತ್ತು ಮಾಡಿ ಜನ ಸೋಮಾರಿಗಳಾಗುವ ಹಾಗೆ ಮಾಡಿದರೆ ಮುಂದಿನ ಪೀಳಿಗೆಗೆ ನಾವು ಏನು ಉಡುಗೊರೆ ಕೊಡುವಂತಾಗುತ್ತದೆ.

# ಸಂಪ್ರದಾಯ

## ಚು ಫಾತ್ ಡ್ಯಾನ್ಸ್




ಸಿಕ್ಕಿಂ ಬಹು ಜನಾಂಗೀಯ ರಾಜ್ಯ. ಇದು ತನ್ನ ಸ್ಥಳೀಯ ಪರಂಪರೆ ಮತ್ತು ಸಂಪ್ರದಾಯಗಳಿಗಾಗಿ ರಾಷ್ಟ್ರೀಯ ಮತ್ತು ಅಂತರಾಷ್ಟ್ರೀಯ ಮೆಚ್ಚುಗೆಯನ್ನು ಪಡೆದಿದೆ. ಸಿಕ್ಕಿಂನಲ್ಲಿ ಹಲವಾರು ಬುಡಕಟ್ಟುಗಳು ವಾಸಿಸುತ್ತಿದೆ. ಆ ಪ್ರತಿಯೊಂದು ಗುಂಪುಗಳು ಭಾಷೆ, ಸಂಸ್ಕೃತಿ, ಪರಂಪರೆ, ಸಂಪ್ರದಾಯಗಳನ್ನು ಹೊಂದಿವೆ ಮತ್ತು ತಮ್ಮದೇ ಆದ ನೃತ್ಯ ಪ್ರಕಾರಗಳನ್ನು ಹೊಂದಿವೆ. ಸಂತೋಷದಾಯಕ ಆಚರಣೆಗಳು ಮತ್ತು ಹಬ್ಬಗಳು ಸಿಕ್ಕಿಂನ ವಿಶಿಷ್ಟ ಜಾನಪದ ನೃತ್ಯವನ್ನು ವೀಕ್ಷಿಸಲು ಅನೇಕ ಅವಕಾಶಗಳನ್ನು ನೀಡುತ್ತವೆ. ಅವುಗಳಲ್ಲಿ ಚು ಫಾತ್ ಡ್ಯಾನ್ಸ್ ಒಂದು. ಈ ನೃತ್ಯವನ್ನು ವಿಶೇಷವಾಗಿ ಉತ್ತರ ಬೌದ್ಧ ಕ್ಯಾಲೆಂಡರ್‌ನ 7 ನೇ ತಿಂಗಳ 15 ನೇ ದಿನದಂದು ಪ್ರದರ್ಶಿಸಲಾಗುತ್ತದೆ. ಲೆಪ್ಚಾ ಸಮುದಾಯವು ತನ್ನ ಸಹವರ್ತಿಗಳಾದ ಮೌಂಟ್ ನಾರ್ಶಿಂಗ್, ಮೌಂಟ್ ಕಬ್ರು ಮತ್ತು ಮೌಂಟ್ ಸಿಂಬ್ರಾಮ್ ಜೊತೆಗೆ ಕಾಂಚನಜುಂಗಾ ಪರ್ವತ ಶಿಖರಗಳ ಎತ್ತರವನ್ನು ಪ್ರಶಂಸಿಸಲು ಈ ನೃತ್ಯವನ್ನು ಪ್ರದರ್ಶಿಸುತ್ತದೆ. ಈ ಶಿಖರಗಳು ಖನಿಜಗಳು, ಔಷಧಗಳು, ಉಪ್ಪು ಮತ್ತು ಆಹಾರ ಧಾನ್ಯಗಳನ್ನು ಹೊಂದಿರುತ್ತವೆ ಎಂದು ನಂಬಲಾಗಿದೆ. ಚು ಫಟ್ ನೃತ್ಯವನ್ನು ಲೆಪ್ಚಾಗಳು ಭಕ್ತಿಯ ಉತ್ಸಾಹದಲ್ಲಿ ಪ್ರದರ್ಶಿಸುತ್ತಾರೆ. ನರ್ತಕರ ಭಕ್ತಿ ಮತ್ತು ದೈವಿಕತೆಗೆ ಶರಣಾಗುವ ಅವರ ಭಾವನೆಗಳಿಂದ ಕಲಾವಿದರು ಭಾವಪರವಶರಾಗುತ್ತಾರೆ. ಇದು ಪಾಂಗ್ ಲ್ಯಾಬ್ಸೋಲ್‌ನ ಶುಭ ಸಂದರ್ಭದಲ್ಲಿ ನಡೆಯುತ್ತದೆ. ಪಾಂಗ್ ಲ್ಯಾಬ್ಸೋಲ್ ಹಬ್ಬವು ಕೃತಜ್ಞತೆಯ ಆಚರಣೆಯಾಗಿದೆ. ಹಿನ್ನೆಲೆಯಲ್ಲಿ ಭಕ್ತಿಗೀತೆಗಳೊಂದಿಗೆ, ಚು ಫಟ್ ನೃತ್ಯಗಾರರು ಪ್ರಕೃತಿಯನ್ನು ಆರಾಧಿಸುತ್ತಾರೆ. ಮೌಂಟ್ ಕಾಂಚನ್‌ಜುಂಗಾ ಸಿಕ್ಕಿಂನ ಅತಿ ಎತ್ತರದ ಶಿಖರವಾಗಿದ್ದು, ಕಬ್ರು ಪರ್ವತ, ಸಿಂಬ್ರಾಮ್ ಪರ್ವತ, ಪಾಂಡಿಮ್ ಪರ್ವತ ಮತ್ತು ನಾರ್ಶಿಂಗ್ ಪರ್ವತಗಳೊಂದಿಗೆ. ಲೆಪ್ಚಾ ಜನರು ಈ ಐದು ಪರ್ವತಗಳನ್ನು ಚು ಫಟ್ ನೃತ್ಯದ ಮೂಲಕ ಪೂಜಿಸುತ್ತಾರೆ. ಬೆಣ್ಣೆ ದೀಪಗಳು ಮತ್ತು ಬಿದಿರಿನ ಹೆಣಗಳನ್ನು ಚು ಫಟ್ ನೃತ್ಯದಲ್ಲಿ ರಂಗಪರಿಕರವಾಗಿ ಬಳಸಲಾಗುತ್ತದೆ. ಈ ಪೂಜೆಗಳು ಪರ್ವತಗಳ ಉಡುಗೊರೆಗಳನ್ನು ಸಂಕೇತಿಸುತ್ತವೆ.

# ವೈದ್ಯೋನಾರಾಯಣೋ ಹರೀಃ

## ಜೇನು ತುಪ್ಪ




ಸಹಸ್ರಾರು ವರ್ಷಗಳಿಂದ ಜೇನುತುಪ್ಪ ಅಡುಗೆ ಮನೆಯಲ್ಲಿ ಮಾತ್ರವಲ್ಲದೆ, ಧಾರ್ಮಿಕವಾಗಿ, ಔಷಧೀಯವಾಗಿ ಬಹಳಷ್ಟು ಪ್ರಯೋಜನಕಾರಿಯಾಗಿದೆ. ಜಗತ್ತಿನಾದ್ಯಂತ ಜೇನು ತುಪ್ಪ ಹಲವಾರು ವಿಧದಲ್ಲಿ ಉಪಯೋಗಿಸಲ್ಪಡುತ್ತಿದೆ. ಜೇನುತುಪ್ಪವನ್ನು ನೀರಿನಲ್ಲಿ ಬೆರೆಸಿ ಕುಡಿದರೆ, ಅದು ರಕ್ತದ ಕೆಂಪು ರಕ್ತಕಣಗಳ ಸಂಖ್ಯೆಯ ಮೇಲೆ ಪ್ರಯೋಜನಕಾರಿ ಪರಿಣಾಮವನ್ನು ಬೀರುತ್ತದೆ. ತುಸು ಬೆಚ್ಚಗಿನ ನೀರಿನ ಜೊತೆ ಜೇನು ತುಪ್ಪವನ್ನು ಸೇರಿಸಿ ಸೇವಿಸಿದರೆ, ರಕ್ತದ ಹಿಮೋಗ್ಲೋಬಿನ್ ಮಟ್ಟವು ಹೆಚ್ಚಾಗಿ, ರಕ್ತಹೀನತೆಯನ್ನು ಗುಣಪಡಿಸುತ್ತದೆ

ಜೇನುತುಪ್ಪದಲ್ಲಿ ಡೆಕ್ಸ್ಟ್ರಿನ್ ಎಂಬ ಪಿಷ್ಟದ ನಾರು ಇದ್ದು, ಇದು ದೇಹದ ರಕ್ತದಲ್ಲಿನ ಸಕ್ಕರೆಯ ಪ್ರಮಾಣವನ್ನು ನಿಯಂತ್ರಿಸಲು ಸಹಾಯ ಮಾಡುತ್ತದೆ.

1–3 ಚಮಚಗಳಷ್ಟು ಜೇನುತುಪ್ಪವನ್ನು ಒಂದು ಲೋಟ ನೀರಿನಲ್ಲಿ ಬೆರಸಿ, ದಿನಕ್ಕೆ ಎರಡು ಬಾರಿಯಂತೆ ಸೇವಿಸುತ್ತ ಬಂದರೆ, ಅಂಗಾಂಶಗಳು ಪೋಷಣೆಗೊಂಡು ನರಮಂಡಲದ ದೌರ್ಬಲ್ಯವನ್ನು ನಿವಾರಿಸಲು ಸಹಾಯ ಮಾಡುತ್ತದೆ.

3 ಚಮಚಗಳಷ್ಟು ಜೇನುತುಪ್ಪವನ್ನು ಒಂದು ಲೋಟ ಬೆಚ್ಚಗಿನ ನೀರಿನಲ್ಲಿ ಬೆರೆಸಿ ಕುಡಿದಾಗ, ಅದು ತ್ವರಿತ ಶಕ್ತಿಯನ್ನು ಒದಗಿಸುತ್ತದೆ ಹಾಗೂ ದೇಹದ ತೂಕ ನಿರ್ವಹಣೆಯಲ್ಲಿ ಸಹಾಯ ಮಾಡುತ್ತದೆ.

ತರಚು ಗಾಯದ ಮೇಲೆ ಜೇನುತುಪ್ಪವನ್ನು ಹಚ್ಚಿದರೆ, ಅದು ಗಾಯವನ್ನು ಬೇಗ ಗುಣ ಮಾಡುತ್ತದೆ ಹಾಗೂ ಗಾಯದ ಕಲೆಯನ್ನು ಕಡಿಮೆ ಮಾಡುತ್ತದೆ.

ದಿನಕ್ಕೆರಡು ಬಾರಿ, ಜೇನುತುಪ್ಪ ಮತ್ತು ತಾಜಾ ನಿಂಬೆಯ ರಸವನ್ನು ಮುಖಕ್ಕೆ ಹಚ್ಚಿ, 20 ನಿಮಿಷಗಳ ನಂತರ ಉಗುರು ಬೆಚ್ಚಗಿನ ನೀರಿನಿಂದ ತೊಳೆಯಿರಿ. ಇದರಿಂದ ಮುಖದ ಮೇಲಿರುವ ಕಪ್ಪು ಕಲೆಗಳನ್ನು ತೆಗೆದುಹಾಕಬಹುದು.

ಶುಂಠಿಯನ್ನು ಜಜ್ಜಿ, ಅದರ ರಸವನ್ನು ತೆಗೆಯಿರಿ, 15 ನಿಮಿಷಗಳ ಕಾಲ ಇದನ್ನು ಒಂದು ಗಾಜಿನ ಬಟ್ಟಲಿನಲ್ಲಿ ಇಟ್ಟು, ಆಮೇಲೆ, ತಳ ಸೇರಿದ್ದನ್ನು ಹಾಗೆ ಬಿಟ್ಟು, ರಸವನ್ನು ಎರಡು ಚಮಚ ಜೇನುತುಪ್ಪದ ಜೊತೆ ಸೇರಿಸಿ, ಬೆಳಿಗ್ಗೆ ಖಾಲಿ ಹೊಟ್ಟೆಯಲ್ಲಿ ಸೇವಿಸಿದರೆ ರಕ್ತವನ್ನು ಶುದ್ಧೀಕರಿಸಲು ಸಹಾಯ ಮಾಡುತ್ತದೆ.

# ಕ್ಷೇತ್ರದರ್ಶನ

ಶಿವಮೊಗ್ಗ ಜಿಲ್ಲೆಯ ಸಾಗರ ತಾಲ್ಲೂಕಿನಲ್ಲಿರುವ ಜೋಗದಿಂದ ಸುಮಾರು 12 ಕಿ.ಮೀ. ದೂರದಲ್ಲಿರುವ ವಡಂಬೈಲು ಎಂಬಲ್ಲಿ ಈ ಪದ್ಮಾವತಿ ಕ್ಷೇತ್ರವಿದೆ. ಶರಾವತಿ ವಿದ್ಯದ್ಗಾರದ ಕಡೆ ಪ್ರದೇಶವಾದ್ದರಿಂದ ಜೋಗದಿಂದ ಮೊದಲು ಅನುಮತಿ ಪತ್ರವನ್ನು ತೆಗೆದುಕೊಂಡು ಹೋಗಬೇಕು. ಚೆಕ್ ಪೋಸ್ಟ್ ಕೂಡ ಇದೆ. ಪ್ರಕೃತಿಯ ಮಡಿಲಲ್ಲಿ ಶ್ರೀ ಪದ್ಮಾವತಿ ಅಮ್ಮನವರ ದೇವಾಲಯವಿದೆ. ಶರಾವತಿ ತಟದಲ್ಲಿರುವ ಈ ದೇವಾಲಯ ಶರಾವತಿಯ ಹಿನ್ನೀರಿನಿಂದ ಆವೃತವಾಗಿದೆ. ದೇವಾಲಯದ ಸುತ್ತಮುತ್ತಲ ಪ್ರದೇಶ ಹಸಿರು ವನರಾಶಿಯಿಂದ ಕಂಗೊಳಿಸುತ್ತಿದೆ. ಶಾಂತಿ ಧಾಮವಾಗಿರುವ ಈ ದೇವಾಲಯವು ಜೈನ ಪರಂಪರೆಯ ಇತಿಹಾಸವನ್ನು ಹೊಂದಿದೆ. ಅತಿ ಎತ್ತರವಾಗಿರುವ ಆದಿಶೇಷನ ವಿಗ್ರಹವೂ ಇಲ್ಲಿ ಇದೆ. ಈ ದೇವಾಲಯಕ್ಕೆ ರಾಜ್ಯದ ಅನೇಕ ಕಡೆಗಳಿಂದ ಭಕ್ತಾದಿಗಳು ಬರುತ್ತಾರೆ. ಇಲ್ಲಿ ಬಂದ ಭಕ್ತಾದಿಗಳಿಗೆ ವಸತಿ ಊಟದ ವ್ಯವಸ್ಥೆಯೂ ಇದೆ. ವಡನಬೈಲು ಪದ್ಮಾವತಿ ದೇವಿಯು ಹಲವು ಪವಾಡಗಳಿಗೆ ಸಾಕ್ಷಿಯಾಗಿದ್ದಾಳೆ. ಶ್ರೀ ಪದ್ಮಾವತಿಯ ಮೂಲ ಊರು ಹೆಬ್ಬೈಲು. ಲಿಂಗನಮಕ್ಕಿ ಜಲಾಶಯ ಕಟ್ಟಿದ ನಂತರ ಹೆಬ್ಬೈಲು ಮುಳುಗಡೆಯಾಯ್ತು.




ಬಳೆ ಪದ್ಮಾವತಿಯಮ್ಮ

ಅದಾದ ನಂತರ 1952 ರಲ್ಲಿ ಇವರ ತಂದೆ ಮನೆ ದೇವರ ಮೂರ್ತಿ ತಂದು ಇಲ್ಲಿಟ್ಟು ತೀರಿ ಹೋದರಂತೆ. ಆದರೆ ದೇವಿಯ ಪೂಜೆಯ ಜವಾಬ್ದಾರಿಯನ್ನು ರಾಜಯ್ಯನವರು ತೆಗೆದುಕೊಳ್ಳಲಿಲ್ಲ. ಇದ್ದ ಕೆಪಿಸಿ ನೌಕರಿಯನ್ನೇ ಮುಂದುವರಿಸಿದ್ರು. ನಂತರ ಅವರಿಗೆ ಹಲವಾರು ಸಮಸ್ಯೆಗಳು ಕಾಡತೊಡಗಿದವು. ತಮ್ಮ ಉದ್ಯೋಗದಲ್ಲಿ ತಾವು ನಿರತರಾಗಿದ್ದರಿಂದ ರಾಜಯ್ಯನವರಿಗೆ ನಿತ್ಯ ಪೂಜೆ ಸಾಧ್ಯವಾಗುತ್ತಿರಲಿಲ್ಲ. ಪೂಜಾ ಸಮಯದಲ್ಲಿ ಅವರು ತಲೆ ತಿರುಗಿ ಬೀಳಲು ಆರಂಭಿಸಿದರು. ಈ ಬಗ್ಗೆ ಹಲವು ಕಡೆ ವಿಚಾರಿಸಿದಾಗ ಮನೆ ದೇವರಿಂದಲೇ ತೊಂದರೆ ಇದೆ ಎಂದು ತಿಳಿದು ಬಂತು. ಅಂದಿನಿಂದ ಉದ್ಯೋಗಕ್ಕೆ ಹೋಗುವ ಮುನ್ನ ಪೂಜಾ ಕೈಂಕರ್ಯಗಳನ್ನು ಮುಗಿಸಲು ಆರಂಭಿಸಿದರು ರಾಜಯ್ಯನವರು ಆದರೂ ಕೂಡ ಸಮಸ್ಯೆಗಳು ನಿಲ್ಲಲಿಲ್ಲ. ಕೊನೆಗೇ ಉದ್ಯೋಗವನ್ನೇ ಬಿಟ್ಟ ರಾಜಯ್ಯನವರು ಸಂಪೂರ್ಣವಾಗಿ ದೇವಿಯ ಪೂಜಾ ಸೇವೆಯಲ್ಲಿ ತೊಡಗಿಕೊಂಡರು. ಅಂದಿನಿಂದ ಎಲ್ಲ ಸಮಸ್ಯೆಗಳು ಕೂಡ ಮಾಯವಾಯಿತಂತೆ. ಇನ್ನೊಂದು ದಂತಕತೆಯ ಪ್ರಕಾರ ಹೆಬ್ಬೈಲುವಲ್ಲಿದ್ದ ದೇವಸ್ಥಾನದಲ್ಲಿ ಪದ್ಮಾವತಿ ಹುತ್ತದಲ್ಲಿ ಹುಟ್ಟಿದ್ದಳು ಎಂದು ತಿಳಿದು ಬರುತ್ತದೆ. ಈ ದೇವಸ್ಥಾನದಲ್ಲಿ ಬಳೆಗಳೇ ಶ್ರೇಷ್ಠ. ದೇವಿಗೆ ಬಳೆಯನ್ನು ನೀಡಿ ಹರಕೆ ಹೊತ್ತುಕೊಳ್ಳುತ್ತಾರೆ. ಸಂತಾನ ಪ್ರಾಪ್ತಿ ಕೋರ್ಟ್ ಕೇಸ್, ನಾಗದೋಷ ಈ ರೀತಿಯೇ ಏನೇ ಸಮಸ್ಯೆಗಳಿದ್ದರು ಕೂಡ ಈ ವಡನಬೈಲು ಪದ್ಮಾವತಿ ದೇವಿಗೆ ಬಳೆ ಹರಕೆ ಹೊತ್ತುಕೊಂಡು ಹೋದಲ್ಲಿ ನಿರ್ವಿಘ್ನವಾಗಿ ಸಮಸ್ಯೆಗಳು ಬಗೆಹರಿಯುತ್ತವೆ ಹಾಗಾಗಿ ಬಳೆ ಪದ್ಮಾವತಿ ಎಂದು ಪ್ರಸಿದ್ಧ. ಇನ್ನು ಇದೇ ಕ್ಷೇತ್ರದಲ್ಲಿ ನೀವು ಮುಕ್ತಿ ನಾಗರ ದೇವರನ್ನು ನೋಡಬಹುದು. ಈ ನಾಗನ ವಿಗ್ರಹ 77 ಕ್ವಿಂಟಲ್ ತೂಕವಿದೆ. ಹಾಗೆ ಏಳು ಅಡಿ ಏಳು ಇಂಚು ಎತ್ತರವಿದೆ. ಜೊತೆಗೆ ಏಳು ಹೆಡೆಗಳನ್ನ ಹೊಂದಿದ್ದಾನೆ ಮುಕ್ತಿನಾಗ. ಸ್ವತಹ ಭಕ್ತರೇ ಈ ನಾಗದೇವನನ್ನ ಸ್ಪರ್ಶಸಬಹುದು. ಇಲ್ಲಿಗೆ ಬಂದು ಮುಕ್ತಿನಾಗನಿಗೆ 108 ಪ್ರದಕ್ಷಿಣೆ ಹಾಕಿ ಅಭಿಷೇಕ ಮಾಡಿದರೆ ದೋಷದಿಂದ ಮುಕ್ತಿ ಸಿಗುತ್ತದೆ ಅನ್ನೋ ನಂಬಿಕೆ ಇದೆ. ಇಲ್ಲಿ ತುಲಾಭಾರದ ಸೇವೆ ಕೂಡ ಇದೆ. ಇಲ್ಲಿ ವಿಶೇಷವಾಗಿ ನಡೆಯುತ್ತದೆ ಭೂತರಾಜರ ಆರಾಧನೆ. ಯಾರಾದರೂ ನಿಮ್ಮ ಮೇಲೆ ಮಾಟ ಮಂತ್ರ ಮಾಡಿದ್ದರೆ ಯಾರಿಂದಲಾದರೂ ಭೂತ ಪ್ರೇತದ ತೊಂದರೆ ಇದ್ದರೆ ಅವರಿಗೆ ಇಲ್ಲಿ ಪರಿಹಾರ ಸಿಗುತ್ತದೆ. ವಡನಬೈಲು ಪದ್ಮಾವತಿ ದೇವಸ್ಥಾನಕ್ಕೆ ಬಂದು ಒಳಿತು ಕಂಡವರು ಅನೇಕರು ಇದ್ದಾರೆ. ಇಂತಹ ಪವಿತ್ರ ಕ್ಷೇತ್ರಕ್ಕೆ ಒಮ್ಮೆ ಬೇಟಿ ನೀಡಿ ಪುನೀತರಾಗಲು ಮರೆಯದಿರಿ.

# ಕಾಮಧೇನು

## ಪ್ರಕೃತಿಯೇ ನಮಗೆ ದಾರಿ ದೀಪ

@ ಕೃಷ್ಣಾಮೃತ




ಪ್ರಕೃತಿ ಸೊಬಗು–ಬಿನ್ನಾನವನ್ನು ವರ್ಣಿಸುವುದು ಅಸಾದ್ಯ. ಅದೆಷ್ಟು ವರ್ಣಿಸಿದರೂ ತೃಪ್ತಿಯಾಗದ ಭಾವ ಪ್ರತಿಯೊಬ್ಬನ ಮನದಲ್ಲೂ ಮೂಡುವುದರಲ್ಲಿ ಸಂದೇಹವಿಲ್ಲ. ಅಂತಹ ಪ್ರಕೃತಿಯಲ್ಲಿ ಬೇರತಂತಹ ಎದೆಷ್ಟೋ ಚಿಕ್ಕ ಪುಟ್ಟ ನೀರಿನ ಜರಿಯಿಂದ ಹಿಡಿದು ಬಹು ದೊಡ್ಡದಾದ ಜಲಪಾತಗಳು ನಮ್ಮ ಕಣ್ಣಮುಂದೆ ಸಿಗುತ್ತವೆ. ಅಂತಹ ಜಲಪಾತಗಳಲ್ಲಿ ವಿಶ್ವವಿಖ್ಯಾತವಾದ, ಪ್ರಪಂಚದ ಪ್ರಸಿದ್ಧ ಜಲಪಾತಗಳಲ್ಲೊಂದಾದ "ಗೇರುಸೊಪ್ಪಿನ ಜಲಪಾತ ಅಥವಾ ಜೋಗ ಜಲಪಾತ" ಕರ್ನಾಟಕ ರಾಜ್ಯದ ಉತ್ತರ ಕನ್ನಡ ಜಿಲ್ಲೆಯ ಸಿದ್ದಾಪುರ ತಾಲೂಕಿನ ದಟ್ಟವಾದ ಕಾಡುಹಾಗು ಗುಡ್ಡಗಳಿಂದ ಆವೃತ್ತವಾದ ಸ್ಥಳದಲ್ಲಿದೆಯಾದರೂ ಜಲಪಾತವನ್ನು ವೀಕ್ಷಿಸುವತಾಣ ಜೋಗವು ಶಿವಮೊಗ್ಗ ಜಿಲ್ಲೆಯ ಸಾಗರ ತಾಲೂಕಿನಲ್ಲಿದೆ. ಇದು ಶಿವಮೊಗ್ಗ ಮತ್ತು ಉತ್ತರ ಕನ್ನಡ ಜಿಲ್ಲೆಗಳ ಗಡಿ ಮಧ್ಯೆ ಇರುವ ಈ ಜಲಪಾತ ಸಾಗರ ತಾಲ್ಲೂಕಿನ ತಾಳಗುಪ್ಪ ರೈಲು ನಿಲ್ದಾಣಕ್ಕೆ ಕೇವಲ 16 ಕಿಮೀ ದೂರದಲ್ಲಿದೆ. ಇದು ಒಂದು ಪ್ರಮುಖ ಪ್ರವಾಸಿ ತಾಣವೂ ಹೌದು. ಜೋಗ ಜಲಪಾತವು ಸುಮಾರು 292 ಮೀ ಎತ್ತರದಿಂದ ಭೋರ್ಗರೆಯುತ್ತಾ ಶರಾವತಿ ನದಿಯ ನಾಲ್ಕು ಸೀಳಾಗಿ ವೈಭವದಿಂದ ಅವ್ಯಾಹತವಾಗಿ ಧುಮುಕುವ ರಾಜ, ಜೋರಾಗಿ ಆರ್ಭಟಿಸುತ್ತ ಹಲವಾರು ಭಾರಿ ಚಿಮ್ಮುತ್ತ ಧುಮುಕುವ ರೋರರ್, ಬಳಕುತ್ತಾ ಜಾರುವ ರಾಣಿ ಮತ್ತು ರಭಸದಿಂದ ಹಲವಾರು ಬಂಡೆಗಳನ್ನು ಚಿಮ್ಮುತ್ತಾ ನುಗ್ಗುವ ರಾಕೆಟ್ ಈ ನಾಲ್ಕು ಜಲ ಭಾಗಗಳಾಗಿವೆ. ಮಳೆಗಾಲದಲ್ಲಿ ಅತ್ಯಂತ ರಮಣೀಯ ರೂಪ ತಾಳುವ ಈ ಜಲಪಾತ ಬಿಳಿ ಮೋಡಗಳ ಹಿಂದೆ ಕಣ್ಣಾಮುಚ್ಚಾಲೆ ಆಡುತ್ತ ನೋಡುಗರ ಕಣ್ಮನ ಸೆಳೆಯುವುದು. ಆಲ್ಪ್ ಪರ್ವತದಲ್ಲಿರುವ ಸೆರೊಸೊಲಿ 2400 ಅಡಿ, ಎವಾನ್ಸನ್ 1200 ಅಡಿ ಮತ್ತು ಆರ್ವೆ 1100 ಅಡಿ ಇದ್ದು ಜೋಗ ಜಲಪಾತಕ್ಕಿಂತ ಎತ್ತರವಾಗಿವೆಯಾದರೂ ಅವುಗಳಲ್ಲಿ ಜೋಗದಷ್ಟು ಜಲಸಮೃದ್ಧಿ ಇಲ್ಲ. ನಯಾಗರ ಜಲಪಾತದ ನೀರಿನ ಮೊತ್ತ ಜೋಗದ್ದಕ್ಕಿಂತ ಅಧಿಕವಾಗಿದ್ದರೂ, ಅದರ ಎತ್ತರ 164 ಅಡಿ ಮಾತ್ರ. ಶರಾವತಿ ನದಿ ಹರಿದು ಧುಮುಕುವ ಕಮರಿಯ ಬಂಡೆ 250 ಗಜಗಳಷ್ಟು ಉದ್ದವಾಗಿದೆ. ಮಳೆಗಾಲದಲ್ಲಿ ಹೆಚ್ಚು ನೀರು ರಭಸದಿಂದ ಬೀಳುವ ಕಾರಣ ನೀರಿನಿಂದ ಏಳುವ ಧೂಮ ಪ್ರಪಾತವನ್ನು ಆವರಿಸಿದ್ದು ನೀರಿನ ಭೋರ್ಗರೆತದ ಶಬ್ದ ಹೃದಯವನ್ನು ಕಂಪಿಸುವಂತಿರುತ್ತದೆ. ಮಳೆಗಾಲದ ಅನಂತರದ ತಿಂಗಳುಗಳಲ್ಲಿ ನದಿಯ ಪ್ರವಾಹ ಸರಿಯಾದ ಗಾತ್ರದಲ್ಲಿರುವುದರಿಂದ ಜಲಪಾತ ನೋಡಲು ರಮ್ಯವಾಗಿರುತ್ತದೆ. ಜಲಪಾತದ ಪೂರ್ಣ ದೃಶ್ಯವನ್ನು ಶಿವಮೊಗ್ಗ ಗಡಿ ಭಾಗದಿಂದ ನೋಡಬಹುದಾಗಿದೆ. ಜಲಪಾತದ ಬಂಡೆಯ ಅಂಚುಗಳಲ್ಲಿರುವ ಪೊಟರೆಗಳಲ್ಲಿ ಕಾಡು ಪಾರಿವಾಳಗಳು ಮನೆ ಮಾಡಿಕೊಂಡು ಪ್ರಪಾತದ ಬಳಿ ಗುಂಪುಗುಂಪಾಗಿ ಹಾರುತ್ತಿರುತ್ತವೆ. ಸೂರ್ಯಕಿರಣಗಳಿಂದ ಜಲಪಾತದ ಸುತ್ತಾ ಕಾಮನ ಬಿಲ್ಲು ಅನೇಕ ವೈವಿಧ್ಯ ತಾಳುತ್ತದೆ. ಜಲಪಾತದ ಏಕತಾನದ ನಾದ ಹತ್ತಿರ ನಿಂತು ಕೇಳುವವರ ಕಿವಿಗಳಿಗೆ ಘನ ಗರ್ಜನೆಯಂತೆ ಕೇಳಿಸುತ್ತದೆ. ಅದರ ಮೇಘನಾದದ ಗಾಂಭೀರ್ಯ ನಿಸರ್ಗ ಸಂಗೀತದ ಒಂದು ನಿರುಪಮ ಮಾದರಿ. ಬೆಳದಿಂಗಳ ರಾತ್ರಿಯಲ್ಲೂ ಕಾಮನಬಿಲ್ಲು ಕಾಣಿಸುವುದುದೆಂದು ಸ್ಥಳಿಯರು ಹೇಳುತ್ತಾರೆ. ಗೇರುಸೊಪ್ಪೆ ಜಲಪಾತದ ಮಾಹಿತಿಗಳನ್ನು ಸಂಗ್ರಹಿಸಲು ಮಾರ್ಚ್ 1856ರಲ್ಲಿ ಬಂದ ಇಬ್ಬರು ಬ್ರಿಟಿಷ್ ನೌಕಾಧಿಕಾರಿಗಳ ವರದಿಯಂತೆ ಪ್ರಪಾತದ ಆಳ 829 ಅಡಿಗಳು. ಪ್ರಪಾತದ ತಳದಲ್ಲಿ ನದಿ ಕೊರೆದಿರುವ ಮಡುವಿನ ಆಳ 139 ಅಡಿಗಳು. 1869ರ ಜನವರಿಯಲ್ಲಿ ಜಲಪಾತ ಪ್ರದೇಶಕ್ಕೆ ಭೇಟಿ ನೀಡಿದ್ದ ಶ್ರೀಮತಿ ಲೂಯಿ ಬ್ರೌನಿಂಗ್ ತಿಳಿಸುವಂತೆ ಆಗ ಶಿವಮೊಗ್ಗ ಜಿಲ್ಲೆಯ ಅಂಚಿನ ಕಡೆ ಜಲಪಾತದ ಸಮೀಪದಲ್ಲಿ ಡೇರೆಯನ್ನು ಹಾಕಲು ಸಹ ಸಾಧ್ಯವಿಲ್ಲದಂತೆ ಒತ್ತಾದ ಕಾಡು ಬೆಳೆದಿತ್ತಂತೆ. ಈಗ ಜಲಪಾತದ ಎದುರಿಗೆ, ನದಿ ಭೋರ್ಗರೆದು ಸಾಗುವ ಸುಂದರವಾದ ಸ್ಥಳದಲ್ಲಿ ಪ್ರವಾಸಿ ಬಂಗಲೆ, ಉಪಹಾರ ಗೃಹ ಮತ್ತು ಅಂಚೆ ಕಚೇರಿ ಇವೆ. ಅಕ್ಟೋಬರಿನಿಂದ ಫೆಬ್ರವರಿಯವರೆಗೆ ಸಹಸ್ರಾರು ಪ್ರವಾಸಿಗಳು ಜಗತ್ಪ್ರಸಿದ್ಧವಾದ ಈ ಸ್ಥಳಕ್ಕೆ ಭೇಟಿ ನೀಡುತ್ತಾರೆ. 1930 ರ ದಶಕದ ಪೂರ್ವಭಾಗದಲ್ಲಿ ಮೈಸೂರು ಲೋಕೋಪಯೋಗಿ ಇಲಾಖೆಯಿಂದ ಜಲವಿದ್ಯುತ್ ಯೋಜನಾ ಕಾರ್ಯ ಶುರುವಾಯಿತು. ಮೊದಲ ಹಂತದ ಕೆಲಸ 1939ರಲ್ಲಿ ಜೋಗ ಜಲಪಾತದಿಂದ 24 ಕಿ. ಮಿ. ದೂರದಲ್ಲಿರುವ ಹಿರೆಭಾಸ್ಕರ ಎಂಬ ಸ್ಥಳದಲ್ಲಿ ಶುರುವಾಯಿತು. ಮೊದಲು ಕೃಷ್ಣರಾಜೇಂದ್ರ ಜಲವಿದ್ಯುತ್ ಯೋಜನೆಯೆಂದು ಕರೆಯಲ್ಪಡುತಿದ್ದ ಈ ಯೋಜನೆಯನ್ನು ನಂತರ ಮಹಾತ್ಮ ಗಾಂಧಿ ಜಲವಿದ್ಯುತ್ ಯೋಜನೆಯೆಂದು ನಾಮಕರಣ ಮಾಡಲಾಯಿತು. ಫೆಬ್ರುವರಿ 21 1949ರಲ್ಲಿ ಉದ್ಘಾಟನೆಯಾದ ಈ ವಿದ್ಯುತ್ ಸ್ಥಾವರ 120 ಮೆಗಾವ್ಯಾಟ್ ವಿದ್ಯುಚ್ಛಕ್ತಿ ಉತ್ಪಾದಿಸುವ ಕ್ಷಮತೆಯನ್ನು ಹೊಂದಿದೆ. 60ರ ದಶಕದಲ್ಲಿ ಲಿಂಗನಮಕ್ಕಿಜಲಾಶಯ ಪ್ರಾರಂಭವಾದ ನಂತರ ಈ ಯೋಜನೆಗೆ ನೀರಿನ ಮೂಲ ಕಡಿಮೆಯಾಯಿತು.

# ಕಲ್ಪವೃಕ್ಷ

@ಪ್ರೀತಂ ರೈ ಇ

## ಸಿಡಿಆರ್ ಎಂ ಒಮೆನ್

1971 ರ ಇಂಡೋ–ಪಾಕ್ ಯುದ್ಧವು ಪ್ರಾರಂಭವಾದಾಗ, ಸಿಡಿಆರ್ ಎಂ ಒಮೆನ್ ಭಾರತೀಯ ನೌಕಾಪಡೆಯ ಬ್ಲಾಕ್‌ವುಡ್–ಕ್ಲಾಸ್ ಫ್ರಿಗೇಟ್ INS ಖುಕ್ರಿಯಲ್ಲಿ ಇಂಜಿನಿಯರಿಂಗ್ ಅಧಿಕಾರಿಯಾಗಿ ಸೇವೆ ಸಲ್ಲಿಸುತ್ತಿದ್ದರು. ಭಾರತೀಯ ನೌಕಾಪಡೆಯ ರೇಡಿಯೋ ಪತ್ತೆ ಸಾಧನವು 03ನೇ ಡಿಸೆಂಬರ್ 1971 ರಂದು ಡಿಯು ಬಂದರಿನ ಸಮೀಪದಲ್ಲಿ ಜಲಾಂತರ್ಗಾಮಿ ನೌಕೆಯನ್ನು ಗುರುತಿಸಿತು. ದುರದೃಷ್ಟವಶಾತ್, ಫ್ಲೋಟಿಲ್ಲಾದ ಹಡಗುಗಳಲ್ಲಿ ಒಂದಾದ INS ಕುಥಾರ್ ಸಮಸ್ಯೆಯನ್ನು ಎದುರಿಸಿತು ಮತ್ತು ಸುಮಾರು 05 ಡಿಸೆಂಬರ್‌ನಲ್ಲಿ ಅದನ್ನು ಮರಳಿ ಬಂದರಿಗೆ ಕರೆದೊಯ್ಯಲಾಯಿತು. ದಿಯು ಬಳಿ ಭಾರತೀಯ ಜಲಾಂತರ್ಗಾಮಿ ನೌಕೆ ಪತ್ತೆಯಾದ ಶತ್ರು ಜಲಾಂತರ್ಗಾಮಿ ನೌಕೆಯನ್ನು ಬೇಟೆಯಾಡಲು ಮತ್ತು ನಾಶಪಡಿಸಲು ನೌಕಾಪಡೆಯ ಪ್ರಧಾನ ಕಛೇರಿಯು ಪಶ್ಚಿಮ ನೌಕಾಪಡೆಗೆ ಆದೇಶಿಸಿತು. ಈ ಆದೇಶವನ್ನು ಸ್ಕ್ವಾಡ್ರನ್ನ ಕಮಾಂಡರ್, ಕ್ಯಾಪ್ಟನ್ ಮಹೇಂದ್ರ ನಾಥ್ ಮುಲ್ಲಾ ಅವರಿಗೆ ರವಾನಿಸಲಾಯಿತು. ಎರಡು ಜಲಾಂತರ್ಗಾಮಿ ವಿರೋಧಿ ಯುದ್ಧ ನೌಕೆಗಳು ಡಿಸೆಂಬರ್ 08 ರಂದು ತಮ್ಮ ಕಾರ್ಯಾಚರಣೆಗಾಗಿ ಬಾಂಬೆಯಿಂದ ಹೊರಟವು ಮತ್ತು ಡಿಸೆಂಬರ್ 09 ರ ಬೆಳಿಗ್ಗೆ ಶತ್ರು ಜಲಾಂತರ್ಗಾಮಿ ನೌಕೆಯ ವರದಿಯಾದ ಸ್ಥಳವನ್ನು ಸಮೀಪಿಸಿದವು. ಪಶ್ಚಿಮ ನೌಕಾ ಕಮಾಂಡ್‌ನ ಪ್ರಕಾರ ಇದು 'ಹಂಟರ್–ಕಿಲ್ಲರ್ ಫೋರ್ಸ್' ಆಗಿತ್ತು. ಡಿಸೆಂಬರ್ 9 ರ ತಡರಾತ್ರಿಯಲ್ಲಿ, INS ಖುಕ್ರಿ ಪಾಕಿಸ್ಥಾನದ ಜಲಾಂತರ್ಗಾಮಿ PNS ಹಂಗೂರ್‌ನಿಂದ ದಾಳಿಗೊಳಗಾಯಿತು. ಟಾರ್ಪಿಡೊಗಳನ್ನು ಹಾರಿಸಿ ವಿನಾಶಕಾರಿ ಹಾನಿಯನ್ನುಂಟುಮಾಡಿತು. ವೈರಿ ಟಾ




ರ್ಪಿಡೊಗಳಿಗೆ ಭಾರತೀಯ ಹಡಗನ್ನು ಸುಲಭ ಗುರಿಯನ್ನಾಗಿ ಮಾಡಿದ್ದು, ಅದರಲ್ಲಿ ಪ್ರಯೋಗಾತ್ಮಕ ಸೋನಾರ್ ಉಪಕರಣಗಳ ಉಪಸ್ಥಿತಿಯಾಗಿದ್ದು, ಅದನ್ನು ಸಂಶೋಧನೆಗಾಗಿ ವಿಶೇಷವಾಗಿ ನಿಯೋಜಿಸಲಾಗಿತ್ತು. PNS ಹ್ಯಾಂಗೋರ್ ಸುಮಾರು ಆರು ಕಿಲೋಮೀಟರ್ ದೂರದಿಂದ ಗುಂಡು ಹಾರಿಸಬಲ್ಲದುದಾಗಿತ್ತು. INS ಖುಕ್ರಿ ಕ್ಯಾಪ್ಟನ್, ಕ್ಯಾಪ್ಟನ್ ಮಹೇಂದ್ರನಾಥ್ ಮುಲ್ಲಾ ಕೆಲವೇ ನಿಮಿಷಗಳಲ್ಲಿ ಪರಿಸ್ಥಿತಿಯನ್ನು ಮೌಲ್ಯಮಾಪನ ಮಾಡಿ, ಹಡಗನ್ನು ತ್ಯಜಿಸಲು ಆದೇಶ ನೀಡಿದರು. ಖುಕ್ರಿಯೊಳಗೆ ಎರಡು ಭಾರಿ ಸ್ಫೋಟಗಳು ಸಂಭವಿಸಿ ಹಡಗು ಕತ್ತಲೆಯಾಯಿತು. ಹಡಗು ಅದರ ಬಲಕ್ಕೆ ಓರೆಯಾಗಲು ಪ್ರಾರಂಭಿಸಿತು. ತನ್ನ ಜನರಿಗೆ ಅಪಾಯವನ್ನು ಅರಿತುಕೊಂಡ ಸಿಡಿಆರ್ ಎಂ ಒಮೆನ್ ತನ್ನ ಜನರನ್ನು ಸುರಕ್ಷಿತವಾಗಿಡಲು ಡೆಕ್‌ನ ಕೆಳಗೆ ಹೋದರು. ಈ ಮಧ್ಯೆ, ಹಡಗು ಮತ್ತೊಂದು ಟಾರ್ಪಿಡೊದಿಂದ ದಾಳಿಗೊಳಗಾಯಿತು. ಅವರ ಬದುಕುಳಿಯುವ ಸಾಧ್ಯತೆಗಳು ಕಡಿಮೆಯಾಗುತ್ತಿವೆ ಎಂಬ ವಾಸ್ತವದ ಹೊರತಾಗಿಯೂ, ಅವರು ತನ್ನ ಜನರಿಗೆ ಸುರಕ್ಷತೆಗೆ ಸಹಾಯ ಮಾಡುವುದನ್ನು ಮುಂದುವರೆಸಿದರು. ಅವರ ಜೀವನದ ಕೊನೆಯ ನಿಮಿಷಗಳಲ್ಲಿ, ಸಿಡಿಆರ್ ಎಂ ಒಮೆನ್ ಅಸಾಧಾರಣ ಧೈರ್ಯವನ್ನು ತೋರಿ, ಅನೇಕ ಜನರನ್ನು ಉಳಿಸಲು ಸಹಾಯ ಮಾಡಿದರು. ಒಟ್ಟು 67 ಜನರನ್ನು ಉಳಿಸಯಾಯಿತಾದರೂ ಸಿಡಿಆರ್ ಎಂ ಒಮೆನ್ ವೀರ ಮರಣ ಹೊಂದಿದರು. ಅವರಿಗೆ ಅವರ ಅತ್ಯುತ್ತಮ ಧೈರ್ಯ, ನಾಯಕತ್ವ ಮತ್ತು ಅತ್ಯುನ್ನತ ತ್ಯಾಗಕ್ಕಾಗಿ ಮರಣೋತ್ತರವಾಗಿ ರಾಷ್ಟದ ಮೂರನೇ ಅತ್ಯುನ್ನತ ಶೌರ್ಯ ಪ್ರಶಸ್ತಿ "ವೀರ್ ಚಕ್ರ" ನೀಡಲಾಯಿತು. ಸಿಡಿಆರ್ ಮುಕಡವಿಲ್ ಒಮ್ಮನ್ ಕೇರಳದಲ್ಲಿ 01 ಜುಲೈ 1925 ರಂದು ಜನಿಸಿದರು. 1971 ರ ಹೊತ್ತಿಗೆ, ಅವರು ಗಣನೀಯ ವರ್ಷಗಳ ಸೇವೆಯನ್ನು ಸಲ್ಲಿಸಿದರು ಮತ್ತು ಕಮಾಂಡರ್ ಹುದ್ದೆಗೆ ಬಡ್ತಿ ಪಡೆದರು. ಇವರನ್ನು ಕರಾವಳಿ ತರಂಗಿಣಿ ಹೆಮ್ಮೆಯಿಂದ ನೆನಪಿಸಿಕೊಳ್ಳುತ್ತಿದೆ.

# ಪಾರಿಜಾತ

ಕರಾವಳಿ ತರಂಗಿಣಿ

ಒಂದು ಮನೆಯಲ್ಲಿ ಹುಟ್ಟಿ ಇನ್ನೊಂದು ಮನೆ ಬೆಳಗುವ ಹೆಣ್ಣು ತನ್ನ ಜೀವನದಲ್ಲಿ ಹಲವಾರು ಸವಾಲುಗಳನ್ನು ಮೆಟ್ಟಿ ನಿಂತು ಮುಂದೆ ಸಾಗಿ ಹಲವಾರು ಹೆಣ್ಣು ಮಕ್ಕಳಿಗೆ ಮಾದರಿಯಾಗಿದ್ದಾಳೆ. ಅಂತಹ ಹೆಣ್ಣು ಮಕ್ಕಳಲ್ಲಿ ಕರಾವಳಿ ತರಂಗಿಣಿಯ ಇಂದಿನ ವಿಶೇಷ ಅತಿಥಿ ಆಲ್ ಇಂಡಿಯಾ ಹಾರ್ಟ್ ಫೌಂಡೇಶನ್‌ನ ಸ್ಥಾಪಕ ಅಧ್ಯಕ್ಷರಾಗಿದ್ದ ಭಾರತದ ಮೊದಲ ಮಹಿಳಾ ಹೃದ್ರೋಗ ತಜ್ಞೆ ಪದ್ಮಾವತಿ. ಪದ್ಮಾವತಿ ಅವರು ಈಗಿನ ಮ್ಯಾನ್ಮಾರ್‌ನ ಬ್ಯಾರಿಸ್ಟರ್‌ನಲ್ಲಿ 20 ಜೂನ್ 1917 ರಂದು ಜನಿಸಿದರು. ಅವರಿಗೆ ಮೂವರು ಸಹೋದರರು ಮತ್ತು ಇಬ್ಬರು ಸಹೋದರಿಯರಿದ್ದರು. ಅದು ಎರಡನೆಯ ಮಹಾಯುದ್ಧದ ಸಮಯ 1942 ರಲ್ಲಿ ಮ್ಯಾನ್ಮಾರ್‌ನ ಮೇಲೆ ಜಪಾನ್‌ನ ಆಕ್ರಮಣದ ಸಮಯದಲ್ಲಿ ಮನೆಯ ಗಂಡಸರನ್ನು ಬಿಟ್ಟು ಪದ್ಮಾವತಿ, ಆಕೆಯ ತಾಯಿ ಮತ್ತು ಸಹೋದರಿಯರನ್ನು ಭಾರತದ ತಮಿಳುನಾಡಿನ ಕೊಯಮತ್ತೂರ್‌ಗೆ ಪಲಾಯನ ಮಾಡುವಂತೆ ಮಾಡಿತು. 1945 ರಲ್ಲಿ ಯುದ್ಧವು ಕೊನೆಗೊಂಡ ನಂತರ ಕುಟುಂಬವು ಮತ್ತೆ ಒಂದಾಯಿತು. ನಂತರ ಅವರು ರಂಗೂನ್‌ನ ರಂಗೂನ್ ವೈದ್ಯಕೀಯ ಕಾಲೇಜಿನಿಂದ MBBS ಪದವಿಯನ್ನು ಪಡೆದು, 1949 ರಲ್ಲಿ ಲಂಡನ್‌ಗೆ ತೆರಳಿದರು. ಅಲ್ಲಿ ಅವರು ರಾಯಲ್ ಕಾಲೇಜ್ ಆಫ್ ಫಿಸಿಶಿಯನ್ಸ್‌ನಿಂದ ಈ RCPನ್ನು ಪಡೆದು ನಂತರ ಎಡಿನ್‌ಬರ್ಗ್‌ನ ರಾಯಲ್ ಕಾಲೇಜ್ ಆಫ್ ಫಿಸಿಶಿಯನ್ಸ್‌ನಿಂದ ಈ RCPE ಪಡೆದರು. ಯುನೈಟೆಡ್ ಕಿಂಗ್‌ಡಂನಲ್ಲಿದ್ದ ಸಮಯದಲ್ಲಿ ಅವರು ನ್ಯಾಷನಲ್ ಹಾರ್ಟ್ ಹಾಸ್ಪಿಟಲ್, ನ್ಯಾಷನಲ್ ಚೆಸ್ಟ್ ಹಾಸ್ಪಿಟಲ್ ಮತ್ತು ನ್ಯಾಷನಲ್ ಹಾಸ್ಪಿಟಲ್, ಕ್ವೀನ್ ಸ್ಕ್ವೇರ್, ಲಂಡನ್‌ನಲ್ಲಿ ಕೆಲಸ




ಮಾಡಿದ್ದಾರೆ. ತರುವಾಯ, ತನ್ನ ಎಫ್‌ಆರ್‌ಸಿಪಿ ಮುಗಿಸಿದ ನಂತರ, ಅವರು ಮೂರು ತಿಂಗಳ ಕಾಲ ಸ್ವೀಡನ್ ಗೆ ತೆರಳಿ ಅಲ್ಲಿ ಅವರು ದಕ್ಷಿಣ ಆಸ್ಪತ್ರೆಯಲ್ಲಿ ಹೃದ್ರೋಗ ಕೋರ್ಸ್‌ಗಳನ್ನು ತೆಗೆದುಕೊಂಡರು. ಇದರ ನಡುವೆ ಅವರು ಜಾನ್ಸ್ ಹಾಪ್ಕಿನ್ಸ್ ವಿಶ್ವವಿದ್ಯಾನಿಲಯದ ಭಾಗವಾದ ಬಾಲ್ಟಿಮೋರ್‌ನ ಜಾನ್ಸ್ ಹಾಪ್ಕಿನ್ಸ್ ಆಸ್ಪತ್ರೆಯಲ್ಲಿ ಫೆಲೋಶಿಪ್‌ಗಾಗಿ ಅರ್ಜಿ ಸಲ್ಲಿಸಿ, ಆಯ್ಕೆಯಾದರು. ಅಲ್ಲಿನ ಪ್ರಸಿದ್ಧ ಹೃದ್ರೋಗ ತಜ್ಞ ಹೆಲೆನ್ ಟೌಸಿಗ್ ಅವರೊಂದಿಗೆ ಅಧ್ಯಯನ ಮಾಡಲು ಹೋದರು. 1952 ರಲ್ಲಿ, ಅವರು ಹಾರ್ವ ರ್ಡ್ ವೈದ್ಯಕೀಯ ಶಾಲೆಗೆ ಸೇರಿದರು, ಅಲ್ಲಿ ಅವರು ಆಧುನಿಕ ಹೃದ್ರೋಗಶಾಸ್ತ್ರದ ಪ್ರವರ್ತಕ ಪಾಲ್ ಡಡ್ಲಿ ವೈಟ್ ಅವರ ಅ ಡಿಯಲ್ಲಿ ಅಧ್ಯಯನ ಮಾಡಿದರು. ನಂತರ ಭಾರತಕ್ಕೆ ಹಿಂತಿರುಗಿ, ಅವರು ದೆಹಲಿಯ ಲೇಡಿ ಹಾರ್ಡಿಂಜ್ ವೈದ್ಯಕೀಯ ಕಾಲೇಜಿನಲ್ಲಿ ಉಪನ್ಯಾಸಕಿಯಾಗಿ 1953 ರಲ್ಲಿ ತಮ್ಮ ವೃತ್ತಿಜೀವನವನ್ನು ಪ್ರಾರಂಭಿಸಿದರು, ಅಲ್ಲಿ ಅವರು ಕಾರ್ಡಿಯಾಲಜಿ ಕ್ಲಿನಿಕ್ ಅನ್ನು ತೆರೆದರು. 1954 ರಲ್ಲಿ, ಅವರು ಭಾರತದಲ್ಲಿ ಮೊದಲ ಕೆಲವು ಮಹಿಳಾ ಹೃದ್ರೋಗಶಾಸ್ತ್ರಜ್ಞರಲ್ಲಿ ಒಬ್ಬರಾಗಿದ್ದರು. 1978 ರಲ್ಲಿ ಮೌಲಾನಾ ಆಜಾದ್ ವೈದ್ಯಕೀಯ ಕಾಲೇಜಿನ ನಿರ್ದೇಶಕರಾಗಿ ನಿವೃತ್ತರಾದರು. ನಿವೃತ್ತಿಯ ನಂತರವೂ ತನ್ನ ಸೇವೆಯನ್ನು ಮುಂದುವರಿಸಿದ್ದರು. ಪದ್ಮಾವತಿಗೆ 1992 ರಲ್ಲಿ ಭಾರತದ ಎರಡನೇ ಅತ್ಯುನ್ನತ ನಾಗರಿಕ ಗೌರವ ಪದ್ಮವಿಭೂಷಣವನ್ನು ನೀಡಲಾಯಿತು. 29 ಆಗಸ್ಟ್ 2020 ರಂದು, ಪದ್ಮಾವತಿ ಅವರು ನವದೆಹಲಿಯ ನ್ಯಾಷನಲ್ ಹಾರ್ಟ್‌ಇನ್‌ಸ್ಟಿಟ್ಯೂಟ್‌ನಲ್ಲಿ ಭಾರತದಲ್ಲಿ ನಿಧನರಾದರು. ಆಕೆಯ ಮರಣದ ಸಮಯದಲ್ಲಿ ಅವರು 103 ವರ್ಷ ವಯಸ್ಸಿನವರಾಗಿದ್ದರು ಮತ್ತು ಭಾರತದಲ್ಲಿ ವಾಸಿಸುವ ಅತ್ಯಂತ ಹಿರಿಯ ವೈದ್ಯರಾಗಿದ್ದರು.

# ಶತಮಾನಗಳಷ್ಟು ಹಳೆಯ ಗಾಯ ಗುಣವಾಗುತ್ತಿದೆ – ಮೋದಿಜಿ

**ಒಂದನೇ ಪುಟದಿಂದ......**
ಇಡೀ ದೇಶ ಮತ್ತು ಜಗತ್ತು ರಾಮ ನಾಮದಲ್ಲಿ ಮುಳುಗಿದೆ. ಪವಿತ್ರ ಧ್ವಜ ಹಾರುವ ಮೂಲಕ ಸತ್ಯವು ಸುಳ್ಳಿನ ಮೇಲೆ ಜಯಗಳಿಸಿದೆ ಎಂಬುದಕ್ಕೆ ಸಾಕ್ಷಿಯಾಗಿ ನಿಂತಿದೆ ಎಂದ ಮೋದಿಜಿ, ದೇವಾಲಯದ ನಿರ್ಮಾಣಕ್ಕೆ ಕೊಡುಗೆ ನೀಡಿದ ಎಲ್ಲ ರಾಮ ಭಕ್ತರಿಗೆ ಅಭಿನಂದನೆ ಸಲ್ಲಿಸಿದರು. ನಮ್ಮ ರಾಮನು ತಾರತಮ್ಯ ಮಾಡುವುದಿಲ್ಲ. ನಾವು ಕೂಡ ಅದೇ ಮಾರ್ಗದಲ್ಲಿ ಮುಂದುವರಿಯುತ್ತಿದ್ದೇವೆ. ರಾಷ್ಟ್ರ ಮುಂದುವರೆದಂತೆ ನಾಗರಿಕರು ಎಲ್ಲರನ್ನೂ ಒಳಗೊಳ್ಳುವಿಕೆಯನ್ನು ಅಳವಡಿಸಿಕೊಳ್ಳಬೇಕು. 2047ರ ವೇಳೆಗೆ ಸ್ವಾತಂತ್ರ್ಯದ 100 ವರ್ಷಗಳನ್ನು ಪೂರ್ಣಗೊಳಿಸಿದಾಗ ದೇಶ ಅಭಿವೃದ್ಧಿ ಹೊಂದಿದ ರಾಷ್ಟ್ರವಾಗುವ ಗುರಿ ಸಾಧಿಸಬೇಕು. ಈ ದೃಷ್ಟಿಕೋನವನ್ನು ಸಾಕಾರಗೊಳಿಸಲು ನಾವು ನಮ್ಮೊಳಗಿನ ರಾಮನನ್ನು ಜಾಗೃತಗೊಳಿಸಬೇಕಾಗಿದೆ ಎಂದು ಹೇಳಿದರು. ಭಾರತದ ಪರಂಪರೆ ಮತ್ತು ಸಂಸ್ಕೃತಿಯ ಬಗ್ಗೆ ಹೆಮ್ಮೆಪಡುವ ಮತ್ತು ಗುಲಾಮಗಿರಿಯ ಮನಸ್ಥಿತಿಯಿಂದ ಮುಕ್ತರಾಗುವ ಅಗತ್ಯವಿದೆ. ಮುಂದಿನ 10 ವರ್ಷಗಳಲ್ಲಿ ಆನುವಂಶಿಕ ಕೀಳರಿಮೆ ಸಂಕೀರ್ಣಗಳನ್ನು ತೊಡೆದು ಹಾಕಲು ನಿರ್ಣಾಯಕ ಪ್ರಯತ್ನಕ್ಕೆ ಪ್ರಧಾನಿ ಕರೆ ನೀಡಿದರು. ಭಾರತ ಪ್ರಜಾಪ್ರಭುತ್ವದ ಜನ್ಮಸ್ಥಳ ಮತ್ತು ಅದು ನಮ್ಮ ಡಿಎನ್‌ಎಯಲ್ಲೇ ಹುದುಗಿದೆ. ಸ್ವಾತಂತ್ರ್ಯಾ ನಂತರವೂ ಮೆಕಾಲೆ ಅವರ ಪ್ರಭಾವವು ಬಹಳ ಕಾಲ ಮುಂದುವರೆಯಿತು. ಭಾರತವು ಪ್ರಗತಿ ಸಾಧಿಸಲು ಈ ಮನಸ್ಥಿತಿಯಿಂದ ಹೊರಬರಬೇಕಿದೆ ಎಂದು ಪ್ರತಿಪಾದಿಸಿದರು.

# ಮೋದಿ ಯಾಕೆ ಗೊಹತ್ಯೆ ನಿಷೇಧ ಮಾಡುತ್ತಿಲ್ಲ : ದಯಾನಂದ ಸ್ವಾಮಿಜಿ

**ಒಂದನೇ ಪುಟದಿಂದ......**
ಹತ್ಯೆ ಮಾಡಿ, ಅವುಗಳ ಮಾಂಸ ಮತ್ತು ಚರ್ಮವನ್ನು ವಿದೇಶಗಳಿಗೆ ರಫ್ತು ಮಾಡುತ್ತಿರುವುದು ಕಳವಳಕಾರಿಯಾಗಿದೆ. ಇಂದಿರಾ ಗಾಂಧಿ ಪ್ರಧಾನಿಯಾಗಿದ್ದಾಗ ಸಂಘಪರಿವಾರ ಗೋಹತ್ಯೆ ನಿಷೇಧ ಕಾಯಿದೆ ಜಾರಿಗೆ ತರುವಂತೆ ಹೋರಾಟ ಮಾಡಿತ್ತು. ಆದರೆ ಇಂದು ಅದೇ ಆರೆಸ್ಸೆಸ್ ವಿಚಾರಧಾರೆಯ ಮೋದಿ ಸರಕಾರ ಇದ್ದರೂ ಈವರೆಗೆ ಕೇಂದ್ರದಲ್ಲಿ ನಿಷೇಧ ಕಾಯಿದೆ ಜಾರಿಗೆ ತಂದಿಲ್ಲ. ಆರೆಸ್ಸೆಸ್ ಕೂಡ ಈ ಬಗ್ಗೆ ಮಾತನಾಡುತ್ತಿಲ್ಲ ಎಂದು ದೂರಿದರು. ಕರ್ನಾಟಕ ಸೇರಿದಂತೆ ದೇಶದ 16 ರಾಜ್ಯಗಳಿಗೆ ಸಂಪೂರ್ಣ ಗೋಹತ್ಯೆ ನಿಷೇಧ ಕಾಯಿದೆ ಜಾರಿಗೆ ಬಂದಿದೆ. ಬಿಜೆಪಿ ಸರಕಾರ ಇರುವ ಎಲ್ಲ ರಾಜ್ಯಗಳಲ್ಲಿ ನಿಷೇಧ ಮಾಡಲಾಗಿದೆ. ಆದರೆ ಇವರು ಯಾಕೆ ಕೇಂದ್ರದಲ್ಲಿ ಇದನ್ನು ನಿಷೇಧ ಮಾಡುತ್ತಿಲ್ಲ. ಆದುದರಿಂದ ಉಡುಪಿಗೆ ಬರುತ್ತಿರುವ ಪ್ರಧಾನಿ ನರೇಂದ್ರ ಮೋದಿ ಶ್ರೀಕೃಷ್ಣನ ನಾಡಿನಲ್ಲಿ ಈ ಸಂಕಲ್ಪ ಮಾಡಬೇಕು ಈ ಸಂಬಂಧ ಪ್ರಧಾನಿಗೆ ಮನವಿ ಕೂಡ ಸಲ್ಲಿಸಲಾಗುವುದು ಎಂದರು. ಅಹಿಂಸಾ ತತ್ವ ಬೋಧನೆ ಮಾಡಿದ ನಾವು ಕೋಟ್ಯಂತರ ಜಾನುವಾರುಗಳನ್ನು ಹತ್ಯೆ ಮಾಡಿ ಮಾಂಸ ರಫ್ತು ಮಾಡಿ, ಇಡೀ ಜಗತ್ತನ್ನೇ ಮಾಂಸಹಾರಿ ಮಾಡಲು ಹೊರಟಿದ್ದೇವೆ. ಭಾರತ ದೇಶ ಸಂಸ್ಕೃತಿ, ಪರಂಪರೆಯನ್ನು ಎತ್ತಿ ಹಿಡಿಯುವುದಾಗಿ ಹೇಳುವ ಪ್ರಧಾನಿ ಮೋದಿ, ಗೋವಂಶ ಜಾನುವಾರು ಮಾಂಸ ರಫ್ತು ನಿಲ್ಲಿಸುತ್ತಿಲ್ಲ. ಇನ್ನಾದರೂ ಪ್ರಧಾನಿ ವಿಶೇಷ ಕಾಳಜಿ ವಹಿಸಿ ಮಾಂಸ ರಫ್ತು ನಿಷೇಧ ಕಾಯಿದೆ ಜಾರಿಗೆ ತಂದು, ಭಾರತವನ್ನು ಮಾಂಸ ರಫ್ತು ಮುಕ್ತ ದೇಶ ಎಂಬುದಾಗಿ ಘೋಷಣೆ ಮಾಡಬೇಕು ಎಂದು ದಯಾನಂದ ಸ್ವಾಮೀಜಿ ಆಗ್ರಹಿಸಿದರು.

# ದೆಹಲಿಗೆ ಕರೆಸಿ ತೀರ್ಮಾನ – ಖರ್ಗೆ

**ಒಂದನೇ ಪುಟದಿಂದ......**
ಭೇಟಿ ನೀಡಿ ಸಮಾಲೋಚನೆ ನಡೆಸಿದರು. ಸಚಿವ ಪ್ರಿಯಾಂಕ್ ಖರ್ಗೆ, ಡಿ. ಸುಧಾಕರ್ ಹಾಗೂ ಪ್ರಕಾಶ್ ಹುಕ್ಕೇರಿ ಸೇರಿದಂತೆ ಹಲವರು ಭೇಟಿ ನೀಡಿ ಚರ್ಚೆ ನಡೆಸಿದರು. ಕೆಲವರು ಸಂಪುಟ ಸೇರ್ಪಡೆ ಸಂಬಂಧ ಬೇಡಿಕೆ ಇಟ್ಟಿದ್ದಾರೆ ಎನ್ನಲಾಗಿದ್ದು, ಮಲ್ಲಿಕಾರ್ಜುನ ಖರ್ಗೆ ಎಲ್ಲವನ್ನು ಹೈಕಮಾಂಡ್ ಬೇಟಿಯ ನಂತರವೇ ನಿರ್ಧಾರ ಮಾಡಲಾಗುವುದು ಎಂದು ತಿಳಿಸಿದ್ದಾರೆ ಎಂದು ಮೂಲಗಳಿಂದ ತಿಳಿದು ಬಂದಿದೆ. ರಾಜ್ಯದ ಪವರ್ ಫೈಟ್ ಅಂತಿಮ ಹಂತಕ್ಕೆ ತಲುಪಿದ್ದು, ಹೈಕಮಾಂಡ್ ಸಭೆ ನಡೆಸಲಿರುವ ಕಾರಣ ಕಾಂಗ್ರೆಸ್ ಪಾಳಯದಲ್ಲಿ ಬಿರುಸಿನ ರಾಜಕೀಯ ಕಂಡು ಬರುತ್ತಿದೆ. ನಾಯಕರುಗಳ ಸರಣಿ ಸಭೆಗಳು ನಡೆಯುತ್ತಿವೆ. ಅದರಲ್ಲೂ ಸಿಎಂ ಸಿದ್ದರಾಮಯ್ಯ ಆಪ್ತರ ಬಳಗ, ಅಂಹಿಂದ ನಾಯಕರು ಸರಣಿ ಸಭೆಗಳನ್ನು ನಡೆಸುತ್ತಿದ್ದು, ಸಿಎಂ ಸರ್ಕಾರಿ ನಿವಾಸ ಕಾವೇರಿಯಲ್ಲಿ ಅಹಿಂದ ನಾಯಕರು ಸಭೆ ನಡೆಸುತ್ತಿರುವುದು ಕುತೂಹಲಕ್ಕೆ ಕಾರಣವಾಗಿದೆ.

# ಡಿಸೆಂಬರ್‌ನ ಎಲ್ಲಾ ಸೋಮವಾರ ಪಿಲಿಕುಳ ವೀಕ್ಷಣೆಗೆ ಅವಕಾಶ

ಮಂಗಳೂರು – ಶಾಲಾ ಮಕ್ಕಳ ಪ್ರವಾಸ ಕಾರ್ಯಕ್ರಮದ ಪ್ರಯುಕ್ತ ಡಿಸೆಂಬರ್-2025 ರಂದು ಬರುವ ಎಲ್ಲಾ ಸೋಮವಾರಗಳಂದು ಪಿಲಿಕುಳ ಅಭಿವೃದ್ಧಿ ಪ್ರಾಧಿಕಾರದ ಎಲ್ಲಾ ವಿಭಾಗಗಳಾದ ಮೃಗಾಲಯ, ಪ್ರಾದೇಶಿಕ ವಿಜ್ಞಾನ ಕೇಂದ್ರ, ತಾರಾಲಯ, ಲೇಕ್ ಗಾರ್ಡನ್, ಬೊಟಾನಿಕಲ್ ಮ್ಯೂಸಿಯಂ ಮತ್ತು ಸಂಸ್ಕೃತಿ ಗ್ರಾಮವು ಸಾರ್ವಜನಿಕರ ವೀಕ್ಷಣೆಗೆ ಇತರೆ ಎಲ್ಲಾ ದಿನಗಳಂತೆ ತೆರೆದಿರುತ್ತದೆ ಎಂದು ಪಿಲಿಕುಳ ಅಭಿವೃದ್ಧಿ ಪ್ರಾಧಿಕಾರದ ಆಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಬೀದಿ ನಾಯಿಗಳ ಹಾವಳಿ : ವರದಿ ನೀಡಲು ಸೂಚನೆ

ಮಂಗಳೂರು – ಪುತ್ತೂರು ನಗರಸಭಾ ವ್ಯಾಪ್ತಿಯಲ್ಲಿನ ಎಲ್ಲಾ ಖಾಸಗಿ ಹಾಗೂ ಸರ್ಕಾರಿ ಶಿಕ್ಷಣ ಸಂಸ್ಥೆಗಳು, ಖಾಸಗಿ ಹಾಗೂ ಸರ್ಕಾರಿ ಆಸ್ಪತ್ರೆಗಳು, ಕ್ರೀಡಾ ಸಂಕೀರ್ಣಗಳು, ಬಸ್ ನಿಲ್ದಾಣಗಳು, ರೈಲ್ವೆ ನಿಲ್ದಾಣಗಳ ಮುಖ್ಯಸ್ಥರು ತಮ್ಮ ಸಂಸ್ಥೆಯ ಆವರಣದಲ್ಲಿ ಯಾವುದೇ ಬೀದಿ ನಾಯಿಗಳು ವಾಸವಿದ್ದಲ್ಲಿ ಅದನ್ನು ಪರಿಶೀಲಿಸಿ ಕೂಡಲೇ ಅದರ ಸಂಖ್ಯೆಯನ್ನು ಲೆಕ್ಕ ಮಾಡಿ ಪುತ್ತೂರು ನಗರಸಭೆ ಕಾರ್ಯಾಲಯಕ್ಕೆ ತಿಳಿಸಬೇಕು. ನಾಯಿಗಳು ವಾಸ ಮಾಡಲು ಅವಕಾಶ ಕೊಟ್ಟಲ್ಲಿ ಅವನ್ನು ಸ್ಥಳಾಂತರಿಸುವ ವೆಚ್ಚವನ್ನು ಸಂಸ್ಥೆಯಿಂದಲೇ ವಸೂಲಿ ಮಾಡಲಾಗುತ್ತದೆ. ಸರ್ವೋಚ್ಚ ನ್ಯಾಯಾಲಯದ ಆದೇಶ ಉಲ್ಲಂಘನೆ ಮಾಡಿದ್ದಲ್ಲಿ ನ್ಯಾಯಾಲಯದ ಆದೇಶದಂತೆ ತಮ್ಮ ವಿರುದ್ಧ ಕಾನೂನು ಕ್ರಮ ವಹಿಸಲಾಗುತ್ತದೆ ಎಂದು ಪುತ್ತೂರು ನಗರಸಭೆ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸಿಸಿಟಿವಿ ಅಳವಡಿಕೆ ಮತ್ತು ಸರ್ವಿಸಿಂಗ್ ತರಬೇತಿ : ಅರ್ಜಿ ಆಹ್ವಾನ

ಶಿವಮೊಗ್ಗ : ಬೆಂಗಳೂರು ಗ್ರಾಮಾಂತರ ಜಿಲ್ಲೆ ಹೊಸಕೋಟೆ ತಾಲ್ಲೂಕು ಸೊಣ್ಣಹಳ್ಳಿಪುರದಲ್ಲಿರುವ ಕೆನರಾ ಬ್ಯಾಂಕ್ ಗ್ರಾಮೀಣ ಸ್ವ ಉದ್ಯೋಗ ತರಬೇತಿ ಸಂಸ್ಥೆಯಲ್ಲಿ ಡಿ.15 ರಿಂದ 13 ದಿನಗಳ ಕಾಲ ನಿರುದ್ಯೋಗಿ ಪುರುಷರಿಗೆ ಉಚಿತ ಸಿಸಿಟಿವಿ ಅಳವಡಿಕೆ ಮತ್ತು ಸರ್ವಿಸಿಂಗ್ ತರಬೇತಿ ಶಿಬಿರವನ್ನು ಏರ್ಪಡಿಸಿದೆ. ದೂ.ಸಂ. 8970476050, 9591514154, 9686248369, 9505894247ಗಳಿಗೆ ಸಂಪರ್ಕಿಸಿ ತಮ್ಮ ಹೆಸರನ್ನು ನೋಂದಾಯಿಸಿಕೊಳ್ಳಬಹುದೆಂದು ಸಂಸ್ಥೆಯ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.


# ಸೈನಿಕ ಆರಾಮ ಗೃಹ ಶಿವಮೊಗ್ಗದಲ್ಲಿ ಬಾಡಿಗೆ ಕೊಠಡಿಗಳು ಲಭ್ಯ

ಶಿವಮೊಗ್ಗ : ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆ, ಶಿವಮೊಗ್ಗ ಇಲ್ಲಿ ಇರುವ 'ಸೈನಿಕ ಆರಾಮ ಗೃಹ'ದಲ್ಲಿ ಮಾಜಿ ಹಾಗೂ ಹಾಲಿ ಸೈನಿಕರು ಮತ್ತು ಅವರ ಅವಲಂಬಿತರಿಗೆ ವಾಸ್ತವ್ಯಕ್ಕಾಗಿ ಕೊಠಡಿಗಳನ್ನು ಬಾಡಿಗೆ ಆಧಾರದ ಮೇಲೆ ನೀಡಲಾಗುತ್ತದೆ. ಹೆಚ್ಚಿನ ಮಾಹಿತಿಗೆ ದೂರವಾಣಿ ಸಂಖ್ಯೆ : 9141166157 ಯಾವುದೇ ವೇಳೆಯಲ್ಲಿ ಸಂಪರ್ಕಿಸಬಹುದೆಂದು ಉಪ ನಿರ್ದೇಶಕರು (ಪ್ರಭಾರ), ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆ, ಶಿವಮೊಗ್ಗ ಇವರು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಜನವರಿಯಿಂದ 'ಆಹಾರ ಕಿಟ್' ವಿತರಣೆ: ಎನ್.ಎಸ್.ಭೋಸರಾಜು

ಮಡಿಕೇರಿ – ಚುನಾವಣಾ ಸಂದರ್ಭದಲ್ಲಿ ರಾಜ್ಯದ ಜನರಿಗೆ ಭರವಸೆ ನೀಡಿದಂತೆ 'ಪಂಚ ಗ್ಯಾರಂಟಿ' ಯೋಜನೆಗಳನ್ನು ಜಾರಿಗೊಳಿಸಿ ರಾಜ್ಯದ ಎಲ್ಲಾ ಜನರಿಗೆ ಒಂದಲ್ಲ ಒಂದು ಸೌಲಭ್ಯಗಳು ತಲುಪುವಂತೆ ಮಾಡುವಲ್ಲಿ ಸರ್ಕಾರ ಶ್ರಮಿಸುತ್ತಿದೆ ಎಂದು ಕೊಡಗು ಜಿಲ್ಲಾ ಉಸ್ತುವಾರಿ ಸಚಿವರಾದ ಎನ್.ಎಸ್.ಭೋಸರಾಜು ತಿಳಿಸಿದ್ದಾರೆ. ಮುಂದಿನ ಜನವರಿಯಿಂದ 'ಇಂದಿರಾ ಆಹಾರ ಕಿಟ್' ಯೋಜನೆ ಜಾರಿಗೆ ಬರಲಿದ್ದು, ಬಡ ಜನರ ಆರ್ಥಿಕ ಅಭಿವೃದ್ಧಿಗೆ ಸರ್ಕಾರ ಶ್ರಮಿಸುತ್ತಿದೆ ಎಂದು ಎನ್.ಎಸ್.ಭೋಸರಾಜು ವಿವರಿಸಿದರು.

# ದೇಣಿಗೆ ಸಂಗ್ರಹ: ಕಾನೂನು ಕ್ರಮಕ್ಕೆ ಆಗ್ರಹ



ಮಂಗಳೂರು: ತಲಪಾಡಿ ಶ್ರೀ ದುರ್ಗಾಪರಮೇಶ್ವರಿ ದೇಗುಲ ಹೆಸರಲ್ಲಿ ಅನಧಿಕೃತ ನಿಧಿ ಸಂಗ್ರಹಿಸಿ ಸಾರ್ವಜನಿಕ ಚಂಡಿಕಾ ಯಾಗ ನಡೆಸುತ್ತಿರುವುದಾಗಿ ಹಿಂದೂ ಧಾರ್ಮಿಕ ಸಂಸ್ಥೆಗಳು ಮತ್ತು ಧರ್ಮಾದಾಯ ದತ್ತಿಗಳ ಇಲಾಖೆ ಆಯುಕ್ತ ರಿಗೆ ಸಾರ್ವಜನಿಕರು ದೂರು ನೀಡಿದ್ದಾರೆ. ದೇವಸ್ಥಾನದಲ್ಲಿ ನ. 23 ರಂದು ದೇವಸ್ಥಾನದಲ್ಲಿ ಶಿವಳ್ಳಿ ಸಭಾ ಎನ್ನುವ ಸಂಘವು "ಸಾರ್ವಜನಿಕ ಚಂಡಿಕಾ ಯಾಗ" ಆಯೋಜಿಸಿದೆ. ತಲಪಾಡಿ ಕ್ಷೇತ್ರದ ವತಿಯಿಂದ ಈಗಾಗಲೇ ಚಾಲ್ತಿಯಲ್ಲಿರುವ ಸಾಂಪ್ರಾದಾಯಿಕವಾಗಿರುವ ಈ " ಚಂಡಿಕಾ ಯಾಗ " ಸೇವಯನ್ನು ದೇವಸ್ಥಾನದ ಮತ್ತು ದೇವರ ಕಾರಣೀಕ ಸಾನಿಧ್ಯ ಉಲ್ಲೇಖಿಸಿಕೊಂಡು ಖಾಸಗಿ ಸಂಘ ಒಂದು ಸ್ವ ಲಾಭಕ್ಕೆ ಬಳಸಿಕೊಂಡು ಊರ ಪರವೂರಿನ, ಕ್ಷೇತ್ರದ ಯಾ ಸಾರ್ವಜನಿಕ ಭಕ್ತರಿಂದ ದೇಣಿಗೆಯನ್ನು ಸಂಗ್ರಹಿಸುವ ಪಿತೂರಿ ನಡೆದಿರುವುದು ಮೇಲ್ನೋಟಕ್ಕೆ ಕರಪತ್ರ ಹಾಗೂ ಇತರ ಬಿತ್ತಿಪತ್ರದಿಂದ ಕಂಡು ಬಂದಿದೆ. ಇಂತಹ ಸಂಘದ ವಿರುದ್ಧ ಕಾನೂನಾತ್ಮಕವಾಗಿ ಕ್ರಮ ಜರುಗಿಸುವಂತೆ ರಘುರಾಮ್ ರಾವ್ ಕೆ. ಅವರು ದೂರು ನೀಡಿದ್ದಾರೆ.

# ಆಳ್ವಾಸ್ ವಿದ್ಯಾರ್ಥಿ ವೇದಿಕೆ 'ಅಭಿವ್ಯಕ್ತಿ'ಯ 2025 ಉದ್ಘಾಟನೆ



ಮೂಡುಬಿದಿರೆ: ಆಳ್ವಾಸ್ ಸ್ವಾಯತ್ತ ಕಾಲೇಜಿನ ಸ್ನಾತಕೋತ್ತರ ಪತ್ರಿಕೋದ್ಯಮ ಮತ್ತು ಸಮೂಹ ಸಂವಹನ ವಿಭಾಗದ ವಿದ್ಯಾರ್ಥಿ ವೇದಿಕೆ 'ಅಭಿವ್ಯಕ್ತಿ'ಯ 2025ನೇ ಸಾಲಿನ ಚಟುವಟಿಕೆಗಳ ಉದ್ಘಾಟನಾ ಕಾರ್ಯಕ್ರಮ ಕಾಲೇಜಿನ ಸಭಾಂಗಣದಲ್ಲಿ ನೆರವೇರಿತು. ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಆಳ್ವಾಸ್ ಪದವಿ ಪೂರ್ವ ಕಾಲೇಜಿನ ಇಂಗ್ಲೀಷ್ ಉಪನ್ಯಾಸಕ ಹಾಗೂ ಖ್ಯಾತ ನಿರೂಪಕ ರಾಜೇಶ್ ಡಿ'ಸೋಜಾ, ಯಶಸ್ಸಿನ ಮೂಲತತ್ವಗಳನ್ನು ವಿದ್ಯಾರ್ಥಿಗಳಿಗೆ ಮನದಟ್ಟು ಗೊಳಿಸಿದರು. ಈ ಸಂದರ್ಭದಲ್ಲಿ 2025-26ನೇ ಸಾಲಿನ ನೂತನ ಪದಾಧಿಕಾರಿಗಳಿಗೆ ಜವಾಬ್ದಾರಿಗಳನ್ನು ನೀಡಲಾಯಿತು. ಮಂಜುಳಾ ಹಾಗೂ ವಿಧಿಶಾ ವಿದ್ಯಾರ್ಥಿ ವೇದಿಕೆಯ ಅಧ್ಯಕ್ಷ ಹಾಗೂ ಉಪಾಧ್ಯಕ್ಷರಾಗಿ ಅಧಿಕಾರ ವಹಿಸಿ ಕೊಂಡರು. ಕಾರ್ಯಕ್ರಮದಲ್ಲಿ ಆಳ್ವಾಸ್ ಕಾಲೇಜಿನ ಪತ್ರಿಕೋದ್ಯಮ ವಿಭಾಗದ ಮುಖ್ಯ ಸ್ಥ ಪ್ರಸಾದ್ ಶೆಟ್ಟಿ, ಕಾರ್ಯಕ್ರಮ ಸಂಯೋಜಕ ಅಕ್ಷಯ್ ಕುವಾರ್, ಉಪನ್ಯಾಸಕರು ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು. ರಕ್ಷಿತಾ ಚಪ್ಪರಿಕೆ ಹಾಗೂ ಮಿಯಾ ಕೆನಡಿ ಕಾರ್ಯಕ್ರಮ ನಿರ್ವಹಿಸಿದರು.

# ಪರಸ್ಪರ ಗೌರವಿಸುವುದು ಸಂಘಟನೆಗಳ ಗುರಿಯಾಗಲಿ : ಯು. ಟಿ. ಖಾದರ್




ಮಂಗಳೂರು : ಸಮಾಜದಲ್ಲಿ ಪರಸ್ಪರ ಗೌರವಿಸಿ ಎಲ್ಲರನ್ನೂ ಜೊತೆಯಾಗಿ ಬೆಳೆಸುವುದು ಸಂಘಟನೆಗಳ ಗುರಿಯಾಗಲಿ. ಈ ಶಕ್ತಿ ಬಂಟ ಸಮಾಜಕ್ಕಿದೆ ಎಂದು ವಿಧಾನ ಸಭಾ ಸ್ಪೀಕರ್ ಯು.ಟಿ.ಖಾದರ್ ಹೇಳಿದ್ದಾರೆ. ಬಂಟರ ಯಾನೆ ನಾಡವರ ಮಾತೃ ಸಂಘದ ಮೈದಾನದಲ್ಲಿ ಜಾಗತಿಕ ಬಂಟರ ಸಂಘಗಳ ಒಕ್ಕೂಟದ 29ನೇ ವಾರ್ಷಿಕ ಮಹಾಸಭೆ ಬಹಿರಂಗ ಅಧಿವೇಶನ ಮತ್ತು ಸಾಧಕರಿಗೆ ಸನ್ಮಾನ ಕಾರ್ಯಕ್ರಮದ ಅತಿಥಿಯಾಗಿ ಭಾಗವಹಿಸಿ ಮಾತನಾಡಿದರು. ಕಾರ್ಯಕ್ರಮವನ್ನು ಅತಿಥಿಗಳು ದೀಪ ಬೆಳಗಿಸುವ ಮೂಲಕ ಉದ್ಘಾಟಿಸಿದರು. ಒಡಿಯೂರು ಶ್ರೀ ಗುರುದೇವಾನಂದ ಸ್ವಾಮೀಜಿ ಮಾತನಾಡಿ ಶುಭ ಹಾರೈಸಿದರು. ಜಾಗತಿಕ ಬಂಟರ ಸಂಘಗಳ ಒಕ್ಕೂಟದ ಅಧ್ಯಕ್ಷ ಐಕಳ ಹರೀಶ್ ಶೆಟ್ಟಿ ಸಮಾರಂಭದ ಅಧ್ಯಕ್ಷತೆ ವಹಿಸಿದ್ದರು.

# ನವೀಕೃತ ಇಲೆಕ್ಟ್ರಾನಿಕ್ ಶೂಟಿಂಗ್ ರೇಂಜ್ ಉದ್ಘಾಟನೆ



ಮಂಗಳೂರು : ನಗರದ ರೈಫಲ್ ಕ್ಲಬ್‌ನಿಂದ ನೂತನವಾಗಿ ನವೀಕರಿಸಲ್ಪಟ್ಟ 7ಲೇನ್‌ನ ಸಂಪೂರ್ಣ ಇಲೆಕ್ಟ್ರಾನಿಕ್ ಶೂಟಿಂಗ್ ರೇಂಜ್ ಡಿ.1ರಂದು ಉದ್ಘಾಟನೆಗೊಳ್ಳಲಿದೆ. ನವೀಕೃತ ಶೂಟಿಂಗ್ ರೇಂಜ್‌ನ ಉದ್ಘಾಟನೆಯನ್ನು ಡಿ. 1ರಂದು ಜುಗುಲ್ ಟವರ್ಸ್‌ನ 4ನೇ ಮಹಡಿಯಲ್ಲಿರುವ ಮಂಗಳೂರು ರೈಫಲ್ ಕ್ಲಬ್ ನಲ್ಲಿ ಬೆಳಗ್ಗೆ 10 ಗಂಟೆಗೆ ಸ್ಪೀಕರ್ ಯು.ಟಿ.ಖಾದರ್ ನೆರವೇರಿಸಲಿದ್ದಾರೆ. ಎಂಆರ್‌ಸಿಯಿಂದ ತರಬೇತಿ ಪಡೆದ ಮೂವರು ಕ್ರೀಡಾಪಟುಗಳು ಭಾರತೀಯ ರಾಷ್ಟ್ರೀಯ ತಂಡದ ಆಯ್ಕೆ ಪರೀಕ್ಷೆಗಳಿಗೆ ಈಗಾಗಲೇ ಅರ್ಹತೆ ಪಡೆದಿದ್ದಾರೆ. ಕರಾವಳಿ ಕರ್ನಾಟಕದ ಏಕೈಕ 10 ಮೀಟರ್ ಏರ್ ರೈಫಲ್ ಮತ್ತು ಏರ್ ಪಿಸ್ತೂಲ್ ಶೂಟಿಂಗ್ ಅಕಾಡೆಮಿಯಾಗಿರುವ ಮಂಗಳೂರು ರೈಫಲ್ ಕ್ಲಬ್ (ಎಂಆರ್‌ಸಿ) ಒಲಿಂಪಿಕ್ ಶೂಟಿಂಗ್ ಕೀಡೆಗಳಿಗೆ ಸ್ಥಳೀಯ ಪ್ರತಿಭೆಗಳಿಗೆ ತರಬೇತು ನೀಡುವ ಕಾರ್ಯವನ್ನು ನಡೆಸುತ್ತಿದೆ.

# ಸತ್ಯ ದಾಖಲೆಯಲ್ಲಿರುತ್ತೆ : ಯು. ಟಿ. ಖಾದರ್



ಮಂಗಳೂರು : ಸತ್ಯ ಯಾವಾಗಲೂ ದಾಖಲೆಯಲ್ಲಿ ಇರುತ್ತದೆ. ಆರೋಪ ಮಾಡಿ ದವರು ಯಾವುದನ್ನೂ ಲಿಖಿತವಾಗಿ ಸ್ಪೀಕರ್ ಕಚೇರಿಗೆ ನೀಡಿಲ್ಲ. ಹಾಗಾಗಿ ಇದೆಲ್ಲಾ ಚರ್ಚೆ ಯಾಗುವ ವಿಷಯವೇ ಅಲ್ಲ ಎಂದು ಸ್ಪೀಕರ್ ಯು.ಟಿ. ಖಾದರ್ ತಮ್ಮ ವಿರುದ್ಧದ ಆರೋಪದ ಬಗ್ಗೆ ಸ್ಪಷ್ಟನೆ ನೀಡಿದ್ದಾರೆ. ಮಾಧ್ಯಮದವರ ಪ್ರಶ್ನೆಗೆ ಪ್ರತಿಕ್ರಿಯಿಸಿದ ಅವರು, ಆರೋಪ ಮಾಡಿದವರು ಮಸಾಜ್ ಚೇರ್ ಬಗ್ಗೆ ಮಾತನಾಡಿದ್ದಾರೆ. ಆದರೆ ಅದನ್ನು ಕಂಪನಿಯವರು ಉಚಿತವಾಗಿ ಹಾಕಿರುವುದು. ಅಧಿವೇಶನದ ಸಂದರ್ಭ ಶಾಸಕರಿಗೆ ಉಚಿತ ನೆಲೆಯಲ್ಲಿ ಈ ಮಸಾಜ್ ಚೇರ್‌ನಲ್ಲಿ ರಿಲ್ಯಾಕ್ಸ್ ಆಗಲು ಕಂಪನಿಯವರು ಅವಕಾಶ ನೀಡಿದ್ದಾರೆ. ಆ ಬಳಿಕ ಶಾಸಕರು ತಮಗೆ ಬೇಕಿದ್ದಲ್ಲಿ ಖರೀದಿಸಿಕೊಳ್ಳಬಹುದು. ಶಾಸಕರಿಗೆ ಅಗತ್ಯವಾದ ಸವಲತ್ತು ನೀಡುವುದು ಸ್ಪೀಕರ್ ಆಗಿ ನನ್ನ ಜವಾಬ್ದಾರಿ, ಜವಾಬ್ದಾರಿ ಸ್ಥಾನದಲ್ಲಿ ಇರುವವರು ಜವಾಬ್ದಾರಿಯುತವಾಗಿ ನಡೆದುಕೊಳ್ಳಬೇಕು. ಏನೇ ಆರೋಪ ಮಾಡುವವರು ಮೊದಲು ಆ ಬಗ್ಗೆ ಅಧ್ಯಯನ ಮಾಡಲಿ ಎಂದು ಹೇಳಿದರು.

# ಡಾ॥ ಡಿ. ವೀರೇಂದ್ರ ಹೆಗ್ಗಡೆಯವರ ಅಂಚೆ ಚೀಟಿ ಬಿಡುಗಡೆ





ಶ್ರೀ ಕ್ಷೇತ್ರ ಧರ್ಮಸ್ಥಳ : ಧರ್ಮಾಧಿಕಾರಿಗಳಾದ ಡಾ॥ ಡಿ. ವೀರೇಂದ್ರ ಹೆಗ್ಗಡೆಯವರು ಕರ್ನಾಟಕ ರಾಜ್ಯದಲ್ಲಿ ಗ್ರಾಮಾಭಿವೃದ್ಧಿಗೆ ನೀಡಿದ ಕೊಡುಗೆಯನ್ನು ಪರಿಗಣಿಸಿ ಭಾರತೀಯ ಜೀವ ವಿಮಾ ನಿಗಮವು ತಮ್ಮ ವಿಮಾ ಸೇವೆಯನ್ನು ಗ್ರಾಮ ಗ್ರಾಮಗಳಿಗೆ ನೀಡುತ್ತಿರುವ ಪಾಲುದಾರ ಸಂಸ್ಥೆಯಾದ ಗ್ರಾಮಾಭಿವೃದ್ಧಿ ಯೋಜನೆಯೊಂದಿಗೆ ಜಂಟಿಯಾಗಿ ಸೇರಿಕೊಂಡು ಡಾ॥ ಡಿ. ವೀರೇಂದ್ರ ಹೆಗ್ಗಡೆಯವರ ಅಂಚೆ ಚೀಟಿಯನ್ನು ಬಿಡುಗಡೆಗೊಳಿಸಲಾಯಿತು. ಅನೇಕ ಕ್ಷೇತ್ರಗಳಲ್ಲಿ ಪೂಜ್ಯರು ನೀಡಿದ ಅನನ್ಯ ಕೊಡುಗೆಗಳನ್ನು ಗೌರವಿಸುವ ಸಲುವಾಗಿ ಮೂರು ಸಂಸ್ಥೆಗಳು ಭಾರತೀಯ ಅಂಚೆ ಇಲಾಖೆಯಿಂದ ಶ್ರೀ ಹೆಗ್ಗಡೆಯವರ ಅಂಚೆ ಚೀಟಿಯನ್ನು ಶ್ರೀ ಹೆಗ್ಗಡೆಯವರ ಜನ್ಮ ದಿನದಂದು ಬಿಡುಗಡೆಗೊಳಿಸಿದ್ದು ವಿಶೇಷವಾಗಿತ್ತು. ಶ್ರುತಿ ಎಂಬ ರೋಬೋ ಅಂಚೆ ಚೀಟಿಯನ್ನು ಬಿಡುಗಡೆಗೆ ವೇದಿಕೆಗೆ ತಂದುಕೊಟ್ಟಿದ್ದು ಎಲ್ಲರ ಮೆಚ್ಚುಗೆಗೆ ಪಾತ್ರವಾಯಿತು.

# ಆಳ್ವಾಸ್‌ನ 11 ಮಕ್ಕಳು 14 ಪದಕದೊಂದಿಗೆ ರಾಷ್ಟ್ರ ಮಟ್ಟಕ್ಕೆ



ಮೂಡುಬಿದಿರೆ: ಜಿಲ್ಲಾ ಪಂಚಾಯತ್ ಹಾಸನ ಹಾಗೂ ಶಾಲಾ ಶಿಕ್ಷಣ ಇಲಾಖೆ, ಹಾಸನ ಇವುಗಳ ಸಂಯುಕ್ತ ಆಶ್ರಯದಲ್ಲಿ ಜಿಲ್ಲಾ ಕ್ರೀಡಾಂಗಣದಲ್ಲಿ ನಡೆದ 14 ವರ್ಷ ವಯೋಮಿತಿಯ ಬಾಲಕ ಮತ್ತು ಬಾಲಕಿಯರ ಅಥ್ಲೆಟಿಕ್ಸ್ ಕ್ರೀಡಾಕೂಟದಲ್ಲಿ ದಕ್ಷಿಣ ಕನ್ನಡ ಜಿಲ್ಲೆಯನ್ನು ಪ್ರತಿನಿಧಿಸಿದ ಆಳ್ವಾಸ್ ಶಾಲೆಯ ಕ್ರೀಡಾಪಟಗಳು ಒಟ್ಟು 12 ಚಿನ್ನ ಮತ್ತು 02 ಬೆಳ್ಳಿ ಪದಕಗಳೊಂದಿಗೆ ಒಟ್ಟು 14 ಪದಕಗಳನ್ನು ಗಳಿಸಿ, ದಕ್ಷಿಣ ಕನ್ನಡ ಜಿಲ್ಲೆ, ಬಾಲಕ ಬಾಲಕಿಯರ ವಿಭಾಗದಲ್ಲಿ ತಂಡ ಪ್ರಶಸ್ತಿಯ ಜೊತೆಗೆ ಸಮಗ್ರ ಪ್ರಶಸ್ತಿಯನ್ನು ಪಡೆದುಕೊಳ್ಳುವಲ್ಲಿ ಪ್ರಮುಖ ಪಾತ್ರವಹಿಸಿದ್ದಾರೆ. ಬಾಲಕರ ವಿಭಾಗದ 4*100ಮೀ ರಿಲೇ ಸ್ಪರ್ಧೆಯಲ್ಲಿ ನೂತನ ಕೂಟ ದಾಖಲೆಯನ್ನು ನಿರ್ಮಿಸಿದ್ದಾರೆ.

# ಕೇರಳ ಪೊಲೀಸ್ ಅಧಿಕಾರಿಗಳೊಂದಿಗೆ ಬಾರ್ಡರ್ ಕ್ರೈಂ ಮೀಟಿಂಗ್ !




ಮಂಗಳೂರು: ಅಪರಾಧ ಪ್ರಕರಣಗಳ ನಿಯಂತ್ರಣ, ಆರೋಪಿಗಳ ಪತ್ತೆ ಕಾರ್ಯದಲ್ಲಿ ಜಂಟಿ ಕಾರ್ಯಾಚರಣೆ ಸೇರಿದಂತೆ ವಿವಿಧ ವಿಚಾರಗಳ ಕುರಿತು ಚರ್ಚಿಸಲು ಕೇರಳದ ಪೊಲೀಸ್ ಅಧಿಕಾರಿಗಳೊಂದಿಗೆ ನಗರದ ಕಮಿಷನರ್ ಕಚೇರಿಯಲ್ಲಿ ಬಾರ್ಡರ್ ಕ್ರೈಂ ಮೀಟಿಂಗ್ ನಡೆಯಿತು. ಮಂಗಳೂರು ನಗರ ಪೊಲೀಸರ ಆಯುಕ್ತ ಸುಧೀರ್ ಕುಮಾರ್ ರೆಡ್ಡಿ ಅವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ಕೇರಳದ ಕಣ್ಣೂರು ವಲಯದ ಡಿಐಜಿಪಿ ಯತೀಶ್ಚಂದ್ರ ಜಿ.ಎಚ್. ಮತ್ತು ಕಾಸರಗೋಡು ಎಸ್.ಪಿ. ವಿ ಜಯ ಭರತ್ ರೆಡ್ಡಿ ಮುಂತಾದವರು ಭಾಗವಹಿಸಿದ್ದರು. ಉಭಯ ರಾಜ್ಯಗಳ ಗಡಿ ಭಾಗಗಳಲ್ಲಿ ನಡೆಯುವ ವಿವಿಧ ಅಪರಾಧ ಪ್ರಕರಣಗಳ ಬಗ್ಗೆ ಮಾಹಿತಿ ವಿನಿಮಯ ಮಾಡಿಕೊಳ್ಳಲಾಯಿತು.

# ಕಂಬಳಕ್ಕೆ ಅನುದಾನದ ಅಗತ್ಯವಿದೆ : ಡಾ. ದೇವಿಪ್ರಸಾದ್ ಶೆಟ್ಟಿ



ಮಂಗಳೂರು : ಕರುನಾಡಿನ ಜಾನಪದ ಕಲೆ ಕಂಬಳ ರಾಜ್ಯ ಸರಕಾರದ ಕ್ರೀಡಾ ಪ್ರಾಧಿಕಾರದಿಂದ ಮಾನ್ಯತೆ ಪಡೆದಿದ್ದು, ಈ ಕ್ರೀಡೆಗೆ ಸರಕಾರ 5 ಕೋಟಿ ರೂ. ಅನುದಾನ ಒದಗಿಸಬೇಕು ಎಂದು ರಾಜ್ಯ ಕಂಬಳ ಅಸೋಸಿಯೇಶನ್ ಅಧ್ಯಕ್ಷ ಡಾ.ಐಕಳಬಾವ ದೇವಿಪ್ರಸಾದ್ ಶೆಟ್ಟಿ ಒತ್ತಾಯಿಸಿದ್ದಾರೆ. ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳಲ್ಲಿ ಈ ವರ್ಷ 25 ಜೋಡುಕರೆ ಕಂಬಳಗಳು' ನಡೆಯಲಿದ್ದು ಇದಕ್ಕೆ ಮುಂದಿನ ಬಜೆಟ್‌ನಲ್ಲಿ 5 ಕೋಟಿ ರೂ. ಮೀಸಲಿಡಬೇಕು. ಕಳೆದ ವರ್ಷ ಪ್ರವಾಸೋದ್ಯಮ ಇಲಾಖೆ 10 ಕಂಬಳಗಳಿಗೆ ತಲಾ 5 ಲಕ್ಷ ರೂ.ಗಳಂತೆ ಒಟ್ಟು 50 ಲಕ್ಷ ರೂ. ಬಿಡುಗಡೆ ಮಾಡಿತ್ತು. ಇದನ್ನು 20 ಕಂಬಳಗಳಿಗೆ ಹಂಚಲಾಗಿದೆ. ಕ್ರೀಡಾ ಇಲಾಖೆ ಪ್ರತಿ ಕಂಬಳಕ್ಕೆ 2 ಲಕ್ಷ ರೂ. ಬಿಡುಗಡೆ ಮಾಡಿತ್ತು. ಒಂದು ಕಂಬಳ ಆಯೋಜನೆಗೆ 40ರಿಂದ 50ಲಕ್ಷ ರೂ. ವೆಚ್ಚವಾಗುತ್ತದೆ. ಚಿನ್ನವನ್ನು ಬಹುಮಾನವಾಗಿ ನೀಡಲಾಗುತ್ತಿದೆ. ಆದರೆ ಚಿನ್ನದ ದರ ವಿಪರೀತ ಹೆಚ್ಚಾಗಿರುವುದರಿಂದಲೂ ಹೊರೆಯಾಗಿದೆ. ಕಂಬಳದಿಂದ ಕ್ರೀಡೆ ಮತ್ತು ಪ್ರವಾಸೋದ್ಯಮ ಇಲಾಖೆಗಳಿಗೆ ಪ್ರಯೋಜನವಾಗುತ್ತಿರುವ ಕಾರಣ ಪ್ರತಿ ಕಂಬಳಕ್ಕೆ ಕನಿಷ್ಠ 5 ಲಕ್ಷ ರೂ. ಪ್ರೋತ್ಸಾಹಧನ ಬಿಡುಗಡೆ ಮಾಡಬೇಕೆಂದು ಒತ್ತಾಯ ಮಾಡಿದರು.

# ಉಳ್ಳಾಲ ಶ್ರೀನಿವಾಸ ಮಲ್ಯರ 124ನೇ ಜನ್ಮದಿನಾಚರಣೆ



ಮಂಗಳೂರು ನಗರದ ಕದ್ರಿ ಜೋಗಿ ಮಠ ಸಮೀಪದ ಉಳ್ಳಾಲ ಶ್ರೀನಿವಾಸ ಮಲ್ಯ ಉದ್ಯಾವನದಲ್ಲಿ ಉಳ್ಳಾಲ ಶ್ರೀನಿವಾಸ್ ಮಲ್ಯ ಜನ್ಮ ದಿನ ಆಚರಣಾ ಸಮಿತಿ ನೇತೃತ್ವದಲ್ಲಿ ಆಧುನಿಕ ಮಂಗಳೂರು ನಿರ್ಮಾತೃ ಉಳ್ಳಾಲ ಶ್ರೀನಿವಾಸ ಮಲ್ಯರ 124ನೇ ಜನ್ಮದಿನಾಚರಣೆ ಕಾರ್ಯಕ್ರಮ ನಡೆಯಿತು. ಈ ಸಂದರ್ಭದಲ್ಲಿ 2025ನೇ ಸಾಲಿನ ಜಿಲ್ಲಾ ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತರಾದ ಸೇವ್ ಲೈಫ್ ಚಾರಿಟೇಬಲ್ ಟ್ರಸ್ಟ್‌ನ ಅಧ್ಯಕ್ಷರಾದ ಅರ್ಜುನ್ ಭಂಡಾರ್ಕರ್‌ರವರನ್ನು ಹಾಗೂ ಮಲ್ಯ ಕುಟುಂಬಸ್ಥರಾದ ಉಳ್ಳಾಲ ನರಹರಿ ಮಲ್ಯರವರನ್ನು ಗೌರವಿಸಲಾಯಿತು. ಸಮಿತಿಯ ಸಂಚಾಲಕಿ ಶ್ರೀಮತಿ ಮಂಜುಳಾ ನಾಯಕ್ ಪ್ರಾಸ್ತಾವಿಕವಾಗಿ ಮಾತನಾಡಿ ಶ್ರೀನಿವಾಸ್ ಮಲ್ಯರ ಕೊಡುಗೆಯನ್ನು ಸ್ಮರಿಸಿ ದರು. ಮಲ್ಯ ಜನ್ಮ ದಿನ ಆಚರಣ ಸಮಿತಿಯ ಪದಾಧಿಕಾರಿಗಳಾದ ನೀತ್ ಶರಣ್, ರಾಜೇಶ್ ದೇವಾಡಿಗ,ಟಿಸಿ ಗಣೇಶ್, ಹೊನಯ್ಯ, ಯೋ ಗೀಶ್ ನಾಯಕ್, ಮಮತಾ ಕುಡ್ವ, ವಿದ್ಯಾ ಶೆಣೈ, ನಿನಾ ಕೆ.ಸಿ ಮತ್ತಿತರು ಉಪಸ್ಥಿತರಿದ್ದರು.

# ಸುದ್ದಿ ತುಣುಕು

ಎಐ ತಂತ್ರಜ್ಞಾನದ ಮೂಲಕ ಚಂದಾದಾರರಿಗೆ ವಂಚನೆ ಮಾಡಿದ ಆರೋಪದ ಹಿನ್ನೆಲೆಯಲ್ಲಿ ಎರಡು ಗೇಮಿಂಗ್ ಕಂಪನಿಗಳಿಗೆ ಜಾರಿ ನಿರ್ದೇಶನಾಲಯ 523.57 ಕೋಟಿ ಠೇವಣಿ ಮುಟ್ಟುಗೋಲು ಹಾಕಿಕೊಂಡಿದೆ.

ಸರ್ಕಾರಿ ಶಾಲೆಯ ವಿದ್ಯಾರ್ಥಿಗಳಲ್ಲಿ ಆತ್ಮವಿಶ್ವಾಸ ತುಂಬಲು, ಭವಿಷ್ಯದ ಶೈಕ್ಷಣಿಕ ಸವಾಲುಗಳಿಗೆ ಸಜ್ಜುಗೊಳಿಸಲು ಮಂಗಳೂರಿನ ವ್ಯಕ್ತಿಯೊಬ್ಬರು ರಾಜ್ಯಾದ್ಯಂತ 'ಡ್ರೀಮ್ಸ್ ಆನ್ ವೀಲ್ಸ್' ಬೈಕ್ ಯಾತ್ರೆ ಆರಂಭಿಸಿದ್ದಾರೆ.

ಬೆಳಗಾವಿ ಸುವರ್ಣ ವಿಧಾನಸೌಧದಲ್ಲಿ ನಡೆದ ರಾಣಿ ಚನ್ನಮ್ಮ ವಿಶ್ವವಿದ್ಯಾಲಯದ 14ನೇ ಘಟಿಕೋತ್ಸವದಲ್ಲಿ ರ‍್ಯಾಂಕ್ ಬಂದ 39 ವಿದ್ಯಾರ್ಥಿಗಳಿಗೆ ಚಿನ್ನದ ಪದಕ ವಿತರಿಸಲಾಯಿತು.

10 ಮಂದಿ ಸರ್ಕಾರಿ ಅಧಿಕಾರಿಗಳ ಮೇಲೆ ದಾಳಿ ನಡೆಸಿದ ಲೋಕಾಯುಕ್ತ ಅಧಿಕಾರಿಗಳು, ಒಟ್ಟು 35.31 ಕೋಟಿ ಮೌಲ್ಯದ ಆಸ್ತಿ ಪತ್ತೆಹಚ್ಚಿರುವುದಾಗಿ ಮಾಧ್ಯಮ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ರಾಮದುರ್ಗದಲ್ಲಿಂದು ಸಾರ್ವಜನಿಕರಿಗೆ ಮಹಾಂತೇಶ ಅವರ ಅಂತಿಮ ದರ್ಶನಕ್ಕೆ ವ್ಯವಸ್ಥೆ ಮಾಲಾಗಿದ್ದು, ಸರ್ಕಾರಿ ಗೌರವದೊಂದಿಗೆ ಅಂತ್ಯಕ್ರಿಯೆ ನಡೆಯಲಿದೆ ಗ್ರಾಮಸ್ಥರು ಹೇಳಿದ್ದಾರೆ.

ಕರ್ನಾಟಕ ರಾಜ್ಯ ಕ್ರಿಕೆಟ್ ಸಂಸ್ಥೆಯ ಅಧ್ಯಕ್ಷರಾಗಿ ಮಾಜಿ ಕ್ರಿಕೆಟಿಗ ವೆಂಕಟೇಶ್ ಪ್ರಸಾದ್ ಅವರು ಅವಿರೋಧವಾಗಿ ಆಯ್ಕೆಯಾಗುವ ಸಾಧ್ಯತೆ ಇದೆ.

ಕನೇರಿ ಮಠದ ಅದೃಶ್ಯ ಕಾಡಸಿದ್ದೇಶ್ವರ ಸ್ವಾಮೀಜಿ ಮುಂದಿನ ವರ್ಷದ ಜನವರಿ 3ರ ವರೆಗೆ ಧಾರವಾಡ ಜಿಲ್ಲೆ ಪ್ರವೇಶದಂತೆ ನಿರ್ಬಂಧಿಸಿ ಹೊರಡಿಸಿದ್ದ ಆದೇಶವನ್ನು ಹೈಕೋರ್ಟ್‌ನ ಧಾರವಾಡ ಪೀಠ ರದ್ದುಗೊಳಿಸಿದೆ.

ಬೆಂಗಳೂರಿನಲ್ಲಿ ನಡೆದ ಎಟಿಎಂ ವಾಹನ ದರೋಡೆ ಪ್ರಕರಣದಲ್ಲಿ ಸಿಕ್ಕಿಬಿದ್ದ ಆರೋಪಿ ಕೊಲೆ ಪ್ರಕರಣದಲ್ಲಿಯೂ ಭಾಗಿಯಾಗಿರುವ ವಿಚಾರ ಬಯಲಾಗಿದೆ.

ಅಂಧರ T20 ವಿಶ್ವಕಪ್ ಗೆದ್ದ ತಂಡದಲ್ಲಿ ರಾಜ್ಯದಿಂದ ಮೂವರಿದ್ದರು. ಇವರಲ್ಲಿ ಶಿವಮೊಗ್ಗ ಜಿಲ್ಲೆಯ ಹೊಸನಗರ ತಾಲೂಕಿನ ಬರುವೆ ಗ್ರಾಮದ ಕಾವ್ಯ ಸಹ ಒಬ್ಬರು.

ಅಪರೂಪದ ಮತ್ತು ಅಳಿವಿನಂಚಿನಲ್ಲಿರುವ ಕಸ್ತೂರಿ ಜಿಂಕೆ ಪಶ್ಚಿಮ ಬಂಗಾಳದ ನಿಯೋರಾ ಕಣಿವೆ ರಾಷ್ಟ್ರೀಯ ಉದ್ಯಾನವನದಲ್ಲಿ 70 ವರ್ಷಗಳ ಬಳಿಕ ಕಂಡುಬಂದಿದೆ.

ರೆಜಿಮೆಂಟ್‌ನ ಮುಖ್ಯಸ್ಥರಾಗಿದ್ದುಕೊಂಡು ದೇವಾಲಯ, ಗುರುದ್ವಾರಗಳ ಪ್ರವೇಶ ನಿರಾಕರಿಸುತ್ತಿದ್ದ ಕ್ರೈಸ್ತ ಸೇನಾಧಿಕಾರಿಯ ವಜಾ ಆದೇಶವನ್ನು ಸುಪ್ರೀಂ ಕೋರ್ಟ್ ಎತ್ತಿಹಿಡಿದಿದೆ.

ಅಪ್ರಾಪ್ತನಿಗೆ ಬೈಕ್ ಓಡಿಸಲು ಕೊಟ್ಟ ಬೈಕ್ ಮಾಲೀಕನಿಗೆ 26 ಸಾವಿರ ರೂಪಾಯಿ ದಂಡದ ಜೊತೆಗೆ ಇಡೀ ದಿನ ನ್ಯಾಯಾಲಯದ ಆವರಣವನ್ನು 'ಕಾಯುವ ಶಿಕ್ಷೆ' ನೀಡಿ ಇಲ್ಲಿನ ಸಿವಿಲ್ ನ್ಯಾಯಾಧೀಶರು ಆದೇಶಿಸಿದ್ದಾರೆ.

ಮೈಸೂರಲ್ಲಿ ಸುಸಜ್ಜಿತವಾದ ಕರ್ನಾಟಕ ಪೊಲೀಸ್ ವಸ್ತು ಸಂಗ್ರಹಾಲಯ ಮಾಡಲಾಗುವುದು ಎಂದು ಗೃಹ ಸಚಿವ ಡಾ.ಜಿ.ಪರಮೇಶ್ವರ್ ತಿಳಿಸಿದರು.

ನನ್ನಂತೆಯೇ ಹಲವರಿಗೆ ಕನಸು ಕಾಣುವ ಶಕ್ತಿ ಮತ್ತು ಅದರ ಕಡೆಗೆ ಕೆಲಸ ಮಾಡುವ ಬಲವನ್ನು ಈ ಸಂವಿಧಾನ ನೀಡಿದೆ ಎಂದು ಪ್ರಧಾನಿ ಮೋದಿ ತಿಳಿಸಿದ್ದಾರೆ.

# ಮಾವಿನಕಾಯಿ ಮಸಲಾಅನ್ನ



**ಬೇಕಾಗುವ ಸಾಮಾಗ್ರಿಗಳು :**

ಸೋನಾ ಮಸೂರಿ ಅಕ್ಕಿ - 2 ಕಪ್
ಮಾವಿನ ತುರಿ - 1/2 ಕಪ್
ಹಸಿಮೆಣಸಿನಕಾಯಿ - 5
ಬೆಳ್ಳುಳ್ಳಿ - 5 ಎಸಳು
ಈರುಳ್ಳಿ - 2 ಚಿಕ್ಕದು
ಕೊತ್ತಂಬರಿ ಸೊಪ್ಪು - ಸ್ವಲ್ಪ
ಜೀರಿಗೆ - 1/2 ಚಮಚ
ಕಾಳು ಮೆಣಸು - 5 ಕಾಳು
ತೆಂಗಿನ ಎಣ್ಣೆ - 5 ಚಮಚ
ಸಾಸಿವೆ - 1 ಚಮಚ
ಕರಿಬೇವು ಒಗ್ಗರಣೆಗೆ
ಕಡ್ಲೆ ಬೇಳೆ - 1 ಚಮಚ
ಉದ್ದಿನ ಬೇಳೆ - 1 ಚಮಚ
ನೆಲಕಡ್ಲೆ - 1 ಚಮಚ
ಅರಶಿನ - ಚಿಟಿಕೆ
ಉಪ್ಪು - ರುಚಿಗೆ

**ಮಾಡುವ ವಿಧಾನ :**

ಮೊದಲಿಗೆ ಕುಕ್ಕರಿನಲ್ಲಿ ಅಕ್ಕಿ ಹಾಕಿ ಎರಡರ ಅಳತೆಯಲ್ಲಿ ನೀರು, ಸ್ವಲ್ಪ ಉಪ್ಪು ಸೇರಿಸಿ ಎರಡು ವಿಸಿಲ್ ಬರುವ ಹಾಗೇ ಬೇಯಿಸಿಕೊಳ್ಳಬೇಕು. ನಂತರ ಒಂದು ಮಿಕ್ಸಿ ಜಾರಿಗೆ ಹಸಿ ಮೆಣಸಿನ ಕಾಯಿ, ಬೆಳ್ಳುಳ್ಳಿ, ಅರ್ಧ ಈರುಳ್ಳಿ, ಸ್ವಲ್ಪ ಕೊತ್ತಂಬರಿ ಸೊಪ್ಪು, ಅರ್ಧ ಸ್ಪೂನ್ ಜೀರಿಗೆ, ಕಾಳು ಮೆಣಸು, ಮಾವಿನ ತುರಿ ಸೇರಿಸಿ ನೀರು ಹಾಕದೆ ತರಿತರಿಯಾಗಿ ರುಬ್ಬಿಕೊಂಡು, ನಂತರ ಬಾಣಲೆಗೆ ಎಣ್ಣೆ ಹಾಕಿ ಸಾಸಿವೆ, ಕರಿಬೇವು, ಇಂಗು, ಸಣ್ಣಗೆ ಹೆಚ್ಚಿದ ಈರುಳ್ಳಿ, ಶೇಂಗಾ, ಕಡ್ಲೆ ಬೇಳೆ ಉದ್ದಿನ ಬೇಳೆ ಒಗ್ಗರಣೆ ಮಾಡಿ ರುಬ್ಬಿದ ಮಿಶ್ರಣವನ್ನು ಹಾಕಿ ಅದಕ್ಕೆ ಅರಿಶಿನ, ಉಪ್ಪು ಸೇರಿಸಿ ಚೆನ್ನಾಗಿ ಫ್ರೈ ಮಾಡಿ ಅದಕ್ಕೆ ಅನ್ನ ಹಾಕಿ ಚೆನ್ನಾಗಿ ಕಲಸಿದರೆ ರುಚಿಯಾದ ಮಾವಿನ ಕಾಯಿ ಮಸಾಲೆ ಅನ್ನ ಸವಿಯಲು ಸಿದ್ಧ.

# ಅಫ್ಘಾನಿಸ್ತಾನದ ಮೇಲೆ ಪಾಕ್ ನಡೆಸಿದ ವೈಮಾನಿಕ ದಾಳಿ



ಇಸ್ಲಾಮಾಬಾದ್: ಅಫ್ಘಾನಿಸ್ತಾನದ ವಸತಿ ಪ್ರದೇಶಗಳನ್ನು ಗುರಿಯಾಗಿಸಿಕೊಂಡು ಪಾಕಿಸ್ತಾನಿ ಪಡೆಗಳು ರಾತ್ರಿಯಿಡೀ ನಡೆಸಿದ ವೈಮಾನಿಕ ದಾಳಿಯಲ್ಲಿ ಒಂಬತ್ತು ಮಕ್ಕಳು ಮತ್ತು ಒಬ್ಬ ಮಹಿಳೆ ಸೇರಿದಂತೆ ಕನಿಷ್ಠ 10 ನಾಗರಿಕರು ಸಾವನ್ನಪ್ಪಿದ್ದಾರೆ ಎಂದು ತಾಲಿಬಾನ್ ಸರ್ಕಾರಿ ವಕ್ತಾರರು ತಿಳಿಸಿರುವುದಾಗಿ ವರದಿಯಾಗಿದೆ. ಹಲವಾರು ಗಡಿ ಪ್ರಾಂತ್ಯಗಳ ಮೇಲೆ ದಾಳಿಗಳು ನಡೆದಿದ್ದು, ಇದು ಅಸ್ಥಿರವಾದ ಅಫ್ಘಾನಿಸ್ತಾನ-ಪಾಕಿಸ್ತಾನ ಗಡಿಯಲ್ಲಿ ತೀವ್ರ ಉದ್ವಿಗ್ನಕ್ಕೆ ಕಾರಣವಾಗಿರುವುದಾಗಿ ವರದಿ ವಿವರಿಸಿದೆ.

# ಲಂಡನ್‌ಗೆ ಗುಡ್ ಬೈ ಹೇಳಿದ ಲಕ್ಷ್ಮಿ ಮಿತ್ತಲ್!



ದುಬೈ : ಭಾರತ ಮೂಲದ ಶ್ರೀಮಂತ ಉದ್ಯಮಿ, ಆರ್ಸೆಲರ್‌ಮಿತ್ತಲ್ ಉಕ್ಕು ಕಂಪನಿಯ ಮಾಲೀಕ ಲಕ್ಷ್ಮೀ ನಿವಾಸ್ ಮಿತ್ತಲ್ 30 ವರ್ಷಗಳ ಬಳಿಕ ಲಂಡನ್ ತೊರೆದು, ದುಬೈನಲ್ಲಿ ನೆಲೆಸಲು ಮುಂದಾಗಿದ್ದಾರೆ. ಕೆಲ ತಿಂಗಳುಗಳಿಂದ ಹಲವು ಉದ್ಯಮಿಗಳು ಬ್ರಿಟನ್ ತೊರೆದು, ದುಬೈ, ಸಿಂಗಪುರ, ಸ್ವಿಜರ್‌ಲೆಂಡ್‌ನಂಥ ದೇಶಗಳಿಗೆ ತೆರಳಿದ್ದಾರೆ. ಕೋಟ್ಯಧಿಪತಿಗಳನ್ನು ಗುರಿಯಾಗಿಸಿಕೊಂಡು ಬ್ರಿಟನ್ ಸರ್ಕಾರ ಜಾರಿಗೆ ತರಲು ಮುಂದಾಗಿರುವ ಹೊಸ ತೆರಿಗೆ ನೀತಿಯೇ ಉದ್ಯಮಿಗಳು ಲಂಡನ್ ತೊರೆಯಲು ಕಾರಣ ಎನ್ನಲಾಗಿದೆ.

# ಭಾರತ, ಆಸ್ಟ್ರೇಲಿಯಾ ಮತ್ತು ಕೆನಡಾ ನಡುವೆ ತ್ರಿಪಕ್ಷೀಯ ತಂತ್ರಜ್ಞಾನ




ಜೋಹಾನಸ್‌ಬರ್ಗ್: ಜಿ20 ನಾಯಕರ ಶೃಂಗಸಭೆಯ ಸಂದರ್ಭದಲ್ಲಿ ಆಸ್ಟ್ರೇಲಿಯಾ ಮತ್ತು ಕೆನಡಾ ಒಳಗೊಂಡಂತೆ ತ್ರಿಪಕ್ಷೀಯ ತಂತ್ರಜ್ಞಾನ ಮತ್ತು ನಾವೀನ್ಯತೆ ಪಾಲುದಾರಿಕೆಯನ್ನು ಭಾರತದ ಪ್ರಧಾನಿ ನರೇಂದ್ರ ಮೋದಿ ಘೋಷಿಸಿದ್ದಾರೆ. 'ಆಸ್ಟ್ರೇಲಿಯಾ-ಕೆನಡಾ-ಭಾರತ ತಂತ್ರಜ್ಞಾನ ಮತ್ತು ನಾವೀನ್ಯತೆ ಪಾಲುದಾರಿಕೆಯನ್ನು (ಎಸಿಐಟಿಐ) ಘೋಷಿಸಲು ನಾವು ಸಂತೋಷಪಟ್ಟುಕೊಳ್ಳುತ್ತೇವೆ' ಎಂದು ಪ್ರಧಾನಿ ಮೋದಿ ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ತಿಳಿಸಿದ್ದಾರೆ.

# ಯುರೋಪಿನಾದ್ಯಂತ ಹಮಾಸ್ ಸೀಕ್ರೆಟ್ ಸೆಲ್: ಮೊಸಾದ್ ಎಚ್ಚರಿಕೆ



ಲಂಡನ್ : ಯುರೋಪಿನಾದ್ಯಂತ ಹಮಾಸ್ ತನ್ನ ಕಾರ್ಯಾಚರಣೆಯ ಜಾಲವನ್ನು ವಿಸ್ತರಿಸುತ್ತಿದೆ ಮತ್ತು ಸಿಕ್ರೇಟ್ ಸೆಲ್ ಮೂಲಕ ಕಾರ್ಯನಿರ್ವಹಿಸುತ್ತಿದೆ ಎಂದು ಇಸ್ರೇಲ್‌ನ ಗುಪ್ತಚರ ಸಂಸ್ಥೆ ಮೊಸಾದ್ ಎಚ್ಚರಿಸಿದೆ. ಯುರೋಪಿಯನ್ ಭದ್ರತಾ ಏಜೆನ್ಸಿಗಳ ಸಹಕಾರದಿಂದ ಶಸ್ತ್ರಾಸ್ತ್ರಗಳನ್ನು ಪತ್ತೆಹಚ್ಚಲು, ಶಂಕಿತರನ್ನು ಬಂಧಿಸಲು ಮತ್ತು ಯೋಜಿತ ದಾಳಿಗಳನ್ನು ತಡೆಯಲು ಸಾಧ್ಯವಾಗಿದೆ ಎಂದು ಮೊಸಾದ್ ಹೇಳಿಕೆಯಲ್ಲಿ ತಿಳಿಸಿದೆ.

# ದುಬೈ ಏರ್ ಶೋದಲ್ಲಿ ತೇಜಸ್ ಯುದ್ಧ ವಿಮಾನ ಪತನ



ದುಬೈ : ವಾಯು ಪ್ರದರ್ಶನದ ಸಂದರ್ಭದಲ್ಲಿ ತೇಜಸ್ ಲಘು ಯುದ್ಧ ವಿಮಾನ (LCA MK-1) ಪತನಗೊಂಡು ಭಾರತೀಯ ವಾಯುಪಡೆಯ (ಐಎಎಫ್) ಪೈಲಟ್ ವಿಂಗ್ ಕಮಾಂಡರ್ ನಮಾಂಶ್ ಸಯಾಲ್ ಹುತಾತ್ಮರಾಗಿದ್ದಾರೆ. 37 ವರ್ಷ ವಯಸ್ಸಿನ ಅವರು ಕಾರ್ಯಕ್ರಮದ ಕೊನೆಯ ದಿನದಂದು ಕೆಳಮಟ್ಟದ ಏರೋಬ್ಯಾಟಿಕ್ ಕುಶಲತೆಯನ್ನು ನಿರ್ವಹಿಸುತ್ತಿದ್ದಾಗ, ದುರದೃಷ್ಟಕರವಾಗಿ ಫೈಟರ್ ಜೆಟ್ ಪತನಗೊಂಡಿತು. ಅಪಘಾತದ ಕಾರಣವನ್ನು ಕಂಡುಹಿಡಿಯಲು ವಿಚಾರಣಾ ನ್ಯಾಯಾಲಯವನ್ನು ರಚಿಸಲಾಗುತ್ತಿದೆ ಎಂದು IAF, ಹೇಳಿದೆ.

# ವಿಶ್ವಕಪ್ ಗೆದ್ದು ಇತಿಹಾಸ ನಿರ್ಮಿಸಿದ ಭಾರತೀಯ ಮಹಿಳಾ ಕಬಡ್ಡಿ ತಂಡ




ನವದೆಹಲಿ: ಭಾರತ ಮಹಿಳಾ ಅಂಧರ ತಂಡ ಚೊಚ್ಚಲ ಟಿ20 ವಿಶ್ವಕಪ್ ಗೆದ್ದ ಬೆನ್ನಲ್ಲೇ ಭಾರತ ಮಹಿಳಾ ಕಬಡ್ಡಿ ತಂಡ ಕೂಡ ವಿಶ್ವಕಪ್ ಗೆದ್ದು ಇತಿಹಾಸ ನಿರ್ಮಿಸಿದೆ. ಈ ಮೂಲಕ ದೇಶದ ನಾರಿ ಶಕ್ತಿ ಮತ್ತೆ ಅನಾವರಣಗೊಂಡಿದೆ. ಕಳೆದ ಎರಡು ತಿಂಗಳಲ್ಲಿ ಅಂತರಾಷ್ಟ್ರೀಯ ಮಟ್ಟದಲ್ಲಿ ಭಾರತೀಯ ಮಹಿಳೆಯರು ಸರಣಿ ಟ್ರೋಫಿಗಳ ಮೂಲಕ ದೇಶದ ಕೀರ್ತಿ ಪತಾಕೆ ಹಾರಿಸಿದ್ದಾರೆ.

# ಚೊಚ್ಚಲ ಟಿ20 ವಿಶ್ವಕಪ್ ಗೆದ್ದ ಭಾರತ ಅಂಧರ ಮಹಿಳಾ ತಂಡ




ಬೆಂಗಳೂರು: ಶ್ರೀಲಂಕಾದ ಕೊಲಂಬೊದಲ್ಲಿ ನಡೆದ ಚೊಚ್ಚಲ ಎಸ್‌ಬಿಐ ಮಹಿಳಾ ಅಂಧರ ಟಿ20 ವಿಶ್ವಕಪ್ ಪಂದ್ಯಾವಳಿಯ ಫೈನಲ್‌ನಲ್ಲಿ ನೇಪಾಳ ವಿರುದ್ಧ ಗೆದ್ದು ಪ್ರಶಸ್ತಿ ಮುಡಿಗೇರಿಸಿಕೊಂಡ ಭಾರತೀಯ ಮಹಿಳಾ ಅಂಧರ ಕ್ರಿಕೆಟ್ ತಂಡ ತಾಯ್ನಾಡಿಗೆ ಆಗಮಿಸಿತು. ಬೆಂಗಳೂರಿಗೆ ಆಗಮಿಸಿದ ತಂಡವನ್ನು ಅಭಿಮಾನಿಗಳು ಅದ್ದೂರಿಯಾಗಿ ಸ್ವಾಗತಿಸಿದರು. ಬೆಂಗಳೂರಿನ ಖಾಸಗಿ ಹೋಟೆಲ್‌ನಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ತಂಡ ಪಾಲ್ಗೊಂಡಿತು.

# 25 ವರ್ಷಗಳ ಬಳಿಕ ಟೆಸ್ಟ್ ಸರಣಿ ಜಯಿಸಿದ ದಕ್ಷಿಣ ಆಫ್ರಿಕಾ !




ಅಸ್ಸಾಂ : ಇಲ್ಲಿನ ಬರ್ಸಪಾರ ಕ್ರಿಕೆಟ್ ಕ್ರೀಡಾಂಗಣದಲ್ಲಿ ಮುಕ್ತಾಯಗೊಂಡ ದಕ್ಷಿಣ ಆಫ್ರಿಕಾ ವಿರುದ್ಧದ ಎರಡನೇ ಟೆಸ್ಟ್ ಪಂದ್ಯದಲ್ಲೂ ಭಾರತ ತಂಡ 408 ರನ್‌ಗಳ ಹೀನಾಯ ಸೋಲು ಕಂಡಿದೆ. ಈ ಮೂಲಕ ಟೀಂ ಇಂಡಿಯಾ ತವರಿನಲ್ಲಿ ಮತ್ತೊಮ್ಮೆ ವೈಟ್‌ವಾಶ್ ಮುಖಭಂಗ ಅನುಭವಿಸಿದೆ. ದಕ್ಷಿಣ ಆಫ್ರಿಕಾದ ಸ್ಪಿನ್ನರ್ ಸಿಮೊನ್ ಹಾರ್ಮರ್ ಸರಣಿಯ ಆಟಗಾರ ಹಾಗೂ ವೇಗಿ ಮಾರ್ಕೋ ಜಾನ್ಸೆನ್ ಪಂದ್ಯದ ಆಟಗಾರ ಪ್ರಶಸ್ತಿಗೆ ಪಾತ್ರರಾದರು.

# ಕಾನೂನನ್ನು ಪ್ರತಿಯೊಬ್ಬರೂ ಪಾಲನೆ ಮಾಡಬೇಕು : ಹೈಕೋರ್ಟ್




ಬೆಂಗಳೂರು: ಯಾರನ್ನೇ ಆಗಲಿ, ವಿಶೇಷವಾಗಿ ಸಾರ್ವಜನಿಕ ಸೇವಾ ವಲಯಗಳಲ್ಲಿ ದುಡಿಯುವವರಿಗೆ ಸೂಕ್ತ ವೇತನ ನೀಡದೆ ಕೆಲಸ ಮಾಡಿ ಎಂದು ಬಲವಂತ ಮಾಡುವಂತಿಲ್ಲ ಎಂಬ ಸ್ಥಾಪಿತ ಕಾನೂನನ್ನು ಪ್ರತಿಯೊಬ್ಬರೂ ಕಡ್ಡಾಯವಾಗಿ ಪಾಲನೆ ಮಾಡಬೇಕು ಎಂದು ರಾಜ್ಯ ಸರ್ಕಾರಕ್ಕೆ ಹೈಕೋರ್ಟ್ ತಾಕೀತು ಮಾಡಿದೆ. ಪ್ರಕರಣವೊಂದರ ವಿಚಾರಣೆ ನಡೆಸಿದ ಹೈಕೋರ್ಟ್, ಚಾತಕಪಕ್ಷಿಗಳಂತೆ ಕಾಯುತ್ತಿರುವ ಶಿಕ್ಷಕರ ಸಂಬಳವನ್ನು ಕೂಡಲೇ ಬಿಡುಗಡೆ ಮಾಡುವಂತೆ ರಾಜ್ಯ ಪ್ರಾಥಮಿಕ ಶಿಕ್ಷಣ ಇಲಾಖೆಗೆ ನಿರ್ದೇಶಿಸಿದೆ. ಅರ್ಜಿದಾರ ಶಿಕ್ಷಕರ ಸಂಬಳವನ್ನು ಬಿಡುಗಡೆ ಮಾಡುವಂತೆ ರಾಜ್ಯ ಪ್ರಾಥಮಿಕ ಶಿಕ್ಷಣ ಇಲಾಖೆಗೆ ನಿರ್ದೇಶಿಸಿದೆ.

# ಡಿಕೆ ಶಿವಕುಮಾರ್ ಪರ 139 ಶಾಸಕರಿದ್ದಾರೆ : ಜಮೀರ್ ಅಹ್ಮದ್



ಬೆಂಗಳೂರು : ರಾಜ್ಯ ಕಾಂಗ್ರೆಸ್‌ನಲ್ಲಿ ದಿನದಿಂದ ದಿನಕ್ಕೆ ಭಾರೀ ಬೆಳವಣಿಗೆಗಳು ಆಗುತ್ತಿದ್ದು, ಬದಲಾವಣೆ ಕುರಿತ ಚರ್ಚೆಗಳು ಜೋರಾಗಿವೆ. ಈ ಹಿಂದೆ ಚುನಾವಣೆಯಲ್ಲಿ ಗೆದ್ದಾಗ ಸಿದ್ದರಾಮಯ್ಯ ಹಾಗೂ ಡಿಕೆಶಿವಕುಮಾರ್‌ಗೆ ಸರಿಸಮನಾಗಿ ಎರಡೂವರೆ ವರ್ಷಗಳ ಅಧಿಕಾರವನ್ನು ಹಂಚಲಾಗಿದೆ ಎನ್ನುತ್ತಿರುವ ಡಿಕೆಶಿ ಪರ ಶಾಸಕರು ಡಿಕೆಯವರನ್ನು ಮುಖ್ಯಮಂತ್ರಿ ಎಂದು ಘೋಷಿಸಬೇಕು ಎಂದು ಪಟ್ಟು ಹಿಡಿದಿದ್ದಾರೆ. ಈ ಕುರಿತು ಸಚಿವ ಜಮೀರ್ ಅಹ್ಮದ್ ಖಾನ್ ಪ್ರತಿಕ್ರಿಯಿಸಿ ಡಿಕೆ ಶಿವಕುಮಾರ್ ಪರ ಕೇವಲ 60 ಶಾಸಕರಲ್ಲ 139 ಶಾಸಕರಿದ್ದಾರೆ, ಹಾಗೆಯೇ ಸಿದ್ದರಾಮಯ್ಯ ಪರವೂ 139 ಶಾಸಕರಿದ್ದಾರೆ ಎಂದು ಹೇಳಿದರು.

# ನಾಲ್ಕು ಕಾರ್ಮಿಕ ಸಂಹಿತೆಗಳ ಹಿಂಪಡೆಯಲು ಆಗ್ರಹಿಸಿ ಪ್ರತಿಭಟನೆ





ಬೆಂಗಳೂರು: ಬಿಜೆಪಿ ನೇತೃತ್ವದ ಕೇಂದ್ರ ಸರಕಾರ ಜಾರಿಗೊಳಿಸಿರುವ ನಾಲ್ಕು ಕಾರ್ಮಿಕ ಸಂಹಿತೆಗಳನ್ನು ವಿರೋಧಿಸಿ, ಆಲ್ ಇಂಡಿಯಾ ಯುನೈಟೆಡ್ ಟ್ರೇಡ್ ಯೂನಿಯನ್ ಸೆಂಟರ್ ವತಿಯಿಂದ ನಗರದ ಫ್ರೀಡಂ ಪಾರ್ಕ್‌ನಲ್ಲಿ ಪ್ರತಿಭಟನೆ ನಡೆಸಲಾಯಿತು. ಕೇಂದ್ರ ಸರಕಾರ ಜಾರಿಗೊಳಿಸಿದ 4 ಹೊಸ ಕಾರ್ಮಿಕ ಸಂಹಿತೆಗಳು ವ್ಯವಹಾರವನ್ನು ಸುಲಭಗೊಳಿಸುವ ಹೆಸರಿನಲ್ಲಿ, ಕಾರ್ಮಿಕರ ಹಕ್ಕುಗಳನ್ನು ಮತ್ತು ರಕ್ಷಣೆಯನ್ನು ಮೊಟಕುಗೊಳಿಸುವ ಮೂಲಕ, ಬಂಡವಾಳಶಾಹಿ ಮತ್ತು ಉದ್ಯಮದ ಪರವಾಗಿವೆ. ಇದು ಪ್ರಗತಿಪರ ಸುಧಾರಣೆಯಲ್ಲ, ಬದಲಿಗೆ ಕಾರ್ಮಿಕ ವಿರೋಧಿ ನಡೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

# ಸೇನಾ ಭರ್ತಿ ಪ್ರಕ್ರಿಯೆಯಲ್ಲಿ ಪಾಲ್ಗೊಂಡ ಸಹಸ್ರಾರು ಯುವಕರು



ಬೆಳಗಾವಿ : ದೇಶಸೇವೆ ಮಾಡುವ ಮಹತ್ವಾಕಾಂಕ್ಷೆಯೊಂದಿಗೆ ಸಹಸ್ರಾರು ಯುವಕರ ದಂಡು ಬೆಳಗಾವಿಯಲ್ಲಿ ಜಮಾವಣೆಗೊಂಡಿದ್ದು, ಮೈ ಕೊರೆವ ಚಳಿಯನ್ನೂ ಲೆಕ್ಕಿಸದೆ ಸೇನಾ ಭರ್ತಿ ಪ್ರಕ್ರಿಯೆಯಲ್ಲಿ ಪಾಲ್ಗೊಂಡಿದ್ದಾರೆ. ಬೆಳಗಾವಿಯ ಟೆರಿಟೋರಿಯಲ್ ಆರ್ಮಿ ನೇತೃತ್ವದಲ್ಲಿ ಈ ಬೃಹತ್ ಸೇನಾ ಭರ್ತಿ ರ‍್ಯಾಲಿ ಕಳೆದ ಮೂರು ದಿನಗಳಿಂದ ನಡೆಯುತ್ತಿದೆ. ಮಧ್ಯರಾತ್ರಿ 2 ಗಂಟೆಯಿಂದಲೇ ಯುವಕರು ರ‍್ಯಾಲಿಗೆ ಸಜ್ಜಾಗಿದ್ದು, ಮೈ ಕೊರೆಯುವ ಚಳಿಯನ್ನೂ ಲೆಕ್ಕಿಸಿಲ್ಲ. ಬಹುತೇಕರು ಬೀದಿ ಬಳಿಯ ಫುಟ್ ಪಾತ್ ಮೇಲೆಯೇ ಹಾಗೂ ಸಿಪಿಎಡ್ ಮೈದಾನವನ್ನೇ ತಮ್ಮ ತಾತ್ಕಾಲಿಕ ಹಾಸಿಗೆ ಮಾಡಿಕೊಂಡು ರಾತ್ರಿ ಕಳೆದಿದ್ದಾರೆ.

# 'ತಲಾಖ್-ಎ-ಹಸನ್' ಆಚರಣೆಗೆ ಸುಪ್ರೀಂ ಕೋರ್ಟ್ ಆಕ್ರೋಶ



ಹೊಸದಿಲ್ಲಿ: ತ್ರಿವಳಿ ತಲಾಖ್‌ನ ಬಗೆಯಾದ "ತಲಾಖ್-ಎ-ಹಸನ್' ಆಚರಣೆಗೆ ತೀವ್ರ ಆಕ್ರೋಶ ವ್ಯಕ್ತಪಡಿಸಿರುವ ಸುಪ್ರೀಂ ಕೋರ್ಟ್, ಈ ಪದ್ಧತಿಯನ್ನು ರದ್ದುಗೊಳಿಸುವ ಸುಳಿವು ನೀಡಿದೆ. ಪತ್ರಕರ್ತೆ ಬೆನಜೀರ್ ಹೀನಾ ಅವರ ಪ್ರಕರಣದ ವಿಚಾರಣೆ ವೇಳೆ ಪೀಠವು ಈ ಅಭಿಪ್ರಾಯ ವ್ಯಕ್ತಪಡಿಸಿದೆ. ತಲಾಖ್-ಎ-ಹಸನ್ ಆಚರಣೆಯಲ್ಲಿ ಪತಿಯು ಸತತ 3 ತಿಂಗಳ ಕಾಲ ತಿಂಗಳಿಗೊಮ್ಮೆಯಿಜಿ ತಲಾಖ್ ಎಂದು ಹೇಳುವ ಮೂಲಕ ವಿಚ್ಛೇದನ ನೀಡುತ್ತಾನೆ. ಇದು ಮಹಿಳೆಯ ಘನತೆಯ ಪ್ರಶ್ನೆ. ಆಧುನಿಕ ಯುಗದಲ್ಲೂ ಇಂಥ ಆಚರಣೆ ಹೇಗೆ ಮುಂದುವರಿಸುತ್ತೀರಿ ಎಂದು ಸುಪ್ರೀಂ ಕೋರ್ಟ್ ನ್ಯಾಯಪೀಠ ಪ್ರಶ್ನಿಸಿದೆ.

# ಕೆರೆಗಳಲ್ಲಿ ಮೀನುಗಾರಿಕೆ ಮಾಡಲು ಅವಕಾಶ, ಪ್ರೋತ್ಸಾಹ : ಡಿಕೆಶಿ



ಬೆಂಗಳೂರು : "ಕಾಂಗ್ರೆಸ್ ಸರ್ಕಾರ ರಾಜ್ಯದಲ್ಲಿ ಕೆರೆಗಳಿಗೆ ನೀರು ತುಂಬಿಸುತ್ತಿದ್ದು, ಈ ಕೆರೆಗಳಲ್ಲಿ ಮೀನುಗಾರಿಕೆ ಮಾಡಲು ಅವಕಾಶ ಕಲ್ಪಿಸಿಕೊಡಲಿದೆ. ಮೀನುಗಾರರಿಗೆ ಅಗತ್ಯ ಪ್ರೋತ್ಸಾಹ ನೀಡಲಾಗುವುದು" ಎಂದು ಡಿಸಿಎಂ ಡಿ.ಕೆ. ಶಿವಕುಮಾರ್ ಅವರು ತಿಳಿಸಿದರು. ಹೆಬ್ಬಾಳದ ಪಶುವೈದ್ಯಕೀಯ ಮಹಾವಿದ್ಯಾಲಯದ ಆವರಣದಲ್ಲಿ ಶನಿವಾರ ನಡೆದ ವಿಶ್ವ ಮೀನುಗಾರಿಕೆ ದಿನಾಚರಣೆ ಹಾಗೂ ಮತ್ಸ್ಯ ಮೇಳದಲ್ಲಿ ಶಿವಕುಮಾರ್ ಅವರು ಮಾತನಾಡಿದರು. "ಸಿದ್ದರಾಮಯ್ಯ ಅವರ ನೇತೃತ್ವದ ಸರ್ಕಾರ 10 ಸಾವಿರಕ್ಕೂ ಹೆಚ್ಚು ಕೆರೆಗಳನ್ನು ತುಂಬಿಸುವ ಕೆಲಸ ಮಾಡಿದ್ದೇವೆ ಎಂದರು.

# ರಾಜಕಾರಣದಲ್ಲಿ ಯಾರೂ ನಿರೀಕ್ಷಿಸದಂತಹ ಕ್ರಾಂತಿ ಆಗಲಿದೆ : ಹೆಚ್‌ಡಿಕೆ



ಬೆಂಗಳೂರು: ಕೇಂದ್ರ ಸಚಿವ ಹೆಚ್.ಡಿ. ಕುಮಾರಸ್ವಾಮಿ ರಾಜ್ಯ ರಾಜಕಾರಣದಲ್ಲಿ ಸ್ಫೋಟಕ ಬೆಳವಣಿಗೆಗಳು ನಡೆಯುವ ಸುಳಿವು ನೀಡಿದ್ದಾರೆ. ಬೆಂಗಳೂರಿನಲ್ಲಿ ಜೆಡಿಎಸ್ ಪಕ್ಷದ ಬೆಳ್ಳಿಹಬ್ಬದ ಸಮಾರಂಭದಲ್ಲಿ ಪಾಲ್ಗೊಂಡು ಕಾರ್ಯಕರ್ತರು, ಮುಖಂಡರನ್ನು ಉದ್ದೇಶಿಸಿ ಮಾತನಾಡಿದ ಕೇಂದ್ರ ಸಚಿವರು ರಾಜ್ಯದಲ್ಲಿ ಇವತ್ತು ನಡೆಯುತ್ತಿರುವ ರಾಜಕೀಯ ಬೆಳವಣಿಗೆಗಳನ್ನು ನೋಡಿದರೆ ಮುಂದಿನ ದಿನಗಳಲ್ಲಿ ಯಾರೂ ಕೂಡ ನಿರೀಕ್ಷೆ ಮಾಡದಂತಹ ಬೆಳವಣಿಗೆಗಳು ನಡೆಯಲಿವೆ ಎಂದು ಭವಿಷ್ಯ ನುಡಿದರು. ರಾಜಕೀಯದಲ್ಲಿ ಯಾರು ಯಾವ ನಿರ್ಧಾರಗಳನ್ನು ತೆಗೆದುಕೊಳ್ಳುತ್ತಾರೆ ಹೇಳಲಿಕ್ಕೆ ಆಗದಂತಹ ಪರಿಸ್ಥಿತಿ ಸೃಷ್ಟಿ ಆಗಿದೆ ಎಂದರು.

# ಕಾಂಗ್ರೆಸ್‌ನ ಪ್ರಮುಖ ನಾಯಕರ ಉಚ್ಚಾಟನೆ !



ನವದೆಹಲಿ : ಕರ್ನಾಟಕದಲ್ಲಿ ಮುಖ್ಯಮಂತ್ರಿ ಬದಲಾವಣೆಗಾಗಿ ಎರಡು ಬಣದ ನಾಯಕರು ಶಕ್ತಿ ಪ್ರದರ್ಶನ ನಡೆಸುತ್ತಿದ್ದಾರೆ. ಹೈಕಮಾಂಡ್ ಮೇಲೆ ಪಟ್ಟು ಬಿಗಿಗೊಳಿಸುತ್ತಿದ್ದಾರೆ. ಕಾಂಗ್ರೆಸ್ ಹೈಕಮಾಂಡ್ ಇದೀಗ ತೀವ್ರ ಸಂಕಷ್ಟಕ್ಕೆ ಸಿಲುಕಿದೆ. ಬಿಹಾರ ಚುನಾವಣೆಯ ಹೀನಾಯ ಸೋಲಿನಿಂದ ಕಾಂಗ್ರೆಸ್ ಚೇತರಿಸಿಕೊಂಡಿಲ್ಲ. ಬಿಹಾರ ಚುನಾವಣೆಯ ಹೀನಾಯ ಸೋಲಿಗೆ ಹೊಣೆ ಹೊರಲು ಕಾಂಗ್ರೆಸ್‌ನಲ್ಲಿ ಯಾರೂ ತಯಾರಿಲ್ಲ. ಇದರ ನಡುವೆ ಕಾಂಗ್ರೆಸ್ ಮಹತ್ವದ ನಿರ್ಧಾರ ತೆಗೆದುಕೊಂಡಿದೆ. ಬಿಹಾರ ಚುನಾವಣೆ ವೇಳೆ ಪಕ್ಷ ವಿರೋಧಿ ಚಟುವಟಿಕೆ, ಅಶಿಸ್ತಿನ ನಡವಳಿಕೆಗೆ ಗುರಿಯಾದ ಬಿಹಾರ ಕಾಂಗ್ರೆಸ್‌ನ 7 ನಾಯಕರನ್ನು ಉಚ್ಚಾಟಿಸಿದೆ.

# ಮಧ್ಯಪ್ರದೇಶದ ಮಸೀದಿ ಉತ್ಖನನ ವೇಳೆ ರಾಮ-ಸೀತಾ ವಿಗ್ರಹ ಪತ್ತೆ



ಮಧ್ಯಪ್ರದೇಶ : ಮಧ್ಯಪ್ರದೇಶದ ಸಾಗರ್ ಎಂಬಲ್ಲಿ ಮಸೀದಿಯೊಂದರ ಉತ್ಖನನದ ವೇಳೆ ಸೀತಾ ಮತ್ತು ರಾಮನ ವಿಗ್ರಹಗಳು ಕಂಡುಬಂದಿವೆ. ಇದೀಗ ಈ ಸುದ್ದಿ ಎಲ್ಲ ಕಡೆ ವೈರಲ್ ಆಗಿದ್ದು, ಸ್ಥಳಕ್ಕೆ ಹಿಂದೂ ಸಮುದಾಯದ ಮುಖಂಡರು ಹಾಗೂ ಜನರುನ ಕೂಡ ಆಗಮಿಸಿದ್ದರು. ಸಾಗರ್‌ನ ಪಪ್ಪೆಟ್ ಗ್ರಾಮದಲ್ಲಿ ಈ ಘಟನೆ ನಡೆದಿದೆ. ಸಂಸ್ಕೃತ ಬಚಾವೊ ಮಂಚ್‌ನ ನಾಯಕ ಈ ಬಗ್ಗೆ ವಿಡಿಯೋವೊಂದನ್ನು ಹಂಚಿಕೊಂಡಿದ್ದು, ಈ ಪ್ರದೇಶದಲ್ಲಿ ಒಂದು ಕಾಲದಲ್ಲಿ ದೇವಾಲಯವಿತ್ತು ಎಂಬುದು ಸಾಬೀತಾಗಿದೆ. ಈ ಸ್ಥಳದಲ್ಲಿ ಮತ್ತೆ ದೇವಾಲಯವನ್ನು ನಿರ್ಮಿಸಬೇಕು ಎಂಬುದು ಹಿಂದೂಗಳ ಬಯಕೆ ಇದೆ. ಇಲ್ಲಿ ಒಂದು ಕಾಲದಲ್ಲಿ ದೇವಾಲಯವಿತ್ತು.

# ಅಜಿತ್ ಪವಾರ್‌ನಿಂದ ಮತದಾರರಿಗೆ ಬಹಿರಂಗ ಬೆದರಿಕೆ



ಮುಂಬೈ: ಮಹಾರಾಷ್ಟ್ರ ಉಪಮುಖ್ಯಮಂತ್ರಿ ಅಜಿತ್ ಪವಾರ್ ಅವರು ಜಿಲ್ಲೆಯ ಮಾಲೆಗಾಂವ್‌ನಲ್ಲಿ ಮತದಾರರಿಗೆ ಬಹಿರಂಗ ಬೆದರಿಕೆ ಹಾಕಿದ್ದು, ತಮ್ಮ ಪಕ್ಷದ ಅಭ್ಯರ್ಥಿಗಳನ್ನು ಆಯ್ಕೆ ಮಾಡಿದರೆ ಪಟ್ಟಣಕ್ಕೆ ಸಾಕಷ್ಟು ಹಣ ನೀಡುವುದಾಗಿ ಮತ್ತು ಮತ ನೀಡದಿದ್ದರೆ ಹಣ ನೀಡುವುದಿಲ್ಲ ಎಂದು ಹೇಳಿದ್ದಾರೆ. ಎನ್ ಸಿಪಿ ಮುಖ್ಯಸ್ಥರಾಗಿರುವ ಅಜಿತ್ ಪವಾರ್ ಅವರು ಶುಕ್ರವಾರ ಬಾರಾಮತಿ ತಹಸಿಲ್‌ನ ಮಾಲೆಗಾಂವ್ ನಗರ ಪಂಚಾಯತ್ ಚುನಾವಣೆಗೆ ಪ್ರಚಾರ ಮಾಡುತ್ತಿದ್ದರು. ಗಮನಾರ್ಹ ವಿಚಾರ ಎಂದರೆ ಅಜಿತ್ ಪವಾರ್ ಅವರು ಬಿಜೆಪಿ-ಎನ್‌ಸಿಪಿ-ಶಿವಸೇನೆ ಸರ್ಕಾರದಲ್ಲಿ ಹಣಕಾಸು ಖಾತೆಯನ್ನು ಹೊಂದಿದ್ದಾರೆ.

# ಮಹಾಯುತಿ ಸರಕಾರದಲ್ಲಿ ಅಂತಃಕಲಹ: ಶಾ ಭೇಟಿಯಾದ ಶಿಂಧೆ



ಹೊಸದಿಲ್ಲಿ: ಮಹಾಯುತಿ ಸರಕಾರದಲ್ಲಿ ಅಂತಃಕಲಹ ವದಂತಿ ನಡುವೆಯೇ ಮಹಾರಾಷ್ಟ್ರ ಉಪ ಮುಖ್ಯಮಂತ್ರಿ ಏಕನಾಥ್ ಶಿಂಧೆ, ಈ ಕುರಿತು ಕೇಂದ್ರ ಗೃಹ ಸಚಿವ ಅಮಿತ್ ಶಾರನ್ನು ಭೇಟಿಯಾಗಿ ಮಾತುಕತೆ ನಡೆಸಿದರು. ಆ ಮೂಲಕ, ಇನ್ನೇನು ಒಂದು ವರ್ಷ ಪೂರೈಸಲಿರುವ ಮಹಾಯುತಿ ಸರಕಾರದಲ್ಲಿ ಉದ್ಭವಿಸಿರುವ ಬಿಕ್ಕಟ್ಟನ್ನು ಬಗೆಹರಿಸುವತ್ತ ತಮ್ಮ ಮಾತುಕತೆಯನ್ನು ಕೇಂದ್ರೀಕರಿಸಿದರು ಎಂದು ವರದಿಯಾಗಿದೆ. ಏಕನಾಥ್ ಶಿಂಧೆ ಹಾಗೂ ಅಮಿತ್ ಶಾ ನಡುವೆ 50ನಿಮಿಷಗಳ ಕಾಲ ಮಾತುಕತೆ ನಡೆಯಿತು ಎಂದು ವರದಿಯಾಗಿದೆ. ಶಿವಸೇನೆಯ ಸಚಿವರು ಸಚಿವ ಸಂಪುಟ ಸಭೆಯಿಂದ ದೂರ ಉಳಿದಿದ್ದರು.




ಕರಾವಳಿ ತರಂಗಿಣಿ

# ಕಲಾ ತರಂಗಿಣಿ



## ಅನುಪಮ ಶರಧಿ ನಿರ್ದೇಶಕಿಯಾಗಿ ಪಾದಾರ್ಪಣೆ

ಭವಿಷ್ಯ ಸಿನಿಮಾಸ್ ಲಾಂಛನದಲ್ಲಿ ನಿರ್ಮಾಣವಾಗಿರುವ ಸಂಪೂರ್ಣ ಅರೆ ಭಾಷೆಯ 'ನಡುಬೆಟ್ಟು ಅಪ್ಪಣ್ಣ' ಚಿತ್ರ ತೆರೆಗೆ ಬರಲು ಸಿದ್ಧವಾಗಿದೆ. ಬಿಡುಗಡೆಗೂ ಪೂರ್ವದಲ್ಲೇ ಕೊಲ್ಕತ್ತಾ ಅಂತರಾಷ್ಟ್ರೀಯ ಚಲನಚಿತ್ರೋತ್ಸವದಲ್ಲಿ ಎರಡು ದಿನ ಹಾಗೂ ಮೈಸೂರು ದಸರಾ ಚಲನಚಿತ್ರೋತ್ಸವದಲ್ಲಿ ಈ ಚಿತ್ರ ಪ್ರದರ್ಶನಗೊಂಡಿದೆ. ಚಲನಚಿತ್ರೋತ್ಸವಗಳಲ್ಲಿ ಈ ಚಿತ್ರವನ್ನು ವೀಕ್ಷಿಸಿದವರು ಮೆಚ್ಚುಗೆಯ ಮಹಾಪೂರವನ್ನೇ ಹರಿಸಿದ್ದಾರೆ. ಮೂಲತಃ ಗಾಯಕಿಯಾಗಿರುವ ಅನುಪಮ ಶರಧಿ ಅವರು ಈ ಚಿತ್ರವನ್ನು ನಿರ್ದೇಶಿಸಿದ್ದಾರೆ. ಕನ್ನಡ ಚಿತ್ರರಂಗದಲ್ಲಿ ಕೇವಲ ಬೆರಳೆಣಿಕೆಯಷ್ಟಿರುವ ನಿರ್ದೇಶಕಿಯರ ಸಾಲಿಗೆ ಅನುಪಮ ಅವರು ಸೇರ್ಪಡೆಯಾಗಿದ್ದಾರೆ. ಇದಕ್ಕೂ ಮೊದಲು ಕೆಲವು ಸರ್ಕಾರಿ ಡಾಕ್ಯುಮೆಂಟರಿಗಳನ್ನು ನಿರ್ದೇಶಿಸಿರುವ ಅನುಭವ ಅನುಪಮ ಅವರಿಗಿದೆ. ಈ ಚಿತ್ರಕ್ಕೆ ಕಥೆ, ಚಿತ್ರಕಥೆ ಹಾಗೂ ಸಂಭಾಷಣೆ ಬರೆದು ನಿರ್ದೇಶಿಸಿರುವ ಅನುಪಮ ಶರಧಿ, ನಿರ್ಮಾಪಕರೂ ಹೌದು. 'ನಡುಬೆಟ್ಟು ಅಪ್ಪಣ್ಣ' ಕಥೆಯು 'ದಬ್ಬಡ್ಕ' ಎಂಬ ದೂರದ ಹಳ್ಳಿಯಲ್ಲಿ ವಾಸಿಸುವ ಅಪ್ಪಣ್ಣ ಎಂಬ ಜಿಪುಣ ಮತ್ತು ಸ್ವಾರ್ಥಿ ವ್ಯಕ್ತಿ ಮತ್ತು ಅವನ ಕುಟುಂಬದ ಸುತ್ತ ಸುತ್ತುತ್ತದೆ. ಅವನು ಹಳ್ಳಿಯ ಕಷ್ಟಗಳ ಬಗ್ಗೆಯಾಗಲಿ ಅಥವಾ ಅವನ ಕುಟುಂಬದ ಅಗತ್ಯಗಳ ಬಗ್ಗೆ ಕಾಳಜಿ ವಹಿಸುವುದಿಲ್ಲ. ಅವನು ಸೇರಿದಂತೆ ಗ್ರಾಮಸ್ಥರು ಆಗಾಗ್ಗೆ ತಮ್ಮ ಮೇಲೆ ಮತ್ತು ತಮ್ಮ ತೋಟಗಳ ಮೇಲೆ ಆನೆ ದಾಳಿಯಿಂದ ಬಳಲುತ್ತಾರೆ. ಹತ್ತಿರದ ಪಟ್ಟಣಗಳು, ರಸ್ತೆಗಳು, ಆಸ್ಪತ್ರೆ, ಶಾಲೆಗಳು ಮುಂತಾದ ಮೂಲಭೂತ ಅವಶ್ಯಕತೆಗಳಿಲ್ಲದ ಗ್ರಾಮವದು. ಹತ್ತಿರದ ಪಟ್ಟಣಗಳಿಗೆ ಹೋಗಲು ಅವರು ತೆಪ್ಪವನ್ನು ಬಳಸಬೇಕಾಗುತ್ತದೆ. ಇದರಿಂದಾಗಿ ಅವರು ಹಲವಾರು ಸಾವು ನೋವುಗಳನ್ನು ಅನುಭವಿಸಬೇಕಾಗುತ್ತದೆ ಎಂದರು.



## 'ಅಪರಿಚಿತೆ' ಚಿತ್ರದ ಟ್ರೇಲರ್ ಅನಾವರಣ

ಈ ಮೊದಲು 'ತಾಯವ್ವ' ಎಂಬ ಸಿನಿಮಾದಲ್ಲಿ ನಟಿಸಿದ್ದ, ಗೀತಪ್ರಿಯ ಸುರೇಶ್ ಕುಮಾರ್ ಇದೀಗ ಮತ್ತೊಂದು ಚಿತ್ರದಲ್ಲಿ ಅಭಿನಯಿಸಿದ್ದಾರೆ. ಆ ಚಿತ್ರದ ಹೆಸರು 'ಅಪರಿಚಿತೆ'. ಇತ್ತೀಚೆಗೆ ಈ ಚಿತ್ರದ ಟ್ರೇಲರ್ ಅನಾವರಣ ಸಮಾರಂಭ ನಗರದ ಖಾಸಗಿ ಹೋಟೆಲ್‌ನಲ್ಲಿ ಅದ್ದೂರಿಯಾಗಿ ನೆರವೇರಿತು. ಮಾಜಿ ಮುಖ್ಯಮಂತ್ರಿ, ಮಾಜಿ ಬಿ.ಜೆ.ಪಿ ರಾಜ್ಯಾಧ್ಯಕ್ಷ ಹಾಗೂ ಮಾಜಿ ಕೇಂದ್ರ ಸಚಿವರಾದ ಡಿ.ವಿ.ಸದಾನಂದ ಗೌಡ ಟ್ರೇಲರ್ ಅನಾವರಣ ಮಾಡಿದರು. ಸದಾನಂದ ಗೌಡ ಅವರ ಪತ್ನಿ ಡಾಟಿ ಸದಾನಂದ ಗೌಡ ಹಾಗೂ ನಟಿ ತಾರಾ ಅನುರಾಧ ಕೂಡ ಮುಖ್ಯ ಅತಿಥಿಗಳಾಗಿ ಆಗಮಿಸಿದ್ದರು. ನಟಿ ತಾರಾ "ಅಪರಿಚಿತೆ" ಹಾಡೊಂದನ್ನು ಬಿಡುಗಡೆ ಮಾಡಿದರು. ನಂತರ ಗಣ್ಯರು ಹಾಗೂ ಚಿತ್ರತಂಡದ ಸದಸ್ಯರು ಮಾತನಾಡಿದರು. ಗೀತಪ್ರಿಯ ಅವರು ಒಂದೊಳ್ಳೆ ಉದ್ದೇಶವಿಟ್ಟುಕೊಂಡು ಈ ಸಿನಿಮಾ ಮಾಡಿದ್ದಾರೆ. ನಾವು ಸಮಾಜಕ್ಕೆ ಏನಾದರೂ ಉತ್ತಮ ಸಂದೇಶ ಕೊಡಬೇಕಾದರೆ ಅದನ್ನು ಸುಲಭವಾಗಿ ತಲುಪಿಸುವ ಮಾರ್ಗ ಸಿನಿಮಾ. ಅಂತಹ ಸಿನಿಮಾ ಮೂಲಕ ಸಮಾಜಕ್ಕೆ ಉತ್ತಮ ಸಂದೇಶ ನೀಡುತ್ತಿರುವ ಗೀತಪ್ರಿಯ ಸುರೇಶ್ ಕುಮಾರ್ ಮತ್ತು ತಂಡಕ್ಕೆ ಶುಭವಾಗಲಿ ಎಂದು ಸದಾನಂದ ಗೌಡ ಅವರು ಹಾರೈಸಿದರು. ಡಾಟಿ ಸದಾನಂದ ಗೌಡ ಹಾಗೂ ತಾರಾ ಅನುರಾಧ ಸಹ ಚಿತ್ರತಂಡಕ್ಕೆ ಶುಭ ಕೋರಿದರು. 1985ರಲ್ಲಿ ನಾನು ಹಾಗೂ ನನ್ನ ಪತಿ ಸೇರಿ ಶಿಕ್ಷಣ ಸಂಸ್ಥೆ ಆರಂಭಿಸಿದ್ದೆವು. ಹತ್ತು ಜನರಿಂದ ಆರಂಭವಾದ ಈ ಸಂಸ್ಥೆಯಲ್ಲಿ ಈಗ ಹತ್ತು ಸಾವಿರ ಜನ ವ್ಯಾಸಂಗ ಮಾಡುತ್ತಿದ್ದಾರೆ. ಈ ಹಿಂದೆ "ತಾಯವ್ವ" ಎಂಬ ಚಿತ್ರದಲ್ಲಿ ನಟಿಸಿದ್ದೆ. ಈಗ "ಅಪರಿಚಿತೆ" ಎಂಬ ಚಿತ್ರದಲ್ಲಿ ಅಭಿನಯಿಸಿದ್ದೇನೆ. ನನ್ನ ಪತಿ ಸುರೇಶ್ ಕುಮಾರ್ ಅವರೇ ಈ ಚಿತ್ರ ನಿರ್ಮಾಣ ಮಾಡಿದ್ದಾರೆ. ನಾನು ಜವಾಬ್ದಾರಿಯುತ ಶಿಕ್ಷಕಿಯ ಪಾತ್ರದಲ್ಲಿ ಕಾಣಿಸಿಕೊಂಡಿದ್ದೇನೆ ಎಂದರು.



## 'ಧರ್ಮಂ' ಚಿತ್ರದ ಟ್ರೈಲರ್ ಬಿಡುಗಡೆ

'ಜಾತಿಯಲ್ಲಿ ಹಿಂದುಳಿಯುದಲ್ಲ.. ಜೀವನದಲ್ಲಿ ಮುಂದೆ ಬರದಂತೆ ನೋಡಿಕೊಳ್ಳಬೇಕು. ಇಲ್ಲಿ ನ್ಯಾಯ ನೀತಿ ಧರ್ಮಕ್ಕೆ ಬೆಲೆ ಇಲ್ಲ...' ಅವ್ನಾ ಉಸಿರಾಡೋಕೆ ಬಿಟ್ಟರೆ ನಮಗೇ ತೊಂದರೆ..'ಧರ್ಮ ಉಳಿಬೇಕಂದ್ರೆ ..ನಿನ್ನ ಜಾತಿ ಸಾಯಬೇಕು..' ಹಳ್ಳಿಯ ಹಿನ್ನೆಲೆಯಲ್ಲಿ ರಗಡ್ ಲುಕ್‌ನಲ್ಲಿರುವ 'ಧರ್ಮಂ' ಚಿತ್ರದ ಖಡಕ್ ಸಂಭಾಷಣೆ ಇರುವ ಟ್ರೈಲರ್‌ನಲ್ಲಿ ಶೋಷಣೆ, ದಬ್ಬಾಳಿಕೆ, ಸೇರಿದಂತೆ ಆಕ್ಷನ್ ಸನ್ನಿವೇಶ ಹದಗೊಳಿಸಿ ಚಿತ್ರವನ್ನು ತೆರೆಗೆ ಕಟ್ಟಿಕೊಡಲಾಗಿದ್ದು ಡಿಸೆಂಬರ್ 5ರಂದು ಚಿತ್ರ ತೆರೆಗೆ ಬರಲಿದ್ದು ಚಿತ್ರದ ಬಗ್ಗೆ ಮತ್ತಷ್ಟು ಕುತೂಹಲ ಕೆರಳಿಸಿದೆ. 'ಧರ್ಮಂ' ಚಿತ್ರದ ಟ್ರೈಲರ್ ಅನ್ನು ನಿರ್ದೇಶಕ ತರುಣ್ ಕಿಶೋರ್ ಸುಧೀರ್ ಬಿಡುಗಡೆ ಮಾಡಿ ಶುಭ ಹಾರೈಸಿದರು. ಈ ವೇಳೆ ಚಿತ್ರದ ಹಾಡುಗಳ ಪ್ರದರ್ಶನ ಹಮ್ಮಿಕೊಳ್ಳಲಾಗಿತ್ತು ಮುಖ್ಯ ಅತಿಥಿಯಾಗಿ ಆಗಮಿಸಿದ್ದ ನಿರ್ದೇಶಕ ತರುಣ್ ಕಿಶೋರ್ ಸುಧೀರ್ ಮಾತನಾಡಿ ಪವರ್ ಫುಲ್ ಶೀರ್ಷಿಕೆ, ಡುಯೆಟ್ ಹಾಡು ನೋಡಿ ಚಿತ್ರದ ಬಗ್ಗೆ ಆಕರ್ಷಿತನಾಗಿದ್ದೆ. ಚಿತ್ರದ ಛಾಯಾಗ್ರಾಹಕನಿಗೆ ಒಳ್ಳೆಯ ಭವಿಷ್ಯವಿದೆ. ಟ್ರೈಲರ್ ನೋಡಿದಾಗಲೇ ಚಿತ್ರವನ್ನು ಹಿಡಿದು ಕೂಡಿಸಲಿದೆ. 80ರ ದಶಕದ ಚಿತ್ರವನ್ನು ಅತ್ಯುತ್ತಮವಾಗಿ ಕಟ್ಟಿಕೊಟ್ಟಿದ್ದೀರಿ. ಚಿತ್ರಕ್ಕೆ ನೀವೂ ಒಬ್ಬ ನಾಯಕ. ನಾಯಕಿ ವಿರಾಣಿಕ ಶೆಟ್ಟಿ ಮತ್ತು ನಾಯಕ ಸಾಯಿ ಶಶಿಕುಮಾರ್ ಉತ್ತಮವಾಗಿ ನಟಿಸಿದ್ದಾರೆ. ಧರ್ಮಂ ಚಿತ್ರದ ವಿಷಯವನ್ನು ಯಾವುದೇ ಪೂರ್ವಾಗ್ರಹ ಪೀಡಿತವಿಲ್ಲದೆ ಚಿತ್ರವನ್ನು ತೆರೆಗೆ ಕಟ್ಟಿಕೊಡಬೇಕು. ನಾವೂ ಕೂಡ ಕಾಟೇರ ಚಿತ್ರವನ್ನು ಇದೇ ರೀತಿ ಮಾಡಿದ್ದೆವು ಒಳ್ಳೆಯದಾಗಲಿ ಎಂದು ಹಾರೈಸಿದರು. ಜನಕ್ಕೆ ಒಳ್ಳೆಯ ಸಿನಿಮಾ ಕೊಡಬೇಕು. ಅವನಿಗೆ ನಂಬಿಕೆ ಬರುವ ಸಿನಿಮಾಕೊಟ್ಟರೆ ಚಿತ್ರಮಂದಿರಕ್ಕೆ ಬರುತ್ತಾರೆ.



## ಬಾಲಯ್ಯ ಅಖಂಡ-2 ಟ್ರೇಲರ್ ಲಾಂಚ್...ಶಿವಣ್ಣ ಶುಭ ಹಾರೈಕೆ

ನಂದಮೂರಿ ಬಾಲಕೃಷ್ಣ ನಟನೆಯ ಬಹುನಿರೀಕ್ಷಿತ ಸಿನಿಮಾ ಅಖಂಡ-2. ಅಖಂಡ ಚಿತ್ರದ ಮುಂದುವರಿದ ಭಾಗವಾಗಿರುವ ಅಖಂಡ ಸೀಕ್ವೆಲ್ ಟ್ರೇಲರ್ ಬಿಡುಗಡೆ ಕಾರ್ಯಕ್ರಮ ಅದ್ಧೂರಿಯಾಗಿ ನಡೆದಿದೆ. ಚಿಕ್ಕಬಳ್ಳಾಪುರದ ಚಿಂತಾಮಣಿಯ ಚಿನ್ನಸಂದ್ರ ಬಳಿ ಬೃಹತ್ ವೇದಿಕೆ ಹಾಕಿ ಟ್ರೇಲರ್ ರಿಲೀಸ್ ಮಾಡಲಾಯಿತು. ದೊಡ್ಡ ತಾರಾಬಳಗವೇ ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು. ಹ್ಯಾಟ್ರಿಕ್ ಹೀರೋ ಶಿವರಾಜ್ ಕುಮಾರ್ ವಿಶೇಷ ಅತಿಥಿಯಾಗಿ ಭಾಗಿ ಬಾಲಯ್ಯ ಚಿತ್ರಕ್ಕೆ ಶುಭ ಹಾರೈಸಿದರು. ಫೈಟ್ ಮಾಸ್ಟರ್ ರವಿವರ್ಮಾ, ಅಯ್ಯಪ್ಪ ಹಾಗೂ ಶರತ್ ಲೋಹಿತಾಶ್ವ ಸೇರಿದಂತೆ ಇಡೀ ಚಿತ್ರತಂಡ ಭಾಗಿಯಾಗಿತ್ತು. ಟ್ರೇಲರ್ ಬಿಡುಗಡೆ ಬಳಿಕ ಶಿವಣ್ಣ ಮಾತನಾಡಿ, "ಬ್ರದರ್ ಸಿನಿಮಾದ ಟ್ರೇಲರ್ ಲಾಂಚ್ ಇವೆಂಟ್‌ಗೆ ಬಂದಿದ್ದೇನೆ. ನಾವು ಒಂದೇ ಕುಟುಂಬ. ಇವರ ತಂದೆ ನನಗೆ ದೊಡ್ಡಪ್ಪ. ಬಾಲಯ್ಯ ನನಗೆ ಅಣ್ಣ. ಇವರ ಕಾರ್ಯಕ್ರಮಕ್ಕೆ ಬರುವುದು ನಮಗೆ ಖುಷಿಯಾಗುತ್ತದೆ" ಎಂದರು. 'ಕನ್ನಡ ಜನತೆಗೆ ನಮಸ್ಕಾರ. ನನ್ನ ತಮ್ಮ ಶಿವಣ್ಣ, ನನ್ನ ಅಭಿಮಾನಿಗಳಿಗೆ ಹಾಗೆ ಕಾರ್ಯಕ್ರಮ ವೀಕ್ಷಣೆ ಮಾಡುತ್ತಿರುವ ಪ್ರೇಕ್ಷಕರಿಗೆ ಹೃದಯ ಪೂರ್ವಕ ಅಭಿನಂದನೆಗಳು. ನಮ್ಮ ಅಖಂಡ ಸಿನಿಮಾ ಕೇವಲ ತೆಲುಗು, ಕನ್ನಡ ಸಿನಿಮಾವಲ್ಲ. ಇದು ಪ್ಯಾನ್ ಇಂಡಿಯಾ ಸಿನಿಮಾ' ಎಂದು ನಟ ನಂದಮೂರಿ ಬಾಲಕೃಷ್ಣ ಹೇಳಿದರು. ಆ ಬಳಿಕ ಶಿವಣ್ಣ ತಮ್ಮದೇ ಚಿತ್ರದ ಡೈಲಾಗ್ ಹೇಳಿದರು. ನಂತರ ಬಾಲಯ್ಯ ಅವರು ತಮ್ಮ ಸ್ಟೈಲ್?ನಲ್ಲಿ ಡೈಲಾಗ್ ಬಿಟ್ಟರು. ಇದಕ್ಕೆ ನೆರೆದಿದ್ದ ಅಭಿಮಾನಿಗಳು ಸಿಳ್ಳೆ, ಚಪ್ಪಾಳೆ ಹಾಕಿದರು. ಬೋಯಪಾಟಿ ಶ್ರೀನು ನಿರ್ದೇಶನದ ಫ್ಯಾಂಟಸಿ ಆಕ್ಷನ್ ಥ್ರಿಲ್ಲರ್ ಸಿನಿಮಾ ಇದು.



## ಹೊಸವರ್ಷದ ಆರಂಭದಲ್ಲಿ 'ಸೀಟ್ ಎಡ್ಜ್' ತೆರೆಗೆ

ಇತ್ತೀಚೆಗಷ್ಟೇ ನಟ ಸಿದ್ದು ಮೂಲಿಮನಿ ನಾಯಕ ನಟನಾಗಿ ಅಭಿನಯಿಸಿದ್ದ 'ಲವ್ ಯು ಮುದ್ದು' ಚಿತ್ರ ತೆರೆಗೆ ಬಂದಿದೆ. ನೈಜ ಘಟನೆ ಆಧರಿಸಿ ತಯಾರಾದ 'ಲವ್ ಯು ಮುದ್ದು' ಚಿತ್ರಕ್ಕೆ ಪ್ರೇಕ್ಷಕರು ಮತ್ತು ವಿಮರ್ಶಕರಿಂದ ಉತ್ತಮ ಪ್ರತಿಕ್ರಿಯೆ ವ್ಯಕ್ತವಾಗುತ್ತಿದ್ದು, ಇದರ ಬೆನ್ನಲ್ಲೇ ನಾಯಕ ನಟ ಸಿದ್ದು ಮೂಲಿಮನಿ ಮತ್ತೊಂದು ನೈಜ ಘಟನೆ ಆಧರಿಸಿದ ಚಿತ್ರದ ಮೂಲಕ ಪ್ರೇಕ್ಷಕರ ಮುಂದೆ ಬರುವ ತಯಾರಿಯಲ್ಲಿದ್ದಾರೆ. ಹೌದು, 'ಲವ್ ಯು ಮುದ್ದು' ಚಿತ್ರದ ಬಳಿಕ ನಟ ಸಿದ್ದು ಮೂಲಿಮನಿ ನಾಯಕನಾಗಿ ಅಭಿನಯಿಸಿರುವ 'ಸೀಟ್ ಎಡ್ಜ್' ಚಿತ್ರ ಬಿಡುಗಡೆಗೆ ತಯಾರಾಗುತ್ತಿದೆ. ಅಂದಹಾಗೆ, 'ಸೀಟ್ ಎಡ್ಜ್' ಕನ್ನಡದ ಮತ್ತೊಂದು ನೈಜ ಘಟನೆಯಿಂದ ಪ್ರೇರಿತವಾದ ಚಿತ್ರ ಎಂಬುದು ಚಿತ್ರತಂಡದ ಮಾತು. ಯುವ ನಿರ್ದೇಶಕ ಚೇತನ್ ಶೆಟ್ಟಿ ನಿರ್ದೇಶನದಲ್ಲಿ ಮೂಡಿಬಂದಿರುವ 'ಸೀಟ್ ಎಡ್ಜ್' ಚಿತ್ರದಲ್ಲಿ ನಾಯಕ ನಟ ಸಿದ್ದು ಮೂಲಿಮನಿ ಯು-ಟ್ಯೂಬರ್ ಪಾತ್ರದಲ್ಲಿ ಕಾಣಿಸಿಕೊಂಡಿದ್ದಾರೆ. 'ಇಂಡಿಯನ್ ಪ್ಯಾರಾನಾರ್ಮಲ್ ಇನ್ವೆಸ್ಟಿಗೇಟರ್' ಉತ್ತರ ಭಾರತದ 'ಘೋಸ್ಟ್ ಹಂಟರ್' ಖ್ಯಾತಿಯ ಗೌರವ್ ತಿವಾರಿ ಅವರ ಜೀವನದಲ್ಲಿ ನಡೆದ ಕೆಲ ನೈಜ ಘಟನೆಗಳನ್ನು ಆಧರಿಸಿ 'ಸೀಟ್ ಎಡ್ಜ್' ಚಿತ್ರ ತಯಾರಾಗಿದೆ.



## ಈ ವಾರ ತೆರೆಗೆ 'ಪಾಠಶಾಲಾ'

ಕೆಲವು ವರ್ಷಗಳ ಹಿಂದೆ "ಗ್ಯಾಪಲ್ಲೊಂದು ಸಿನಿಮಾ" ಮಾಡಿ ನಂತರ "ಓಮಿನಿ" ಎಂಬ ಚಿತ್ರ ನಿರ್ದೇಶಿಸಿರುವ ಹೆದ್ದೂರ್ ಮಂಜುನಾಥ್ ಶೆಟ್ಟಿ ಈಗ "ಪಾಠಶಾಲಾ" ಎಂಬ ಚಿತ್ರ ನಿರ್ದೇಶನ ಮಾಡಿದ್ದಾರೆ. ಈ ಚಿತ್ರ ನವೆಂಬರ್ 28ರಂದು ಬಿಡುಗಡೆಯಾಗುತ್ತಿದೆ. "MS SQUARE MOVIES" ಲಾಂಛನದಲ್ಲಿ ನಾನು ಹಾಗೂ ನನ್ನ ಪತ್ನಿ ಪ್ರೀತಿ ಈ ಚಿತ್ರವನ್ನು ನಿರ್ಮಾಣ ಮಾಡಿದ್ದೇವೆ. ಹತ್ತಕ್ಕೂ ಅಧಿಕ ಸ್ನೇಹಿತರ ಸಹ ನಿರ್ಮಾಣ ಈ ಚಿತ್ರಕ್ಕಿದೆ. ತೀರ್ಥಹಳ್ಳಿ ತಾಲ್ಲೂಕಿನಲ್ಲೇ ಹೆಚ್ಚಿನ ಚಿತ್ರೀಕರಣ ಮಾಡಿದ್ದೇವೆ. ನಲವತ್ತಕ್ಕೂ ಆಧಿಕ ಮಕ್ಕಳು ಈ ಚಿತ್ರದಲ್ಲಿ ನಟಿಸಿದ್ದಾರೆ. ಮಕ್ಕಳಿಗೆ ತರಭೇತಿ ನೀಡಿ ಆನಂತರ ಚಿತ್ರೀಕರಣ ಮಾಡಲಾಯಿತು. ತೀರ್ಥಹಳ್ಳಿ ಆಸುಪಾಸಿನ ಮಕ್ಕಳೇ ಇದರಲ್ಲಿ ನಟಿಸಿದ್ದಾರೆ. ಹಿರಿಯರಾದ ಬಾಲಾಜಿ ಮನೋಹರ್, ಸುಧಾಕರ್ ಬನ್ನಂಜೆ, ಕಿರಣ್ ನಾಯಕ್, ನಟನ ಪ್ರಶಾಂತ್ ಮುಂತಾದವರು ಚಿತ್ರದ ತಾರಾಬಳಗದಲ್ಲಿದ್ದಾರೆ.



## ಮಹಾಶಿವರಾತ್ರಿಗೆ ನಿಖಿಲ್ ಸಿದ್ಧಾರ್ಥ್ ಚಿತ್ರ ರಿಲೀಸ್

ತೆಲುಗು ಚಿತ್ರರಂಗದ ಉದಯೋನ್ಮುಖ ನಟ ನಿಖಿಲ್ ಸಿದ್ಧಾರ್ಥ್ ನಟಿಸುತ್ತಿರುವ ಬಹುನಿರೀಕ್ಷಿತ ಸಿನಿಮಾ ಸ್ವಯಂಭು. ಟೈಟಲ್ ಹಾಗೂ ಮೇಕಿಂಗ್ ಮೂಲಕ ಕುತೂಹಲ ಹೆಚ್ಚಿಸಿರುವ ಈ ಚಿತ್ರದ ಬಿಡುಗಡೆ ದಿನಾಂಕ ಘೋಷಣೆಯಾಗಿದೆ. ಮಹಾಶಿವರಾತ್ರಿ ಅಂದರೆ 2026 ಫೆಬ್ರವರಿ 13ಕ್ಕೆ ವಿಶ್ವಾದ್ಯಂತ ಸ್ವಯಂಭು ಚಿತ್ರಮಂದಿರಗಳಿಗೆ ಎಂಟ್ರಿ ಕೊಡಲಿದೆ. ಸ್ಪೆಷಲ್ ವಿಡಿಯೋ ಮೂಲಕ ಚಿತ್ರತಂಡ ಶೂಟಿಂಗ್ ಮುಗಿಸಿರುವ ಬಗ್ಗೆ ಮಾಹಿತಿ ಹಂಚಿಕೊಂಡಿದೆ. ಬರೋಬ್ಬರಿ ಎರಡು ವರ್ಷದ ಜರ್ನಿ ಇದಾಗಿದ್ದು, 170 ದಿನಗಳ ಕಾಲ ಶೂಟಿಂಗ್ ನಡೆಸಲಾಗಿದೆ. ಅಂದಹಾಗೇ ಇದು ನಿಖಿಲ್ ಸಿದ್ಧಾರ್ಥ್ ಅವರ 20ನೇ ಚಿತ್ರ. ಪಿಕ್ಸೆಲ್ ಸ್ಟುಡಿಯೋ ಮೂಲಕ ಭುವನ್ ಹಾಗೂ ಶ್ರೀಕರ್ ಚಿತ್ರ ನಿರ್ಮಾಣ ಮಾಡುತ್ತಿದ್ದು, ಟ್ಯಾಗೋರೆ ಮಧು ಪ್ರಸ್ತುತಪಡಿಸುತ್ತಿದ್ದಾರೆ. ಸ್ವಯಂಭು ಎಂದರೆ ಸ್ವಯಂ ಹುಟ್ಟು ಎಂದರ್ಥ. ಸಹಸ್ರಮಾನಗಳ ಹಿಂದಿನ ಕಥೆ ಒಳಗೊಂಡಿರುವ ಸ್ವಯಂಭು ಸಿನಿಮಾ ನಿಖಿಲ್ ಸಿದ್ಧಾರ್ಥ್ ವೃತ್ತಿಜೀವನದ ಬಿಗ್ ಬಜೆಟ್ ಚಿತ್ರವಾಗಿದೆ. ಕೆಕೆ ಸೆಂಥಿಲ್ ಕುಮಾರ್ ಛಾಯಾಗ್ರಹಣ, ರವಿ ಬಸ್ರೂರ್ ಸಂಗೀತ, ವಿಜಯ್ ಕಾಮಿಸೆಟ್ಟಿ ಚಿತ್ರಕ್ಕೆ ಸಂಭಾಷಣೆಯನ್ನು ನೀಡಿದ್ದಾರೆ. ತಮ್ಮಿರಾಜು ಸಂಕಲನದ ಜವಾಬ್ದಾರಿ ಹೊತ್ತುಕೊಂಡಿದ್ದಾರೆ.



## ಚಂದನ್ ಕುಮಾರ್ ನಿರ್ದೇಶನ ನಟನೆಯ 'ಫ್ಲರ್ಟ್' ತೆರೆಗೆ

ನಟ ಚಂದನ್ ಕುಮಾರ್ ಪ್ರಥಮ ನಿರ್ದೇಶನದ ಬಹುನಿರೀಕ್ಷಿತ ಚಿತ್ರ ಫ್ಲರ್ಟ್ ನ. 28ರಂದು ರಾಜ್ಯಾದ್ಯಂತ ತೆರೆಕಾಣಲಿದೆ. ಚಂದನ್ ಕುಮಾರ್ ಈ ಚಿತ್ರಕ್ಕೆ ಆಕ್ಷನ್ ಕಟ್ ಹೇಳೋ ಜತೆಗೆ ನಾಯಕನಾಗೂ ನಟಿಸಿದ್ದಾರೆ. ಎವರೆಸ್ಟ್ ಪಿಕ್ಚರ್ಸ್ ಮೂಲಕ ನಿರ್ಮಾಣ ಸಹ ಮಾಡಿದ್ದಾರೆ. ಎ ಪ್ಯೂರ್ ಡವ್ ಸ್ಟೋರಿ ಎಂಬ ಅಡಿಬರಹ ಫ್ಲರ್ಟ್ ಚಿತ್ರಕ್ಕಿದ್ದು, ನಿಮಿಕಾ ರತ್ನಾಕರ್, ಅಕ್ಷತಾ ಬೋಪಣ್ಣ ನಾಯಕಿಯರಾಗಿ ನಟಿಸಿದ್ದಾರೆ.



## 'ನಾಯಿ ಇದೆ ಎಚ್ಚರಿಕೆ' ನ.28ರಂದು ತೆರೆಗೆ


ನಾಯಿ ಸಾಕಿರುವವರ ಮನೆಯ ಮುಂದೆ ಸಾಮಾನ್ಯವಾಗಿ ಕಾಣುವ ಪದ 'ನಾಯಿ ಇದೆ ಎಚ್ಚರಿಕೆ'. ಈಗ ಇದೇ ಚಿತ್ರದ ಶೀರ್ಷಿಕೆಯಾಗಿದೆ. ಚಿತ್ರಕ್ಕೆ ಈ ಶೀರ್ಷಿಕೆ ಏಕೆ?



ಎಂಬದನ್ನು ಸಿನಿಮಾದಲ್ಲೇ ನೋಡಬೇಕು. ಲಾವಣ್ಯ ಗದೆ ಅವರು ನಿರ್ಮಾಣ ಮಾಡಿರುವ ಈ ಚಿತ್ರದ ನಾಯಕನಾಗಿ ವೃತ್ತಿಯಲ್ಲಿ ವೈದ್ಯರಾಗಿರುವ ಡಾ॥ಲಿಲಾಮೋಹನ್ ಪಿವಿಆರ್ ಅಭಿನಯಿಸಿದ್ದಾರೆ. ಕಲಿ ಗೌಡ ಅವರು ನಿರ್ದೇಶಿಸಿದ್ದಾರೆ. ನನಗೂ ಚಿತ್ರರಂಗಕ್ಕೂ ಹದಿನೈದು ವರ್ಷಗಳ ನಂಟು. ಈ ಹಿಂದೆ 'ತನಿಖೆ' ಎಂಬ ಚಿತ್ರ ನಿರ್ದೇಶನ ಮಾಡಿದ್ದ ನನಗೆ ಇದು ಎರಡನೇ ನಿರ್ದೇಶನದ ಚಿತ್ರ. ಹಾರಾರ್ ಥ್ರಿಲ್ಲರ್ ಕಥಾಹಂದರ ಹೊಂದಿರುವ 'ನಾಯಿ ಇದೆ ಎಚ್ಚರಿಕೆ' ಚಿತ್ರ ಶೀರ್ಷಿಕೆಯಲ್ಲಿ ಎಷ್ಟು ಕುತೂಹಲ ಮೂಡಿಸಿದೆಯೊ ಅಷ್ಟೇ ಕುತೂಹಲ ಸಿನಿಮಾದಲ್ಲೂ ಇರುತ್ತದೆ. ಯಾರು ಊಹಿಸದ ರೋಚಕ ಸನ್ನಿವೇಶಗಳು ಈ ಚಿತ್ರದ ಹೈಲೆಟ್. ನಾಯಿ ನೀಯತ್ತಿನ ಪ್ರಾಣಿ ಎಂದು ಎಲ್ಲರಿಗೂ ಗೊತ್ತು. ಅದು ಬದುಕಿದಾಗಷ್ಟೇ ಅಲ್ಲ. ಸತ್ತ ಮೇಲೂ ಅದರ ನೀಯತ್ತು ಕಡಿಮೆ ಆಗಲ್ಲ ಎಂಬದನ್ನು ನಮ್ಮ ಚಿತ್ರದ ಮೂಲಕ ತೋರಿಸಿದ್ದೇವೆ ಎಂದರು.

## ಜನವರಿ 9ರಂದು ಪ್ಯಾನ್ ಇಂಡಿಯಾ ಮಟ್ಟದಲ್ಲಿ ತೆರೆಗೆ

ಟಾಲಿವುಡ್ ರೆಬಲ್ ಸ್ಟಾರ್ ಪ್ರಭಾಸ್ ನಾಯಕನಾಗಿ ನಟಿಸಿರುವ "ದಿ ರಾಜಾಸಾಬ್" ಸಿನಿಮಾ ಟ್ರೇಲರ್ ಮೂಲಕ ಕೌತುಕ ಸೃಷ್ಟಿಸಿದೆ. ಈ ಸಿನಿಮಾ ಮೇಲೆ ಬೆಟ್ಟದಷ್ಟು ನಿರೀಕ್ಷೆಗಳಿವೆ. ಪ್ಯಾನ್ ಇಂಡಿಯಾ ಮಟ್ಟದಲ್ಲಿ ಈ ಸಿನಿಮಾ ತೆರೆಗೆ ಬರುವುದರಿಂದ ಹಿಂದಿ ಬೆಲ್ಟ್‌ನಲ್ಲಿಯೂ ಈ ಚಿತ್ರಕ್ಕೆ ದೊಡ್ಡ ಡಿಮಾಂಡ್ ಸೃಷ್ಟಿಯಾಗಿದೆ. ಇದೀಗ ಸಿನಿಮಾದ ಪ್ರಚಾರ ಕೆಲಸದಲ್ಲಿಯೂ ಚಿತ್ರತಂಡ ಬಿಜಿಯಾಗಿದೆ. ಅದರಂತೆ ಇದೀಗ ಇದೇ ಚಿತ್ರದ "ರೆಬೆಲ್ ಸಾಬ್" ಹಾಡನ್ನು ಬಿಡುಗಡೆ ಮಾಡಿದೆ ಚಿತ್ರತಂಡ. ಪಕ್ಕಾ ಟಪ್ಪಾಂಗುಚ್ಚಿ ಶೈಲಿಯಲ್ಲಿ ಮೂಡಿಬಂದಿರುವ "ರೆಬಲ್ ಸಾಬ್" ಹಾಡಿನಲ್ಲಿ ನಟ ಪ್ರಭಾಸ್ ಸಖತ್ ಸ್ಟೈಲಿಶ್ ಆಗಿ ಕಂಡಿದ್ದಾರೆ. ಕಲರ್ ಕಲರ್ ಶರ್ಟ್ ಧರಿಸಿ, ಹಾಡಿಗೆ ಮಸ್ತ್ ಮಸ್ತ್ ಡಾನ್ಸ್ ಮಾಡಿದ್ದಾರೆ. ಈ ಮೂಲಕ ಸಿನಿಮಾ ಮೇಲಿನ ನಿರೀಕ್ಷೆ ಮತ್ತಷ್ಟು ಹೆಚ್ಚಿದ್ದು, ಅಭಿಮಾನಿ ವಲಯದಲ್ಲಿ ಸಂಭ್ರಮ ಇಮ್ಮಡಿಯಾಗಿದೆ. ಅಂದಹಾಗೆ, "ದಿ ರಾಜಾಸಾಬ್" ಸಿನಿಮಾಕ್ಕೆ ಖ್ಯಾತ ಸಂಗೀತ ಸಂಯೋಜಕ ಥಮನ್ ಎಸ್. ಅವರು ಸಂಗೀತ ನೀಡಿದ್ದಾರೆ.




















KARAVALI THARANGINI Weekly Owned, Editor, Published & Printed by Lalithasri Preetham Rai No.2-64/54(12), Pushparaj Nilaya, Jayanagara, 3rd 'A' Maroli Village, Dakshina Kannada, Karnataka - 575005.
email: karavalitharangini@gmail.com, web: karavalitharangini.com ph: 9880109212 Printed at Bhima Samskruthi Printers & Publishers, No 1182 14th Main Road Prakash Nagar, Bengaluru Karnataka-560021